ಸಂಪುಟ: 14 Volume | ಸಂಚಿಕೆ: 110 Issue | ಪುಟಗಳು 08 Pages | ಬುಧವಾರ 05 ಆಗಸ್ಟ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೆಂಗಳೂರು | ಹುಬ್ಬಳ್ಳಿ | ಬೀದರ ಆವೃತ್ತಿ: ಕಲ್ಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ, ಬಾಗಲಕೋಟೆ, ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ನಮ್ಮ ಹಕ್ಕುಗಳಿಗಾಗಿ ಹೋರಾಡಲು ಎಲ್ಲಿ ಅವಕಾಶ ಇದೆಯೋ ಅಲ್ಲಿ ಪ್ರಜಾಪ್ರಭುತ್ವ ಇದೆ ಎಂದೇ ಅರ್ಥ.

–ರೋಜರ್ ನಾಶ್ ಬಾಲ್ಡಿವಿನ್



ತುಮಕೂರು ಜಿಲ್ಲೆ ತಿಪಟೂರು ತಾಲೂಕಿನಲ್ಲಿರುವ ಇತಿಹಾಸ ಪ್ರಸಿದ್ಧ ಐತಿಹಾಸಿಕ ನೊಣವಿನಕೆರೆ ಕಾಡಸಿದ್ದೇಶ್ವರ ಮಠಕ್ಕೆ ನೂತನ ಸಚಿವರಾದ ಶ್ರೀಯುತ ವಿಜಯಾನಂದ ಕಾಶಪ್ಪನವರ್ ಭೇಟಿ ನೀಡಿ ಆಶೀರ್ವಾದ ಪಡೆದುಕೊಂಡರು.


## ಪಕ್ಷ ಸಂಘಟನೆ ಕುರಿತು ಎಐಸಿಸಿ ವೀಕ್ಷಕರೊಂದಿಗೆ ಚರ್ಚೆ



**ಬೀದರ್:** ಜಿಲ್ಲಾ ಪ್ರವಾಸದಲ್ಲಿರುವ ಎಐಸಿಸಿ ವೀಕ್ಷಕರಾದ ಶ್ರೀ ರಾಜೇಶ್ ಲಲ್ಲೂತಿ ಅವರನ್ನು ಬೀದರ ಲೋಕಸಭಾ ಕ್ಷೇತ್ರದ ಸಂಸದ ಸಾಗರ್ ಈಶ್ವರ ಖಂಡ್ರೆ ಅವರು ಇಂದು ಭೇಟಿ ಮಾಡಿ ಮಹತ್ವದ ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ ಬೀದರ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಸಂಘಟನೆ, ಬೂತ್ ಮಟ್ಟದ ಕಾರ್ಯವೈಖರಿ, ಸದಸ್ಯತ್ವ ವಿಸ್ತರಣೆ, ಯುವ ಕಾಂಗ್ರೆಸ್, ಮಹಿಳಾ ಕಾಂಗ್ರೆಸ್, ಎನ್‌ಎಸ್‌ಯುಐ ಸೇರಿದಂತೆ ಪಕ್ಷದ ವಿವಿಧ ಘಟಕಗಳನ್ನು ಮತ್ತಷ್ಟು ಸಕ್ರಿಯಗೊಳಿಸುವ ಕುರಿತು ಸಮಗ್ರವಾಗಿ ಚರ್ಚಿಸಲಾಯಿತು. ಮುಂಬರುವ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡು ಪಕ್ಷವನ್ನು ತಳಮಟ್ಟದಿಂದ ಇನ್ನಷ್ಟು ಸದೃಢಗೊಳಿಸುವುದು, ಕಾರ್ಯಕರ್ತರನ್ನು ಸಂಘಟಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕಾರ್ಯಕ್ರಮಗಳ ಕುರಿತು ಅಭಿಪ್ರಾಯ ವಿನಿಮಯ ನಡೆಯಿತು.



ಕೆಪಿಸಿಸಿ ಅಧ್ಯಕ್ಷರಾದ ಬಿ ಕೆ ಹರಿಪ್ರಸಾದ್ ಅವರನ್ನು ನೂತನ ಸಚಿವರಾದ ಸಂತೋಷ್ ಲಾಡ್ ಅವರು ಸದಾಶಿವನಗರದ ನಿವಾಸದಲ್ಲಿ ಭೇಟಿ ಮಾಡಿ ಧನ್ಯವಾದ ಸಲ್ಲಿಸಿದರು.



ದಿ ಮೈಸೂರು ಎಲೆಕ್ಟ್ರಿಕಲ್ ಇಂಡಸ್ಟ್ರೀಸ್ ಲಿ. ವತಿಯಿಂದ ಸರ್ಕಾರಕ್ಕೆ 2025–26 ನೇ ಸಾಲಿನ ಮಧ್ಯಂತರ ಡಿವಿಡೆಂಡ್ ಚೆಕ್ ಮೂಲಕ 1 ಕೋಟಿ ರೂಪಾಯಿ ಅನ್ನು ಸಿಎಂ ಡಿ. ಕೆ. ಶಿವಕುಮಾರ್‌ಗೆ ಇಂಧನ ಸಚಿವ ಕೆ ಜೆ ಜಾರ್ಜ್ ಅವರು ವಿಧಾನಸೌಧದಲ್ಲಿ ಮಂಗಳವಾರ ಹಸ್ತಾಂತರಿಸಿದರು.

## ಎಚ್.ಕೆ. ಪಾಟೀಲರಿಗೆ ಡಿಸಿಎಂ ಸ್ಥಾನಕ್ಕೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಸಚಿವ ಎಚ್.ಕೆ. ಪಾಟೀಲ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವ ಮೂಲಕ ಉತ್ತರ ಕರ್ನಾಟಕಕ್ಕೆ ನ್ಯಾಯ ಒದಗಿಸಬೇಕು ಎಂದು ಅವರ ಅಭಿಮಾನಿಗಳು ಹಾಗೂ ಬೆಂಬಲಿಗರು ಒತ್ತಾಯಿಸಿದ್ದಾರೆ.

ಉತ್ತರ ಕರ್ನಾಟಕ ರಾಜ್ಯದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡುತ್ತಿದ್ದರೂ, ಉನ್ನತ ರಾಜಕೀಯ ಹುದ್ದೆಗಳ ವಿಷಯದಲ್ಲಿ ಈ ಭಾಗಕ್ಕೆ ಸೂಕ್ತ ಪ್ರಾತಿನಿಧ್ಯ ದೊರೆಯುತ್ತಿಲ್ಲ ಎಂಬ ಅಭಿಪ್ರಾಯವನ್ನು ಅವರು ವ್ಯಕ್ತಪಡಿಸಿದರು. ಎಚ್.ಕೆ. ಪಾಟೀಲ ಅವರು ದೀರ್ಘಕಾಲದ ರಾಜಕೀಯ ಅನುಭವ ಹೊಂದಿದ್ದು, ಆಡಳಿತದಲ್ಲಿ ಸಮರ್ಥ ನಾಯಕತ್ವ ಪ್ರದರ್ಶಿಸಿದ್ದಾರೆ. ಆದ್ದರಿಂದ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಿದರೆ ಉತ್ತರ ಕರ್ನಾಟಕದ ಜನರ ಆಶಯಕ್ಕೆ ಗೌರವ ನೀಡಿದಂತಾಗುತ್ತದೆ ಎಂದು ತಿಳಿಸಿದ್ದಾರೆ. ಪ್ರದೇಶದ ಸಮಗ್ರ ಅಭಿವೃದ್ಧಿ, ನೀರಾವರಿ, ಕೈಗಾರಿಕೆ, ಉದ್ಯೋಗ ಹಾಗೂ



ಮೂಲಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ವೇಗ ಸಿಗಲು ಉತ್ತರ ಕರ್ನಾಟಕಕ್ಕೆ ಬಲಿಷ್ಠ ನಾಯಕತ್ವ ಅಗತ್ಯವಾಗಿದೆ ಎಂದು ಅಭಿಮಾನಿಗಳು ಅಭಿಪ್ರಾಯಪಟ್ಟಿದ್ದಾರೆ. ರಾಜ್ಯದ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಹೈಕಮಾಂಡ್ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ, ಎಚ್.ಕೆ. ಪಾಟೀಲ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವ ಮೂಲಕ ಉತ್ತರ ಕರ್ನಾಟಕದ ಜನರ ಬಹುಕಾಲದ ಬೇಡಿಕೆಯನ್ನು ಈಡೇರಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

## ಬಾಲಾಜಿ ದೇವಸ್ಥಾನಕ್ಕೆ ₹3 ಲಕ್ಷ ಅನುದಾನ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ಹುಮನಾಬಾದ್ ಪಟ್ಟಣದ ಬಾಲಾಜಿ ದೇವಸ್ಥಾನದ ಅಭಿವೃದ್ಧಿಗಾಗಿ ಮಾಜಿ ಸಚಿವ ರಾಜಶೇಖರ ಬಿ.ಪಾಟೀಲ ಅವರು ಈ ಹಿಂದೆಯೇ ₹3 ಲಕ್ಷ ಅನುದಾನವನ್ನು ಮಂಜೂರು ಮಾಡಿಸಿದ್ದರು. ದೇವಸ್ಥಾನದ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಭಕ್ತರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ಉದ್ದೇಶದಿಂದ ಈ ಅನುದಾನ ಒದಗಿಸಲಾಗಿತ್ತು.

ಬಾಲಾಜಿ ದೇವಸ್ಥಾನ ಅಂದಿನ ಕಾರ್ಯದರ್ಶಿ ಬಿಜೆಪಿ ಮುಖಂಡ ದಿವಂಗತ ರಾಜು ಚವ್ಹಾಣ ರವರು ಅಂದಿನ ಶಾಸಕರಾಗಿದ್ದ ರಾಜಶೇಖರ ಪಾಟೀಲ ರವರಿಗೆ ಮನವಿ ಸಲ್ಲಿಸಿದ್ದರು. ಅದರಂತೆ ಅವರು ಮುಜರಾಯಿ ಇಲಾಖೆಯಿಂದ ರು. 3 ಲಕ್ಷ ಮಂಜೂರಿ ಮಾಡಿಸಿದ್ದಾರೆ. ಧಾರ್ಮಿಕ ಕ್ಷೇತ್ರಗಳ ಅಭಿವೃದ್ಧಿಗೆ ಸದಾ ಆದ್ಯತೆ ನೀಡಿರುವ ರಾಜಶೇಖರ ಪಾಟೀಲ



ಅವರು ತಮ್ಮ ಅಧಿಕಾರಾವಧಿಯಲ್ಲಿ ಹುಮನಾಬಾದ್ ವಿಧಾನ ಸಭಾ ಕ್ಷೇತ್ರದಲ್ಲಿ ಹಲವು ದೇವಸ್ಥಾನಗಳು ಹಾಗೂ ಸಾರ್ವಜನಿಕ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ಒದಗಿಸಿ ಜನೋಪಯೋಗಿ ಕಾರ್ಯಗಳನ್ನು ಕೈಗೊಂಡಿದ್ದಾರೆ ಎಂದು ಸ್ಥಳೀಯರು ಸ್ಮರಿಸುತ್ತಿದ್ದಾರೆ. ಹುಮನಾಬಾದ್ ಬಾಲಾಜಿ ದೇವಸ್ಥಾನಕ್ಕೆ ನೀಡಿದ ₹3 ಲಕ್ಷ ಅನುದಾನವೂ ಅದಕ್ಕೆ ಒಂದು ಉದಾಹರಣೆಯಾಗಿದೆ.

# ಸಂಪುಟ ಅಸಹನೆ ಸ್ಫೋಟ

## ಸಚಿವ ಸಂಪುಟ ವಿಸ್ತರಣೆ ಬಳಿಕ ಕಾಂಗ್ರೆಸ್‌ನಲ್ಲಿ ಅಸಮಾಧಾನ | ಕೆಲವರ ರಾಜೀನಾಮೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ವಿಸ್ತರಣೆ ಬಳಿಕ, ಕರ್ನಾಟಕ ಕಾಂಗ್ರೆಸ್‌ನಲ್ಲಿ ಅಸಮಾಧಾನ ಸ್ಫೋಟಗೊಂಡಿದೆ. ಇದಕ್ಕೆ ಪ್ರತಿಪಕ್ಷ ಬಿಜೆಪಿ, ಮುಂಬರುವ ದಿನಗಳಲ್ಲಿ ಆಡಳಿತ ಪಕ್ಷದಲ್ಲಿ ಮತ್ತಷ್ಟು ಜ್ವಾಲಾಮುಖಿಗಳು ಬಾಯ್ತೆರೆಯಲಿವೆ ಎಂದು ಭವಿಷ್ಯ ನುಡಿದಿದೆ.


**ಆಂತರಿಕ ಬಂಡಾಯದ ದಿನಗಳು:** ಕಾಂಗ್ರೆಸ್ ಸರ್ಕಾರದ ಸಚಿವ ಸಂಪುಟ ವಿಸ್ತರಣೆ ಬಗ್ಗೆ ಸರಣಿ ಎಕ್ಸ್ ಪೋಸ್ಟ್‌ಗಳನ್ನು ಮಾಡಿರುವ ಕರ್ನಾಟಕ ಬಿಜೆಪಿ ಘಟಕ, ಈ ಬೆಳವಣಿಗೆಗಳನ್ನು ಕಾಂಗ್ರೆಸ್‌ನ ಆಂತರಿಕ ಬಂಡಾಯದ ಆರಂಭದ ದಿನಗಳು ಎಂದು ವಿಶ್ಲೇಷಿಸಿದೆ. ಮಾಜಿ ಸಿಎಂ ಸಿದ್ದರಾಮತ್ತ ಮತ್ತು ಸಿಎಂ ಡಿಕೆಶಿ ನಡುವಿನ ರಾಜಕೀಯ ಕಾಳಗ ತೀವ್ರ ಸ್ವರೂಪ ಪಡೆದುಕೊಳ್ಳಲಿದೆ ಎಂದಿದೆ.

**ಸಿದ್ದರಾಮಯ್ಯ ಏಕೆ ಬರಲಿಲ್ಲ?:** ನೂತನ ಸಚಿವರ ಪ್ರಮಾಣವಚನ ಸಮಾರಂಭಕ್ಕೆ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಗೈರು ಹಾಜರಾಗಿದ್ದರು. ತಮ್ಮ ಸಮಾಜದ ಗಾಯತ್ರಿ ಶಾಂತ ಗೌಡರನ್ನು ಕೈ ಬಿಟ್ಟಿರುವುದಕ್ಕೆ ಸಿದ್ದರಾಮಯ್ಯ ಅಸಮಧಾನ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದ್ದು, ಹೈಕಮಾಂಡ್ ಮುಂದೆ ತಮ್ಮ ವಿರೋಧವನ್ನೂ ದಾಖಲಿಸಿದ್ದಾರೆ ಎಂದು ಅವರ ಆಪ್ತ ಮೂಲಗಳು ತಿಳಿಸಿವೆ.











### ಕೈ ಆಂತರಿಕ ಬಂಡಾಯ

ಸಚಿವ ಸಂಪುಟ ವಿಸ್ತರಣೆ ಬೆನ್ನಲ್ಲೇ ಕಾಂಗ್ರೆಸ್ನಲ್ಲಿ ಬಂಡಾಯ ಭುಗಿಲೆದ್ದಿದೆ. ಸಚಿವ ಸ್ಥಾನ ದೊರೆಯದ ಕಾರಣಕ್ಕೆ ಅನೇಕ ನಾಯಕರು ಕೆಂಡಾಮಂಡಲರಾಗಿದ್ದಾರೆ. ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಬೇಳೂರು ಗೋಪಾಲಕೃಷ್ಣ ಘೋಷಣೆ ಮಾಡಿದ್ದಾರೆ. ಇಂಡಿ ಶಾಸಕ ಯಶವಂತರಾಯ್ ಗೌಡ ಪಾಟೀಲ್ ಈಗಾಗಲೇ ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

### ಭವಿಷ್ಯದ ಸಸ್ಪೆನ್ಸ್..?

ಸಚಿವ ಸ್ಥಾನ ಕೈತಪ್ಪಿದ್ದು, ಕೆಲವು ಕೈ ನಾಯಕರು ಬಹಿರಂಗವಾಗಿಯೇ ತಮ್ಮ ಅಸಮಾಧಾನ ಹೊರಹಾಕಿದ್ದಾರೆ. ದಿನೇಶ್ ಗುಂಡೂರಾವ್ ಅತೃಪ್ತಿ ವ್ಯಕ್ತಪಡಿಸಿದ್ದು, ಇಂಡಿಯ ಯಶವಂತರಾಯ್ ಗೌಡ ಪಾಟೀಲ್ ಶಾಸಕ ಸ್ಥಾನಕ್ಕೆ ರಿಸೈನ್ ಮಾಡಿದ್ದಾರೆ. ಬೇಳೂರು ಗೋಪಾಲಕೃಷ್ಣ ತಮ್ಮ ರಾಜೀನಾಮೆ ನಿರ್ಧಾರದಿಂದ ಹೊರಬಂದಿದ್ದಾರೆ. ಭವಿಷ್ಯದಲ್ಲಿ ಏನಾಗಲಿದೆ ಅನ್ನೋದೇ ಸಸ್ಪೆನ್ಸ್.

### ಮುಂದುವರಿದ ಗೊಂದಲ

ಮೈಸೂರಿನಲ್ಲಿ ತನ್ವೀರ್ ಸೇಠ್ ಬೆಂಬಲಿಗರು, ಬೆಳಗಾವಿಯಲ್ಲಿ ಲಕ್ಷ್ಮೀ ಹೆಬ್ಬಾಳ್ಕರ್ ಬೆಂಬಲಿಗರು, ರಾಮದುರ್ಗದಲ್ಲಿ ಅಶೋಕ್ ಪಟ್ಟಣ್ ಬೆಂಬಲಿಗರು ಈಗಾಗಲೇ ಪ್ರತಿಭಟನೆಗಳನ್ನು ನಡೆಸಿದ್ದಾರೆ. ಮಂಕಾಳ್ ವೈದ್ಯ, ಗಾಯತ್ರಿ ಶಾಂತೇಗೌಡ ಹೆಸರನ್ನು ಕೈಬಿಟ್ಟು ಎನ್.ಎಸ್.ಬೋಸರಾಜು ಹೆಸರನ್ನು ಸೇರ್ಪಡೆ ಮಾಡಲಾಯಿತು. ಆದರೂ ಗೊಂದಲ ಮುಂದುವರಿದೆ.

### ರಾಜೀನಾಮೆ ಕೊಟ್ರೆ ಓಕೆ

ರಾಜೀನಾಮೆ ರಾಜಕೀಯದ ಒಂದು ಭಾಗ. ಪಕ್ಷ ಮತ್ತು ರಾಜಕೀಯ ಭವಿಷ್ಯ ಬೇಕಾದರೆ ಅವರು ಅಲ್ಲಿಯೇ ಇರತ್ತಾರೆ. ಪಕ್ಷವಿದ್ದರೆ ಉಳಿದೆಲ್ಲವೂ ಸಿಗುತ್ತೆ. ಎಂದಿದ್ದು, ಇದೇ ವೇಳೆ, ಒಂದು ವೇಳೆ ಯಾರಾದರೂ ರಾಜೀನಾಮೆ ಸಲ್ಲಿಸಿದರೆ, ಅವರ ರಾಜೀನಾಮೆಯನ್ನು ನಾನು ಕೆಲವೇ ಕ್ಷಣಗಳಲ್ಲಿ ಅಂಗೀಕರಿಸುತ್ತೇನೆ ಎಂಬ ಸಂದೇಶ ನೀಡಿದ್ದಾರೆ ಸಿಎಂ.

## ಬಿಡದಿ ಟೌನ್‌ಶಿಪ್ ಯೋಜನೆ: ರೈತರ ಪರ ಜೆಡಿಎಸ್ ಕಾನೂನು ಹೋರಾಟಕ್ಕೆ ಜಯ

• ಮಲ್ಲಮ್ಮ ನುಡಿ ವಾರ್ತೆ ರಾಮನಗರ



ರೈತರ ಪರವಾಗಿ ಜೆಡಿಎಸ್ ಕಾನೂನು ಹೋರಾಟ ಆರಂಭಿಸಿತ್ತು. ಯೋಜನೆಗೆ ವಿರೋಧ ಇರುವ ರೈತರು ವಕಾಲತ್ತು ನೀಡಿದ್ದರು. ವಕಾಲತ್ತು ಹಾಕಿದ್ದ ರೈತರಿಗೆ ಇದೀಗ ತಾತ್ಕಾಲಿಕ ಜಯ ಸಿಕ್ಕಿದೆ. ಇದು ಟೌನ್ ಶಿಪ್ ವಿರುದ್ಧದ ಹೋರಾಟಕ್ಕೆ ಶುಭಸೂಚನೆಯಾಗಿದೆ.

ಈ ಕುರಿತು ರಾಮನಗರದಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಅವರು, ಬಿಡದಿ ಟೌನ್ ಶಿಪ್ ಯೋಜನೆ ವ್ಯಾಪ್ತಿಯ ರೈತರಿಗೆ ಕರ್ನಾಟಕ ಹೈಕೋರ್ಟ್ ತಾತ್ಕಾಲಿಕ ರಿಲೀಫ್ ನೀಡಿದೆ. ಪರಿಹಾರದ ಮೊತ್ತ ನಿಗದಿಯಾಗುವವರೆಗೂ ಭೂಸ್ವಾಧೀನ ಪ್ರಕ್ರಿಯೆಯನ್ನು ಮುಂದುವರಿಸದಂತೆ ಕೋರ್ಟ್ ಸರ್ಕಾರಕ್ಕೆ ಸೂಚಿಸಿದೆ ಎಂದು ತಿಳಿಸಿದರು.

ಇನ್ನುಳಿದ ಗ್ರಾಮಗಳ ರೈತರ ವಕಾಲತ್ತು ಪತ್ರಗಳನ್ನು ಸಹ ಕೋರ್ಟ್‌ಗೆ ಸಲ್ಲಿಸಲಾಗಿದ್ದು, ಈ ಶುಕ್ರವಾರ ಆ ಪ್ರಕರಣದ ವಿಚಾರಣೆ ನಡೆಯುವ ಸಾಧ್ಯತೆ ಇದೆ ಎಂದು ಅವರು ನಿಖಿಲ್ ಕುಮಾರಸ್ವಾಮಿ ಅವರು ಹೇಳಿದರು.

**2013ರ ಕಾಯ್ದೆ ಉಲ್ಲಂಘನೆ ಆರೋಪ:** ಸರ್ಕಾರವು ರೈತರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ಏಕಪಕ್ಷೀಯವಾಗಿ ಯೋಜನೆ ಜಾರಿಗೆ ಮುಂದಾಗಿದೆ ಎಂದು ಆರೋಪಿಸಿದ ನಿಖಿಲ್, "2013ರ ಭೂ ಸ್ವಾಧೀನ ಕಾಯ್ದೆಯ ಪ್ರಕಾರ ಈ ಯೋಜನೆ ಜಾರಿಯಾಗುತ್ತಿಲ್ಲ. ಆದರೂ ಅದೇ ಕಾಯ್ದೆಯನ್ನು ಉಲ್ಲೇಖಿಸಿ ಸರ್ಕಾರ ಮುಂದುವರೆಯುತ್ತಿದೆ. ಕೋರ್ಟ್ ಎಲ್ಲವನ್ನೂ ಗಮನಿಸುತ್ತಿದೆ. ಅಂತಿಮವಾಗಿ ರೈತರ ಪರವಾಗಿಯೇ ತೀರ್ಪು ಬರಲಿದೆ ಎಂಬ ವಿಶ್ವಾಸ ನಮಗಿದೆ" ಎಂದರು.

ಟೌನ್ ಶಿಪ್ ಯೋಜನೆ ಜಾರಿಗೆ ಜಿಬಿಡಿಎ ಬಳಿ ಸಾಕಷ್ಟು ಹಣವೇ ಇಲ್ಲ ಎಂದು ದೂರಿದ ಅವರು, "ಬಿಎಂಆರ್‌ಡಿಎ ಆಸ್ತಿಯನ್ನು ಅಡಮಾನ ಇಟ್ಟು ಸ್ವಲ್ಪ ಹಣ ಸಂಗ್ರಹಿಸಲಾಗಿದೆ. ಸರ್ಕಾರದ ಬೊಕ್ಕಸವೂ ಖಾಲಿಯಾಗಿದೆ. ಕೆಲವರಿಗೆ ಚೆಕ್ ನೀಡಿ ರೈತರನ್ನು ಆಕರ್ಷಿಸುವ ತಂತ್ರ ಸರ್ಕಾರದ್ದು. ಆದರೆ ಯಾವುದೇ ಕಾರಣಕ್ಕೂ ರೈತರು ಭೂಮಿ ನೀಡುವುದಿಲ್ಲ" ಎಂದು ನಿಖಿಲ್ ಅವರು ಸ್ಪಷ್ಟಪಡಿಸಿದರು.

## ಕಾರಂಜಾ ಜಲಾಶಯಕ್ಕೂ ಕೆಮಿಕಲ್ ಕಂಟಕ..!

• ರಾಜ್‌ಕುಮಾರ್ ಹಡಪದ್, ಹುಮನಾಬಾದ್

ಪಟ್ಟಣದ ಹೊರ ವಲಯದ ಕೈಗಾರಿಕಾ ಪ್ರದೇಶದ ರಾಸಾಯನಿಕ ಕಾರ್ಖಾನೆಗಳಿಂದ ರಾಸಾಯನಿಕ ತ್ಯಾಜ್ಯ ಹಾಗೂ ಮಿಶ್ರಿತ ನೀರು ಹಳ್ಳಕ್ಕೆ ಬಿಡಲಾಗುತ್ತಿದೆ. ಇದು ಜಲಚಲ ಜೀವರಾಶಿಗೂ ವಿಷಪ್ರಾಶನವಾಗಿದೆ. ಮಾತ್ರವಲ್ಲ, ಬೀದರ್ ನಗರ, ಇತರೆ ಪಟ್ಟಣಗಳಿಗೂ ನೀರು ಪೂರೈಸುವ ಕಾರಂಜಾ ಜಲಾಶಯಕ್ಕೂ ಕಂಟಕವಾಗಿ ಪರಣಮಿಸಿದೆ ಎಂದು ಪರಿಸರವಾದಿಗಳು ಆರೋಪಿಸುತ್ತಿದ್ದಾರೆ.

**ತ್ಯಾಜ್ಯ ಕಾರಂಜಾ ಜಲಾಶಯಕ್ಕೆ ಸೇರಿದರೆ..!:** ಕಾರ್ಖಾನೆಗಳಲ್ಲಿ ಶೇಖರಿಸಿಟ್ಟ ರಾಸಾಯನಿಕ ತ್ಯಾಜ್ಯ ಸಂಪೂರ್ಣ ಹಳ್ಳಕ್ಕೆ ಬಿಡಲಾಗುತ್ತಿದ್ದು. ಪ್ರತಿವರ್ಷ ರಾಸಾಯನಿಕ ಮಿಶ್ರಿತ ತ್ಯಾಜ್ಯ ಕಾರಂಜಾ ಜಲಾಶಯಕ್ಕೆ ಸೇರಿದರೆ ರಾಸಾಯನಿಕ ಮಿಶ್ರಿತ ನೀರಿನಿಂದ ಭವಿಷ್ಯದಲ್ಲಿ ಅನೇಕ ಸಮಸ್ಯೆ ಎದುರಾಗಲಿವೆ.

**ರೈತರಿಗೂ ತಪ್ಪದ ಆತಂಕ:** ಪಟ್ಟಣ ಸೇರಿದಂತೆ ಮಾಣಿಕ ನಗರ, ಗಡವಂತಿ, ಧುಮ್ಮನಸೂರ, ಬಸವಂತಪೂರ ಹಾಗೂ ಮೊಳಕೇರಾ ಗ್ರಾಮದ ಜನರ ಆರೋಗ್ಯದ ಮೇಲೆ ಸಾಕಷ್ಟು ದುಷ್ಪರಿಣಾಮ ಬೀರುತ್ತಿದೆ. ಜಾನುವಾರುಗಳಿಗೆ ಮೇಯಿಸಲು ಹೊಲಗಳಿಗೆ ತೆಗೆದುಕೊಂಡು ಹೋದರೆ, ಇಲ್ಲಿ ಯಾವ ನೀರು ಕುಡಿಸಬೇಕು ಎಂಬ ಆತಂಕ ಇಲ್ಲಿನ ರೈತರಿಗೆ ಕಾಡುತ್ತಿದೆ.






### ಕೊಳವೆ ಬಾವಿಯಲ್ಲೂ ಕೆಮಿಕಲ್..!

ಪಟ್ಟಣದ ವ್ಯಾಪ್ತಿಯ ಸುತ್ತ ಮುತ್ತಲಿನ ತೆರೆದ ಬಾವಿ, ಕೊಳವೆ ಬಾವಿಯಲ್ಲೂ ರಾಸಾಯನಿಕ ಮಿಶ್ರಿತ ನೀರು ಬರುತ್ತದೆ. ಹೀಗಾಗಿ ಶುದ್ಧ ಕುಡಿಯುವ ನೀರಿಗೆ ಮತ್ತು ಉಸಿರಾಡುವ ಶುದ್ಧ ಗಾಳಿಗಾಗಿ ಇಲ್ಲಿನ ಜನರು ಪರದಾಡುವ ಪರಿಸ್ಥಿತಿ ಎದುರಾಗಿದೆ. ಈ ಸಮಸ್ಯೆ ಹೀಗೆ ಮುಂದುವರಿದರೆ ಭವಿಷ್ಯದ ಗತಿ ಏನು ? ಎಂಬುದು ಸ್ಥಳೀಯರಲ್ಲಿ ಆತಂಕ ಮನೆ ಮಾಡಿದೆ.

### ಬೃಹತ್ ಪ್ರತಿಭಟನೆಯ ಎಚ್ಚರಿಕೆ..!

ಜನ ಸಾಮಾನ್ಯರ ಮತ್ತು ಜಾನುವಾರಗಳ ಆರೋಗ್ಯ ಹಿತದೃಷ್ಟಿಯಿಂದ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಹಾಗೂ ಚುನಾಯಿತ ಜನಪ್ರತಿನಿಧಿಗಳು ಕಾನೂನು ಚೌಕಟ್ಟಿನಲ್ಲಿ ಶಾಶ್ವತ ಪರಿಹಾರ ನೀಡಬೇಕು. ಈ ಸಮಸ್ಯೆ ಬಗೆಹರಿಸುವಲ್ಲಿ ವಿಳಂಬ ನೀತಿ ಅನುಸರಿಸಿದರೆ ಸಾರ್ವಜನಿಕರು ಸೇರಿಕೊಂಡು ಬೃಹತ್ ಪ್ರತಿಭಟನೆ ಮಾಡಲಾಗುತ್ತದೆ ಎಂದು ಎಚ್ಚರಿಸಿದ್ದಾರೆ.




### ಇಲ್ಲಿನ ಸಮಸ್ಯೆಗಳಿಗೆ ಉತ್ತರ ಇಲ್ಲ..!

ಮಳೆಯ ನೀರಿನ ಜತೆಗೆ ರಾಸಾಯನಿಕ ಮಿಶ್ರಿತ ನೀರು ಹಳ್ಳಕ್ಕೆ ಬಿಡಲಾಗುತ್ತಿದೆ ಎಂಬ ಆರೋಪ ಸ್ಥಳೀಯರದ್ದು. ಈ ಕುರಿತು ಜನರು ಪ್ರತಿಭಟನೆಗೆ ಬಿದಿಗಿಳಿದರೆ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಹಾಗೂ ಚುನಾಯಿತ ಜನಪ್ರತಿನಿಧಿಗಳು ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡುತ್ತಾರೆ. ಆದರೆ, ಇಲ್ಲಿ ಯವರೆಗೂ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಮಾತ್ರ ಸಿಕ್ಕಿಲ್ಲ ಎಂದು ಸ್ಥಳೀಯ ನಿವಾಸಿಗಳು ಆಪಾದಿಸಿದ್ದಾರೆ.

## ರಾಜ್ಯದ ರೈತರಿಗೆ ತಕ್ಷಣ 10 ಸಾವಿರ ಕೋಟಿ ರೂ. ಪರಿಹಾರ ಬಿಡುಗಡೆ ಮಾಡಿ: ಬಿ.ವೈ. ವಿಜಯೇಂದ್ರ ಆಗ್ರಹ

# ಕೆಮಿಕಲ್ ಕಾರ್ಖಾನೆಗಳ ಸಮಗ್ರ ತನಿಖೆ ನಡೆದಾಗ ಮಾತ್ರ ಸತ್ಯ ಹೊರಬರುತ್ತದೆ

ಹುಮನಾಬಾದ್ ಕೈಗಾರಿಕಾ ಪ್ರದೇಶದಲ್ಲಿರುವ ಕೆಮಿಕಲ್ ಕಾರ್ಖಾನೆಗಳ ಬಗ್ಗೆ ತನಿಖೆ ನಡೆಸಬೇಕು.ಒಂದು ಪ್ರದೇಶದ ಅಭಿವೃದ್ಧಿ ಎಂದರೆ ಕೇವಲ ಕೈಗಾರಿಕೆಗಳ ಸ್ಥಾಪನೆಯಲ್ಲ. ಅಲ್ಲಿನ ಜನರ ಆರೋಗ್ಯ, ಪರಿಸರದ ಸಂರಕ್ಷಣೆ, ಶುದ್ಧ ನೀರು, ಕೃಷಿ ಹಾಗೂ ಜೀವಜಾಲದ ರಕ್ಷಣೆ ಕೂಡ ಅಭಿವೃದ್ಧಿಯ ಪ್ರಮುಖ ಅಂಶಗಳಾಗಿವೆ. ಕೈಗಾರಿಕೆಗಳು ಉದ್ಯೋಗ ನೀಡಬೇಕು, ಆದರೆ ಜನರ ಬದುಕನ್ನೇ ಅಪಾಯಕ್ಕೆ ತಳ್ಳುವಂತಾಗಬಾರದು.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ಒಂದು ಪ್ರದೇಶದಲ್ಲಿ ಕೆಮಿಕಲ್ ಕಾರ್ಖಾನೆಗಳಿಂದ ನೀರು, ಗಾಳಿ ಅಥವಾ ಮಣ್ಣು ಮಾಲಿನ್ಯಗೊಳ್ಳುತ್ತಿದೆ ಎಂಬ ಆರೋಪಗಳು ಕೇಳಿಬಂದಾಗ, ಸರ್ಕಾರ ಮತ್ತು ಸಂಬಂಧಪಟ್ಟ ಇಲಾಖೆಗಳು ತಕ್ಷಣ ಸಮಗ್ರ ಹಾಗೂ ಪಾರದರ್ಶಕ ತನಿಖೆ ನಡೆಸಬೇಕು. ಕೇವಲ ವರದಿಗಳ ಮೇಲೆ ಅವಲಂಬಿಸದೇ, ವೈಜ್ಞಾನಿಕ ಪರೀಕ್ಷೆಗಳು, ಸ್ಥಳ ಪರಿಶೀಲನೆ ಮತ್ತು ಸಾರ್ವಜನಿಕರ ಅಹವಾಲುಗಳನ್ನು ಪರಿಗಣಿಸಿ ಸತ್ಯಾಂಶವನ್ನು ಹೊರತರುವುದು ಅಗತ್ಯ.

ತನಿಖೆ ನಡೆದಾಗ ಮಾತ್ರ ನಿಜವಾದ ವಾಸ್ತವಾಂಶ ಬೆಳಕಿಗೆ ಬರುತ್ತದೆ. ಕಾರ್ಖಾನೆಗಳು ನಿಯಮ ಪಾಲಿಸುತ್ತಿವೆಯೇ? ಪರಿಸರ ಕಾನೂನುಗಳನ್ನು ಉಲ್ಲಂಘಿಸುತ್ತಿವೆಯೇ? ವಿಷಕಾರಿ ತ್ಯಾಜ್ಯವನ್ನು ಅಕ್ರಮವಾಗಿ ಹೊರಹಾಕಲಾಗುತ್ತಿದೆಯೇ? ಎಂಬ ಪ್ರಶ್ನೆಗಳಿಗೆ ಸ್ಪಷ್ಟ ಉತ್ತರ ಸಿಗುತ್ತದೆ. ತಪ್ಪಿತಸ್ಥರು ಇದ್ದರೆ ಅವರ ವಿರುದ್ಧ ಯಾವುದೇ ಒತ್ತಡಕ್ಕೆ ಮಣಿಯದೆ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು.

ಜನರ ಜೀವಕ್ಕಿಂತ ದೊಡ್ಡದು ಯಾವುದೇ ಉದ್ಯಮವಲ್ಲ. ಕೈಗಾರಿಕೆಗಳ ಅಭಿವೃದ್ಧಿಯ ಜೊತೆಗೆ ಪರಿಸರ ಸಂರಕ್ಷಣೆಯೂ ಸಮಾನವಾಗಿ ನಡೆಯಬೇಕು. ಸರ್ಕಾರ ಜನರ ವಿಶ್ವಾಸವನ್ನು ಉಳಿಸಿಕೊಳ್ಳಬೇಕಾದರೆ, ಇಂತಹ ಗಂಭೀರ ಆರೋಪಗಳನ್ನು ನಿರ್ಲಕ್ಷಿಸದೆ ಸ್ವತಂತ್ರ ಹಾಗೂ ನಿಷ್ಪಕ್ಷಪಾತ ತನಿಖೆಗೆ ಆದೇಶಿಸಬೇಕು.

ಸತ್ಯವನ್ನು ಮುಚ್ಚಿಡುವುದರಿಂದ ಸಮಸ್ಯೆ ಪರಿಹಾರವಾಗುವುದಿಲ್ಲ. ಸತ್ಯ ಹೊರಬಂದಾಗ ಮಾತ್ರ ನ್ಯಾಯ ಸಿಗುತ್ತದೆ; ನ್ಯಾಯ ಸಿಕ್ಕಾಗ ಮಾತ್ರ ಜನರ ವಿಶ್ವಾಸ ಉಳಿಯುತ್ತದೆ.

# ಕಳವಾಗಿದ್ದ 55 ಅಡುಗೆ ಅನಿಲ ಸಿಲಿಂಡರ್ ಜಪ್ತಿ ನಾಲ್ವರ ಬಂಧನ





**ಬೀದರ್:** ಜಿಲ್ಲೆಯ ಭಾಲ್ಕಿ ತಾಲೂಕಿನ ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿದ್ದ ಅಡುಗೆ ಅನಿಲ ಸಿಲಿಂಡರ್ ಕಳವು ಪ್ರಕರಣಗಳನ್ನು ಭೇದಿಸಿರುವ ಜಿಲ್ಲಾ ಪೊಲೀಸರು ನಾಲ್ವರು ಆರೋಪಿಗಳನ್ನು ಬಂಧಿಸಿ, ₹9.75 ಲಕ್ಷ ಮೌಲ್ಯದ 55 ಅನಿಲ ಸಿಲಿಂಡರ್, ಕೃತ್ಯಕ್ಕೆ ಬಳಸಿದ್ದ ಒಂದು ಕಾರು ವಶಪಡಿಸಿಕೊಂಡಿದ್ದಾರೆ.

ಭಾಲ್ಕಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ 4, ಮೇಹಕರ್ ಪೊಲೀಸ್ ಠಾಣೆಯಲ್ಲಿ 3 ಹಾಗೂ ಖಟಕ್ ಚಿಂಚೋಳಿ ಪೊಲೀಸ್ ಠಾಣೆಯಲ್ಲಿ 2 ಸೇರಿ ಒಟ್ಟು 9 ಸಿಲಿಂಡರ್ ಕಳವು ಪ್ರಕರಣಗಳು ದಾಖಲಾಗಿದ್ದವು. ಈ ಪ್ರಕರಣಗಳ ತನಿಖೆ ನಡೆಸಿದ ಪೊಲೀಸರು ನಾಲ್ವರು ಆರೋಪಿಗಳನ್ನು ಬಂಧಿಸಿ, ವಿವಿಧ ಕಂಪನಿಯ 55 ಅಡುಗೆ ಅನಿಲ ಸಿಲಿಂಡರ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಜಪ್ತಿ ಮಾಡಲಾದ 55 ಸಿಲಿಂಡರ್‌ಗಳ ಮೌಲ್ಯ ₹2.75 ಲಕ್ಷ ಹಾಗೂ ಕೃತ್ಯಕ್ಕೆ ಬಳಸಿದ್ದ ಕಾರಿನ ಮೌಲ್ಯ ₹7 ಲಕ್ಷವಾಗಿದ್ದು, ಒಟ್ಟು ₹9.75 ಲಕ್ಷ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಅವರು ಮಂಗಳವಾರ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು,

ಆಗಸ್ಟ್ 2ರಂದು ಕಳವು ಮಾಡಿದ ಸಿಲಿಂಡರ್‌ಗಳನ್ನು ಮಹಾರಾಷ್ಟ್ರದ ಉದಗೀರ ಕಡೆಗೆ ಸಾಗಿಸಲಾಗುತ್ತಿದೆ ಎಂಬ ಖಚಿತ ಮಾಹಿತಿ ಮೇರೆಗೆ ಭಾಲ್ಕಿ ಡಿವೈಎಸ್‌ಪಿ ಬಲಪ್ಪ ನಂದಗಾವೆ ಅವರ ಮಾರ್ಗದರ್ಶನದಲ್ಲಿ ಸಿಪಿಐ ಹಣಮರೆಡ್ಡಪ್ಪ ನೇತ್ರತ್ವದಲ್ಲಿ ವಿಶೇಷ ತಂಡ ರಚಿಸಿದ ಭಾಲ್ಕಿ ಗ್ರಾಮೀಣ ಪೊಲೀಸ್ ಠಾಣೆಯ ಪಿಎಸ್‌ಐ ಅಶೋಕ್ ಪಾಟೀಲ್ ಅವರು ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಿದ್ದಾರೆ.

ಭಾಲ್ಕಿ ತಾಲೂಕಿನ 27 ಗ್ರಾಮ, ಹುಮನಾಬಾದ್ ತಾಲೂಕಿನ 8 ಗ್ರಾಮ ಹಾಗೂ ಬಸವಕಲ್ಯಾಣ ತಾಲೂಕಿನ 1 ಗ್ರಾಮದಲ್ಲಿರುವ ವಿವಿಧ ಶಾಲೆಗಳ ಅಡುಗೆ ಕೊಠಡಿಗಳ ಬೀಗ ಮುರಿದು ಸಿಲಿಂಡರ್‌ಗಳನ್ನು ಕಳವು ಮಾಡಿರುವುದಾಗಿ ಆರೋಪಿಗಳು ವಿಚಾರಣೆ ವೇಳೆ ಒಪ್ಪಿಕೊಂಡಿದ್ದಾರೆ. ಕಳವು ಮಾಡಿದ ಸಿಲಿಂಡರ್‌ಗಳನ್ನು ಭಾಲ್ಕಿ ತಾಲೂಕಿನ ದಾಡಗಿ ಕ್ರಾಸ್ ಸಮೀಪದ ಚಹಾ ಹೋಟೆಲ್‌ನಲ್ಲಿ ಅಡಗಿಸಿಟ್ಟಿರುವ ಮಾಹಿತಿ ನೀಡಿದ್ದು, ಅಲ್ಲಿಂದ ಪೊಲೀಸರು 55 ಸಿಲಿಂಡರ್‌ಗಳನ್ನು ವಶಪಡಿಸಿಕೊಂಡಿದ್ದಾರೆ. ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ತಿಳಿಸಿದ್ದಾರೆ. ಕಾರ್ಯಚರಣೆಯಲ್ಲಿ ಭಾಲ್ಕಿ ಗ್ರಾಮೀಣ ಠಾಣೆಯ ಸಿಬ್ಬಂದಿಗಳಾದ ಭಗವಾನ, ಗುರುನಾಥ, ಶಾಮ, ಶರಣಬಸಪ್ಪ, ಬೀರಪ್ಪ ಉಮರ ಪಟೇಲ, ಪ್ರವೀಣ, ಸಂಗಮೇಶ ಹಾಗೂ ಜಗದೀಶ ಭಾಗವಹಿಸಿದ್ದರು. ಈ ಯಶಸ್ವಿ ಕಾರ್ಯಾಚರಣೆ ನಡೆಸಿದ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಕಾರ್ಯವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಅವರು ಶ್ಲಾಘಿಸಿದ್ದಾರೆ.

# ವಿದ್ಯಾರ್ಥಿಗಳು ಸಂಗೀತ ಹಾಗೂ ಕಲಾ ಪ್ರತಿಭೆ ಬೆಳೆಸಿಕೊಳ್ಳಬೇಕು





• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ವಿದ್ಯಾರ್ಥಿಗಳಲ್ಲಿ ಅಡಗಿರುವ ಸಂಗೀತ ಹಾಗೂ ಕಲಾ ಪ್ರತಿಭೆಯನ್ನು ಗುರುತಿಸಿ, ಅದನ್ನು ಉಳಿಸಿ ಬೆಳೆಸುವ ಉದ್ದೇಶದಿಂದ ಕನ್ನಡ ಮತ್ತು ಸಂಸ್ಕೃತಿ ವತಿಯಿಂದ ಸುಗಮ ಸಂಗೀತ ಕಲಾ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲಾಗಿದೆ ಎಂದು ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ ಹೇಳಿದರು.

ಬೀದರ್ ನಗರ ಸಮೀಪದ ಮನ್ನಳ್ಳಿ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಆಗಸ್ಟ್ 3 ಸೋಮವಾರ ರಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ,ಬೀದರ ವತಿಯಿಂದ 2026–27ನೇ ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆಯಡಿ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗಾಗಿ ಆಯೋಜಿಸಿದ್ದ ಸುಗಮ ಸಂಗೀತ ಕಲಾ ತರಬೇತಿ ಕಾರ್ಯಾಗಾರವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಸಂಗೀತವು ವ್ಯಕ್ತಿತ್ವ ವಿಕಸನಕ್ಕೆ ಪೂರಕವಾಗಿದ್ದು, ಕಲೆಯ ಮೂಲಕ ವಿದ್ಯಾರ್ಥಿಗಳಲ್ಲಿ ಶಿಸ್ತು,ಆತ್ಮವಿಶ್ವಾಸ ಹಾಗೂ ಸೃಜನಶೀಲತೆ ಬೆಳೆಯುತ್ತದೆ. ಆದ್ದರಿಂದ ತರಬೇತಿಯಲ್ಲಿ ಭಾಗವಹಿಸಿರುವ ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಆಸಕ್ತಿಯಿಂದ ಕಲಿತು ತಮ್ಮ ಪ್ರತಿಭೆಯನ್ನು ಮತ್ತಷ್ಟು ವಿಕಸನಗೊಳಿಸಬೇಕು ಎಂದು ಕರೆ ನೀಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯ ವಿಜಯಕುಮಾರ ಸೋನಾರೆ ಅವರು ಮಾತನಾಡಿ, ಇಂದಿನ ಮಕ್ಕಳು ಅನವಶ್ಯಕವಾಗಿ ಮೊಬೈಲ್ ಬಳಕೆಯಲ್ಲಿ ಸಮಯ ವ್ಯರ್ಥ ಮಾಡದೆ ಶಿಕ್ಷಣ ಹಾಗೂ ಪ್ರತಿಭೆ ಬೆಳವಣಿಗೆಯ ಕಡೆ ಹೆಚ್ಚಿನ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.

ಮೊಬೈಲ್ ಅನ್ನು ಅಗತ್ಯವಿದ್ದಾಗ ಮಾತ್ರ ಬಳಸಬೇಕು. ವಿದ್ಯಾರ್ಥಿಗಳು ಜೀವನದಲ್ಲಿ ದೊಡ್ಡ ಗುರಿ ಮತ್ತು ಕನಸುಗಳನ್ನು ಹೊಂದಿ ನಿರಂತರ ಶ್ರಮಿಸಿದರೆ ಯಶಸ್ಸು ಸಾಧಿಸಲು ಸಾಧ್ಯವಾಗುತ್ತದೆ. ಸಂಗೀತ ಸೇರಿದಂತೆ ವಿವಿಧ ಕಲಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವ ಮೂಲಕ ತಮ್ಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು ಎಂದು ಅವರು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪಾಲಕರಾದ ಮಹಾಂತಪ್ಪ ದೊಡ್ಡಮನಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಗೋಪಾಲ ರಾಠೋಡ್ ಹಾಗೂ ದೇವಿದಾಸ್ ಜೋಶಿ ಮಾತನಾಡಿದರು. ಗಾಯಕ ದಿಲೀಪ ಕಾಡವಾದ ಸೇರಿದಂತೆ ಗಣ್ಯರು ವೇದಿಕೆಮೇಲಿದ್ದರು.

ಕಾರ್ಯಾಗಾರದಲ್ಲಿ ಸುಗಮ ಸಂಗೀತ ತರಬೇತಿಯನ್ನು ತರಬೇತಿ ಗುರುಗಳಾದ ರಮೇಶ ಅವರು ನೀಡುತ್ತಿದ್ದು, ಈ ತರಬೇತಿಯು 2026ರ ಆಗಸ್ಟ್ 1 ರಿಂದ 2027ರ ಜನವರಿ 30ರವರೆಗೆ ನಡೆಯಲಿದೆ. ತೇಜಶ್ವಿನಿ,ಶ್ರೀನಿಧಿ,ಅಂಕಿತಾ,ಐಶ್ವರ್ಯ, ಪ್ರಿಯಾ, ಗೌತಮಿ, ಅಕ್ಷಿತಾ, ಜೀವಿಕಾ, ವೈಷ್ಣವಿ ಎಸ್, ದೀಕ್ಷಿತಾ, ಸಮಾರಿಯಾ, ಸೃಷ್ಟಿ ಹಾಗೂ ಎಸ್ತರ್ ರಾಣಿ ಸೇರಿದಂತೆ ವಿದ್ಯಾರ್ಥಿನಿಯರು ತರಬೇತಿಯಲ್ಲಿ ಭಾಗವಹಿಸಿ ಸುಗಮ ಸಂಗೀತದ ವಿವಿಧ ಆಯಾಮಗಳನ್ನು ಕಲಿಯಲಿದ್ದಾರೆ.

ಪ್ರಾರಂಭದಲ್ಲಿ ಖ್ಯಾತ ನಿರೂಪಕರಾದ ದೇವಿದಾಸ್ ಜೋಶಿ ಸ್ವಾಗತಿಸಿದರು, ಶ್ರೀಮತಿ ಗೀತಾ ಪಾಟೀಲ್ ನಿರೂಪಿಸಿದರೆ, ಕ್ಲೈಮೆಂಟಿನಾ ವಂದಿಸಿದರು. ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕರಾದ ಶ್ರೀಕಾಂತ, ಬಸಪ್ಪಾ, ರಜನಿಕಾಂತ, ಸವಿತಾ, ಸಪನಾ, ವಿನೋದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸುಪ್ರೀಂ ಮೆಟ್ಟಿಲೇರಿರುವ ತಮಿಳುನಾಡಿಗೆ ಕಾನೂನಿನ ಉತ್ತರ..!

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

"ಬುಧವಾರದಿಂದಲೇ ನೂತನ ಸಚಿವರುಗಳು ತಮಗೆ ಜವಾಬ್ದಾರಿ ವಹಿಸುವ ಜಿಲ್ಲೆಗಳಿಗೆ ಹೋಗಿ ಅತಿವೃಷ್ಟಿ ಹಾಗೂ ಅನಾವೃಷ್ಟಿ ಬಗ್ಗೆ ಅಲ್ಲಿನ ಸ್ಥಳಗಳಿಗೆ ಹೋಗಿ, ಪರಿಶೀಲನೆ ಮಾಡಬೇಕು. ನಂತರ ಕಂದಾಯ ಸಚಿವರಿಗೆ ವರದಿ ಸಲ್ಲಿಸಬೇಕು ಎಂದು ಸಚಿವ ಸಂಪುಟ ಸಭೆಯಲ್ಲಿ ನಿರ್ದೇಶನ ನೀಡಲಾಗಿದೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಮಾಹಿತಿ ನೀಡಿದರು. ವಿಧಾನಸೌಧದಲ್ಲಿ ಸೋಮವಾರ ನಡೆದ ಸಚಿವ ಸಂಪುಟ ಸಭೆ ಬಳಿಕ ಶಿವಕುಮಾರ್ ಅವರು ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದರು.

**ನಮ್ಮ ಮುಂದಿರುವ ಸವಾಲುಗಳ ಬಗ್ಗೆ ಚರ್ಚೆ:** "ನಮ್ಮ ಮುಂದಿರುವ ಸವಾಲು, ಎದುರಾಗಬಹುದಾದ ಸಮಸ್ಯೆಗಳ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ಮಾಡಿದ್ದೇವೆ. ಬರಗಾಲ ಹಾಗೂ ಕಾವೇರಿ ಭಾಗದ ಪ್ರದೇಶದಲ್ಲಿ ನೀರಿನ ಸಮಸ್ಯೆ ಬಗ್ಗೆ ಚರ್ಚೆ ಮಾಡಿದ್ದೇವೆ. ಈಗ ತಾತ್ಕಾಲಿಕವಾಗಿ ಮಳೆಯಿಂದ ಸಮಸ್ಯೆ ನಿವಾರಣೆಯಾಗಿರಬಹುದು. ಭೀಕರವಾದ ಕಂಟಕ ಎದುರಾಗಿತ್ತು. ದೇವರ ಕೃಪೆಯಿಂದ ಇದು ಸಧ್ಯಕ್ಕೆ ನಿವಾರಣೆಯಾಗಿದೆ. ತಮಿಳುನಾಡಿಗೆ 3,50 ಕ್ಯೂಸೆಕ್ ನೀರು ಹರಿಸುವಂತೆ ಹೇಳಿದ್ದು, ನಾವು 30 ಸಾವಿರ ಕ್ಯೂಸೆಕ್ಸ್ ನೀರು ಹರಿಸುವಂತಾಗಿದೆ. ಕೆಆರ್ ಎಸ್, ಹೇಮಾವತಿ ತುಂಬಿಲ್ಲ, ಒಳಹರಿವು ಹೆಚ್ಚಿದೆ. ಮಲೆನಾಡಿನಲ್ಲಿ ಮಳೆ ಬೀಳುತ್ತಿದ್ದು, ತುಂಗಭದ್ರಾಗೆ ಇನ್ನು ನೀರು ಬರಬೇಕು. ಆಲಮಟ್ಟಿಯಲ್ಲಿ ನೀರಿನ ಹರಿವು ಇದೆ. ಬರಗಾಲದ ಛಾಯೆ ಇನ್ನು ಇದೆ. ಮಳೆಯಿಂದಾಗಿ ಶಿವಮೊಗ್ಗ, ತೀರ್ಥಹಳ್ಳಿ ಭಾಗದಲ್ಲಿ ಅನಾಹುತಗಳು ಆಗಿವೆ. ನಾನು ವರದಿ ತರಿಸಿಕೊಂಡು ಪರಿಹಾರ ನೀಡಲಾಗುವುದು" ಎಂದು ತಿಳಿಸಿದರು.

ಎಲ್ಲ ಪಕ್ಷದ ಜನಪ್ರತಿನಿಧಿಗಳನ್ನು ಕರೆದುಕೊಂಡು

**ಹೋಗಿ ಪರಿಶೀಲಿಸಲು ಸೂಚನೆ:** "ಸಚಿವ ಸಂಪುಟ ವಿಸ್ತರಣೆಯಾಗುವ ಹಿನ್ನೆಲೆಯಲ್ಲಿ ಸ್ಥಳೀಯ ನಾಯಕರಿಂದ ಪರಿಹಾರ ಘೋಷಣೆ ಮಾಡಿಸಲು ತೀರ್ಮಾನಿಸಿದ್ದೇವೆ. ನಾಳೆ ಒಂದು ದಿನ ಹೊರತುಪಡಿಸಿ ನಾಡಿದ್ದಿನಿಂದ ನೀವುಗಳು ನಿಮಗೆ ಜವಾಬ್ದಾರಿ ವಹಿಸುವ ಜಿಲ್ಲೆಗಳಿಗೆ ಹೋಗಿ, ಅತಿವೃಷ್ಟಿ ಹಾಗೂ ಅನಾವೃಷ್ಟಿ ಬಗ್ಗೆ ಸ್ಥಳಕ್ಕೆ ಹೋಗಿ ಪರಿಶೀಲನೆ ಮಾಡಬೇಕು. ನಂತರ ಕಂದಾಯ ಸಚಿವರಿಗೆ ವರದಿ ನೀಡಬೇಕು. ವಿರೋಧ ಪಕ್ಷದ ನಾಯಕರು ಅಧಿವೇಶನ ನಡೆಸಲು ಬಿಡುವುದಿಲ್ಲ ಎಂದು ಹೇಳುತ್ತಿದ್ದಾರೆ. ಅವರು ಕಂದಾಯ ಸಚಿವರಾಗಿದ್ದವರು. ಸಾಕಷ್ಟು ಅನುಭವಸ್ಥರು. ಅವರಿಗೆ ಸಮಯ ಬಂದಾಗ ಉತ್ತರ ನೀಡೋಣ. ನಾನು ಈಗಾಗಲೇ ಬೆಳಗಾವಿ, ಚಿತ್ರದುರ್ಗ, ಕಲಬುರ್ಗಿ ವಿಭಾಗಗಳಲ್ಲಿ ಸಭೆ ಮಾಡಿದ್ದು, ಮೈಸೂರು ವಿಭಾಗದ ಸಭೆಯನ್ನು ಶೀಘ್ರವೇ ಮಾಡಲಾಗುವುದು. ಎಲ್ಲರ ಸಲಹೆ ಪಡೆಯಲಾಗಿದ್ದು, ಕುಡಿಯುವ ನೀರಿನ ಉದ್ದೇಶಕ್ಕೆ ಪ್ರತಿ ವಿಧಾನಸಭೆಗೆ 1 ಕೋಟಿ ಅನುದಾನ ನೀಡಲಾಗಿದೆ. ಜಿಲ್ಲಾಧಿಕಾರಿಗಳು ಸ್ಥಳಕ್ಕೆ ಹೋಗಿ ವರದಿ ನೀಡಬೇಕು. ನಂತರ ಸರ್ಕಾರ ತೀರ್ಮಾನ ಮಾಡಲಿದೆ. ಎಲ್ಲಾ ಪಕ್ಷದ ಜನಪ್ರತಿನಿಧಿಗಳನ್ನು ಕರೆದುಕೊಂಡು ಹೋಗಿ ಪರಿಶೀಲನೆ ಮಾಡಬೇಕು ಎಂದು ಸೂಚನೆ ನೀಡಲಾಗಿದೆ" ಎಂದು ಮಾಹಿತಿ ನೀಡಿದರು.

**ಹೊಸ ಮುಖಗಳಿಗೆ ಅವಕಾಶ:** "ಸುಮಾರು 2 ಗಂಟೆಗಳ ಕಾಲ ಸಚಿವ ಸಂಪುಟದ ನೂತನ ಸದಸ್ಯರಿಗೆ ಮಾರ್ಗದರ್ಶನ ನೀಡಿದ್ದೇವೆ. ನಮ್ಮಲ್ಲಿ ಸಾಕಷ್ಟು ಹಿರಿಯ ನಾಯಕರಿದ್ದರೂ ನಾವು ಈ ಬಾರಿ ಹೊಸ ಮುಖಗಳಿಗೆ ಅವಕಾಶ ನೀಡಿದ್ದೇವೆ. ನಾನು ಹಾಗೂ ಪರಮೇಶ್ವರ್ ಅವರು ಮೊದಲ ಬಾರಿಗೆ ಶಾಸಕರಾಗಿ ಮಂತ್ರಿಯಾಗಿದ್ದೇವೆ. ಕೆಲವು ಸಂದರ್ಭದಲ್ಲಿ ನಮ್ಮನ್ನು ಸಚಿವರನ್ನಾಗಿ ಮಾಡಿದ್ದಾರೆ. ಕೆಲವೊಮ್ಮೆ ಮಾಡಿಲ್ಲ. ನಾವು ಅಲ್ಲಿಂದ ಇಲ್ಲಿಯವರೆಗೆ ಬಂದು ಈ ಸ್ಥಾನ ತಲುಪಿದ್ದೇವೆ. ಇಂದು 19 ಸದಸ್ಯರು ಸಂಪುಟ ಸೇರ್ಪಡೆಯೊಂದಿಗೆ ವಿಸ್ತರಣೆ–ಯಾಗಿದೆ. ನಮ್ಮಲ್ಲಿ ಅನೇಕ ಅರ್ಹರು ಇದ್ದರು.

# ಕನಕಾಚಲಪತಿ ಸೈನಿಕರ ತರಬೇತಿ ಕೇಂದ್ರದಿಂದ ವಿಶೇಷ ಶಿಬಿರ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**



ದೇಶಸೇವೆಗೆ ಸಜ್ಜಾಗುತ್ತಿರುವ ಯುವಕರಲ್ಲಿ ದೈಹಿಕ ಸಾಮರ್ಥ್ಯದ ಜೊತೆಗೆ ಶಿಸ್ತು, ದೇಶಭಕ್ತಿ ಹಾಗೂ ಉತ್ತಮ ಸಂಸ್ಕಾರವನ್ನು ಬೆಳೆಸುವ ಉದ್ದೇಶದಿಂದ ಕನಕಗಿರಿಯ ಪ್ರತಿಷ್ಠಿತ ಕನಕಾಚಲಪತಿ ಸೈನಿಕರ ತರಬೇತಿ ಕೇಂದ್ರದ ವತಿಯಿಂದ ಕಲಿಕೇರಿ ಗ್ರಾಮದ ಶರಣ ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಒಂದು ದಿನದ ವಿಶೇಷ ತರಬೇತಿ ಶಿಬಿರವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ಕಾರ್ಗಿಲ್ ವಿಜಯ ದಿನದ ಅಂಗವಾಗಿ ಹಾಗೂ "ಊರನ್ನು ನೋಡುವ ಮುನ್ನ ಊರ ಮುಂದಿನ ಗುಡಿ ನೋಡು" ಎಂಬ ಭಾರತೀಯ ಸಂಸ್ಕೃತಿಯ ಮೌಲ್ಯವನ್ನು ಯುವಜನತೆಗೆ ಪರಿಚಯಿಸುವ ಉದ್ದೇಶದಿಂದ ಈ ವಿಶೇಷ ತರಬೇತಿ ಕಾರ್ಯಕ್ರಮವನ್ನು ದೇವಸ್ಥಾನದ ಆವರಣದಲ್ಲಿ ನಡೆಸಲಾಯಿತು. ಬೆಳಿಗ್ಗೆ 5 ಗಂಟೆಯಿಂದಲೇ 60ಕ್ಕೂ ಹೆಚ್ಚು ಅಭ್ಯರ್ಥಿಗಳು ದೇವಸ್ಥಾನಕ್ಕೆ ಆಗಮಿಸಿ, ಶರಣ ಬಸವೇಶ್ವರರ ದರ್ಶನ ಪಡೆದು ದೇಶಸೇವೆಯ ಸಂಕಲ್ಪದೊಂದಿಗೆ ತರಬೇತಿಯನ್ನು ಆರಂಭಿಸಿದರು. ದೇವರ ಆಶೀರ್ವಾದದೊಂದಿಗೆ ರಾಷ್ಟ್ರ ಸೇವೆ ಮಾಡುವ ಪ್ರತಿಜ್ಞೆಯನ್ನು ಕೈಗೊಂಡರು.

**ತರಬೇತಿಯ ಪ್ರಮುಖ ಅಂಶಗಳು:** ತರಬೇತಿಯ ಭಾಗವಾಗಿ ಅಭ್ಯರ್ಥಿಗಳಿಗೆ 5 ಕಿಲೋಮೀಟರ್ ಓಟ, ಪುಷ್‌ಅಪ್, ಸ್ಕಿಪ್ಪಿಂಗ್ ಹಾಗೂ ರಸ್ಸಾ ಹತ್ತುವಂತಹ ದೈಹಿಕ ಸಾಮರ್ಥ್ಯ ವೃದ್ಧಿಸುವ ಅಭ್ಯಾಸಗಳನ್ನು ನಡೆಸಲಾಯಿತು. ಇದೇ ವೇಳೆ ಸೈನಿಕರಲ್ಲಿ ಇರಬೇಕಾದ ಶಿಸ್ತು, ಸಮಯಪಾಲನೆ, ನಾಯಕತ್ವ ಹಾಗೂ ತಂಡದೊಂದಿಗೆ ಕಾರ್ಯನಿರ್ವಹಿಸುವ ಗುಣಗಳ ಕುರಿತು ಪರೇಡ್ ತರಬೇತಿ ನೀಡಲಾಯಿತು.

ಕಾರ್ಗಿಲ್ ಯುದ್ಧದ ವೀರ ಯೋಧರ ಸಾಹಸಗಾಥೆಗಳನ್ನು ವಿವರಿಸಿ, ದೇಶಕ್ಕಾಗಿ ಬದುಕುವ ಮತ್ತು ಅಗತ್ಯವಿದ್ದರೆ ದೇಶಕ್ಕಾಗಿ ಪ್ರಾಣ ತ್ಯಾಗ ಮಾಡುವ ಮನೋಭಾವವನ್ನು ಯುವಕರಲ್ಲಿ ಬೆಳೆಸುವ ಉದ್ದೇಶದಿಂದ ದೇಶಭಕ್ತಿ ಉಪನ್ಯಾಸವೂ ನಡೆಯಿತು.

ತರಬೇತಿ ಮುಕ್ತಾಯದ ಬಳಿಕ ಎಲ್ಲಾ ಅಭ್ಯರ್ಥಿಗಳು ದೇವಸ್ಥಾನದ ಆವರಣವನ್ನು ಸ್ವಚ್ಛಗೊಳಿಸುವ ಮೂಲಕ "ನಾವು ಹೋದ ಕಡೆ ಸ್ವಚ್ಛತೆ ಇರಬೇಕು" ಎಂಬ ಸಾಮಾಜಿಕ ಜಾಗೃತಿ ಸಂದೇಶವನ್ನು ಸಾರಿದರು. ಈ ಸಂದರ್ಭದಲ್ಲಿ ಮಾತನಾಡಿದ ತರಬೇತಿ ಕೇಂದ್ರದ ಮುಖ್ಯ ತರಬೇತುದಾರರು, "ಸೈನಿಕನಿಗೆ ಕೇವಲ ಬಲಿಷ್ಠ ದೇಹವಷ್ಟೇ ಸಾಕಾಗುವುದಿಲ್ಲ. ಬಲಿಷ್ಠ ಮನಸ್ಸು, ಉತ್ತಮ ಸಂಸ್ಕಾರ ಮತ್ತು ದೇಶಭಕ್ತಿ ಕೂಡ ಅತ್ಯಗತ್ಯ. ಅದಕ್ಕಾಗಿ ದೇವಸ್ಥಾನಗಳು ಹಾಗೂ ಶಾಲೆಗಳಂತಹ ಪವಿತ್ರ ಸ್ಥಳಗಳಲ್ಲಿ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ" ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮಸ್ಥರಾದ ವಿರುಪಾಕ್ಷಪ್ಪ, ದಾನಪ್ಪ, ಬಸವರಾಜ್ ಅಂಗಡಿ, ಸರೋಜಾ ಹಾಗೂ ಗಂಗಮ್ಮ ಸೇರಿದಂತೆ ಹಲವರು ಉಪಸ್ಥಿತರಿದ್ದು, ಯುವಕರ ದೇಶಸೇವೆಯ ಸಂಕಲ್ಪವನ್ನು ಮೆಚ್ಚುಗೆ ವ್ಯಕ್ತಪಡಿಸಿದರು.

# ಶರಣರ ವಚನಗಳು ಸಮಾಜದಲ್ಲಿ ಜಾಗೃತಿ ಮೂಡಿಸುವ ಶಕ್ತಿ







• **ಮಲ್ಲಮ್ಮ ನುಡಿ ವಾರ್ತೆ ಬೀದರ್**

12ನೇ ಶತಮಾನದ ಶರಣರು ಕಾಯಕಕ್ಕೆ ಅತ್ಯುನ್ನತ ಸ್ಥಾನ ನೀಡಿದ್ದರು. ನಿರ್ಮಲ ಮನಸ್ಸಿನಿಂದ ಮಾಡುವ ಕಾಯಕದಲ್ಲಿಯೇ ದೇವರನ್ನು ಕಂಡ ಶರಣರು ಸಮಾಜಕ್ಕೆ ಆದರ್ಶರಾಗಿದ್ದಾರೆ. ನಿಜಶರಣ ಅಂಬಿಗರ ಚೌಡಯ್ಯರವರು ಮೂಢನಂಬಿಕೆ ವಿರುದ್ಧ ಹೋರಾಡಿ ಸಮಾಜದಲ್ಲಿದ್ದ ಕಂದಾಚಾರಗಳನ್ನು ತೊಲಗಿಸಲು ಶ್ರಮಿಸಿದ ಮಹಾನ್ ಶರಣರಾಗಿದ್ದಾರೆ ಎಂದು ನಿಜ ಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷರು ಹಾಗೂ ಜಿಲ್ಲಾ ಟೋಕರೆ ಕೋಳಿ ಸಮಾಜ ಸಂಘದ ಜಿಲ್ಲಾಧ್ಯಕ್ಷರಾದ ಜಗನ್ನಾಥ ಜಮಾದಾರ್ ಹೇಳಿದರು.

ಅಗಸ್ಟ್ 02 ರವಿವಾರ ಬೆಳಿಗ್ಗೆ ನಗರದ ಹೊಸ ಬಸ್ ನಿಲ್ದಾಣ ಎದುರಿನ ಕನಕಾದ್ರಿ ಕಂಫರ್ಟ್ ಹೊಟೇಲ್ ಸಭಾಂಗಣದಲ್ಲಿ ಅಂಬಿಗರ ಚೌಡಯ್ಯ ಯುವ ಸೇನೆ (ರಿ), ಬೀದರ್ ವತಿಯಿಂದ ಪ್ರತಿ ತಿಂಗಳ ಪ್ರಥಮ ರವಿವಾರ ಆಯೋಜಿಸಿದ "ವಚನ ಸಾಹಿತ್ಯ ಚಿಂತನೆ" ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಿರಿಯ ಸಾಹಿತಿ ಮಾಣಿಕ ನೇಳಗಿ ಅವರು ಮಾತನಾಡಿ, ಸಮಾಜದ ಜನರು ಆರ್ಥಿಕವಾಗಿ ಸಬಲರಾಗುವುದರ ಜೊತೆಗೆ ತಮ್ಮಲ್ಲಿರುವ ಸೃಜನಶೀಲ ಪ್ರತಿಭೆ ಮತ್ತು ಕೌಶಲ್ಯಗಳನ್ನು ಹೊರತಂದು ಸಮಾಜದ ಅಭಿವೃದ್ಧಿಗೆ ಕೊಡುಗೆ ನೀಡಬೇಕು. ಉತ್ತಮ ನಡತೆ ಮತ್ತು ಸನ್ನಡತೆಯಿಂದ ಬದುಕಿದರೆ ಸಮಾಜದಲ್ಲಿ ಗೌರವ ಹೆಚ್ಚುವುದಲ್ಲದೆ ಇತರರಿಗೆ ಮಾದರಿಯಾಗಬಹುದು ಎಂದು ತಿಳಿಸಿದರು.

ಖ್ಯಾತ ಉದ್ಯೋಮಿ ನಂದಕುಮಾರ್ ಜಮಗೀಕರ್, ಕಾರ್ಯಕ್ರಮ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಶರಣರ ವಚನಗಳು ಕೇವಲ ಓದಿ ತಿಳಿದುಕೊಳ್ಳುವ ಸಾಹಿತ್ಯವಲ್ಲ. ಅವುಗಳಲ್ಲಿ ಅಡಕವಾಗಿರುವ ಮಾನವೀಯ ಮೌಲ್ಯಗಳು, ಕಾಯಕ ನಿಷ್ಠೆ, ಸಮಾನತೆ ಹಾಗೂ ಸತ್ಯದ ಸಂದೇಶಗಳನ್ನು ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಬದುಕು ಸಾರ್ಥಕವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮಕ್ಕೆ ಪೂಜ್ಯ ಶ್ರೀ ರಾಜಶೇಖರ್ ಗುರೂಜಿ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಜಿಲ್ಲಾ ಟೋಕರೆ ಕೋಳಿ ಸಮಾಜ ಸಂಘದ ಉಪಾಧ್ಯಕ್ಷ ಸುನೀಲ್ ಖಾಶೆಂಪುರ ಸೇರಿದಂತೆ ಹಲವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಟೋಕರೆ ಕೋಳಿ ಸಮಾಜ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಾರುತಿ ಮಾಸ್ಟರ್ ಅವರನ್ನು ವಿಶೇಷವಾಗಿ ಸನ್ಮಾನಿಸಿ ಗೌರವಿಸಲಾಯಿತು. ಪ್ರಾರಂಭದಲ್ಲಿ ಚಂದ್ರಕಾಂತ ಹಳ್ಳಿಖೇಡಕರ್ ಸ್ವಾಗತಿಸಿದರು. ರವೀಂದ್ರ ಬಾಲೆಬಾಯಿ, ನಿರೂಪಿಸಿದರೆ, ಚೇತಾನಂದ ಖಾಶೆಂಪುರ ವಂದಿಸಿದರು. ಕಾರ್ಯಕ್ರಮದಲ್ಲಿ ಬೀದರ್ ದಕ್ಷಿಣ ಟೋಕರೆ ಕೋಳಿ ಸಮಾಜ ಸಂಘದ ಅಧ್ಯಕ್ಷ ಸನ್ಮುಖಪ್ಪಾ ಶೇಕಾಪುರ, ಪ್ರಮುಖರಾದ ಸಂಜೀವಕುಮಾರ್ ಸಿರ್ಸೆ, ಮಲ್ಲಿಕಾರ್ಜುನ್ ಪಾಟೀಲ್, ಚಿತೇಂದ್ರ ಜಮಾದಾರ್ ಹಾಗೂ ಸಮಾಜದ ಮುಖಂಡರು, ಯುವಕರು, ಮಕ್ಕಳು ಇದ್ದರು.

**ಪ್ರತಿತಿಂಗಳ ಪ್ರಥಮ ರವಿವಾರ ವಚನ ಸಾಹಿತ್ಯ ಚಿಂತನೆ ಕಾರ್ಯಕ್ರಮವನ್ನು ನಿರಂತರವಾಗಿ ಆಯೋಜಿಸುವ ಮೂಲಕ ಸಮಾಜದ ಜನರನ್ನು ಒಂದೆಡೆ ಸೇರಿಸುವ ಕಾರ್ಯ ಶ್ಲಾಘನೀಯವಾಗಿದೆ. ಇಂತಹ ಕಾರ್ಯಕ್ರಮಗಳಲ್ಲಿ ಮಹಿಳೆಯರು ಹಾಗೂ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದರೆ ಉತ್ತಮ ವಿಚಾರಗಳು ಮುಂದಿನ ಪೀಳಿಗೆಗೂ ತಲುಪಲಿವೆ.**

**–ಬಿ.ಜೆ ಪಾರ್ವತಿ ಸೋನಾರೆ, ಕಥೆಗಾರ್ತಿ ಹಾಗೂ ಹಿರಿಯ ಸಾಹಿತಿಗಳು**

**ಅಂಬಿಗರ ಚೌಡಯ್ಯ ಯುವ ಸೇನೆಯ ಸಂಸ್ಥಾಪಕ ಅಧ್ಯಕ್ಷ ಸುನೀಲ್ ಭಾವಿಕಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿ, ಶರಣರ ಸಂದೇಶಗಳು ಜನಸಾಮಾನ್ಯರಿಗೆ ತಲುಪುವ ಉದ್ದೇಶದಿಂದ ಸಂಘಟನೆ ನಿರಂತರವಾಗಿ ವಚನ ಸಾಹಿತ್ಯ ಚಿಂತನೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ. ಸಮಾಜದಲ್ಲಿರುವ ಪ್ರತಿಭಾವಂತರನ್ನು ಗುರುತಿಸಿ ಅವರಿಗೆ ಸೂಕ್ತ ವೇದಿಕೆ ಕಲ್ಪಿಸುವ ಕಾರ್ಯವನ್ನೂ ಸಂಘಟನೆ ಕೈಗೊಂಡಿದೆ ಎಂದು ತಿಳಿಸಿದರು.**

**–ಸುನೀಲ್ ಭಾವಿಕಟ್ಟಿ, ಅಧ್ಯಕ್ಷರು ಅಂಬಿಗರ ಚೌಡಯ್ಯ ಯುವ ಸೇನೆಯ ಸಂಸ್ಥಾಪಕ**

# ಬೀರಲಿಂಗೇಶ್ವರ, ಮಾಳಿಂಗರಾಯರ ಭಾವಚಿತ್ರದ ಅದ್ಧೂರಿ ಮೆರವಣಿಗೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



:ತಾಲ್ಲೂಕಿನ ಆನಂದವಾಡಿ ಗ್ರಾಮದಲ್ಲಿ

ಬೀರಲಿಂಗೇಶ್ವರ,ಮಾಳಿಂಗರಾಯರ ಜಾತ್ರಾ ಮಹೋತ್ಸವ ನಿಮಿತ್ತ ಬೀರಲಿಂಗೇಶ್ವರ,ಮಾಳಿಂಗರಾಯರ ಭಾವಚಿತ್ರದ ಅದ್ಧೂರಿ ಮೆರವಣಿಗೆ ನಡೆಯಿತು.

ಸಿದ್ದರಾಮೇಶ್ವರ ಪಟ್ಟದ್ದೇವರು, ಗೋಪಾಲಮಹಾರಾಜರುಮೆರವಣಿಗೆ ಕಾರ್ಯಕ್ರಮಕ್ಕೆಚಾಲನೆನೀಡಿದರು.

ಮೆರವಣಿಗೆಯುದ್ದಕ್ಕೂ ನಡೆದ ಡೊಳ್ಳುಕುಣಿತ,ಕೋಲಾಟ,ಭಜನೆ ಗ್ರಾಮಸ್ಥರ ಮನಸೆಳೆದವು.

ಗ್ರಾಮದ ಹಿರಿಯರಾದ ಜಗನ್ನಾಥ ಸಿದ್ದೇಶ್ವರೆ, ಬಾಬುರಾವ ಭುರೆ, ಶಿವರಾಜ ಭುರೆ, ಸಿದ್ದರಾಮೇಶ್ವರ ಭುರೆ,ಸತಿಶ ಸಿದ್ದೇಶ್ವರೆ,ಬಸವರಾಜ ಮಡಿವಾಳ,ಹನುಮಂತ ಸಿದ್ದೇಶ್ವರೆ, ಕಲ್ಲಪ್ಪ ಭುರೆ, ಸೂರ್ಯಕಾಂತ ಬರ್ಮಾ, ರಾಜಕುಮಾರ ಬರ್ಮಾ, ಜಗದೇವಿ ಶಿವರಾಜ ಸೇರಿದಂತೆ ಇತರ ಮಹಿಳೆಯರು, ಮಕ್ಕಳು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ನಂತರ ಬೀರದೇವ ಮಂದಿರದಲ್ಲಿ ವಿವಿಧ ಕಲಾ ತಂಡದವರಿಂದ ಭಜನಾ ಕಾರ್ಯಕ್ರಮ ನೆರವೇರಿತು.

# ಲಿಪಿಕ ನೌಕರರಿಗೆ ಮಾನಸಿಕ ಕಿರುಕುಳ, ಕ್ರಮಕ್ಕೆ ಆಗ್ರಹ


• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ಶಾಲಾ ಶಿಕ್ಷಣ ಇಲಾಖೆಯ ಲಿಪಿಕ ನೌಕರರಿಗೆ ವಿವಿಧ ಸಂಘ ಸಂಸ್ಥೆಗಳ ಅಧ್ಯಕ್ಷರು, ಕಾರ್ಯದರ್ಶಿಗಳು, ಪದಾಧಿಕಾರಿಗಳು ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಮಯದಲ್ಲಿ ಮಾನಿಸಕ ಕಿರುಕುಳ, ಹಿಂಸೆ ನೀಡುತ್ತಲಿದ್ದಾರೆ, ಅವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಲಿಪಿಕ ನೌಕರರ, ವಾಹನ ಚಾಲಕರ ಮತ್ತು ಗ್ರೂಪ್ ಡಿ ನೌಕರರ ಸಂಘದ ಪದಾಧಿಕಾರಿಗಳು ಆಗ್ರಹಿಸಿದ್ದಾರೆ.

ಈ ಕುರಿತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಲಿಪಿಕ ನೌಕರರ ಸಂಘದ ತಾಲೂಕು ಅಧ್ಯಕ್ಷ ರಾಜಕುಮಾರ ಹೂಗಾರ ನೇತೃತ್ವದಲ್ಲಿ ಸೋಮವಾರ ಮನವಿ ಸಲ್ಲಿಸಿದ ಸಂಘದ ಪದಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆಯ ಕಚೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಲಿಪಿಕ ನೌಕರರಿಗೆ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾ, ನಾನು ಇಂತಹ ಸಂಘದ ಅಧ್ಯಕ್ಷ, ಕಾರ್ಯದರ್ಶಿ ಇದ್ದೇನೆ, ಹೀಗೆ ಮಾಡು, ಹಾಗೆ ಮಾಡು ಎಂದು ಕಚೇರಿಯ ಒಳಗೆ ಬಂದು ಮಾನಸಿಕ ಹಿಂಸೆ ನೀಡುತ್ತಲಿದ್ದಾರೆ. ಶಿಕ್ಷಕರಿಗಾಗಿ ಹಗಲಿರುಳು ಕರ್ತವ್ಯನಿರ್ವಹಿಸುತ್ತಿರುವ ಲಿಪಿಕ ನೌಕರರಿಗೆ ಮಾನಸಿಕೆ ಹಿಂಸೆ ನೀಡುತ್ತಿರುವ ವಿವಿಧ ಸಂಘದ ಪದಾಧಿಕಾರಿಗಳಿಗೆ ಯಾರೂ ಕಡಿವಾಣ ಹಾಕುತ್ತಿಲ್ಲ. ಪ್ರೌಢಶಾಲಾ ಸಹ ಶಿಕ್ಷಕ, ಪ್ರಾಥಮಿಕ ಶಾಲಾ ಶಿಕ್ಷಕ, ಮುಖ್ಯ ಶಿಕ್ಷಕ, ವಿವಿಧ ಜಾತಿ ಆಧಾರಿತ ಸಂಘಟನೆಗಳ ಶಿಕ್ಷಕರ ಪದಾಧಿಕಾರಿಗಳು ಪದೇ, ಪದೇ ಕಚೇರಿಗೆ ಆಗಮಿಸಿ ಈ ರೀತಿ ಹಿಂಸೆ ನೀಡುತ್ತಿರುವುದರಿಂದ ಕೆಲಸದ ಕಾರ್ಯಗಳಲ್ಲಿ ತೆ-ಡಂದರೆ ಉಂಟಾಗುತ್ತಲಿದೆ. ತಾಂತ್ರಿಕ ಸಮಸ್ಯೆಗಳಿಂದ ಯಾವುದೇ ಒಂದು ಕೆಲಸಕ್ಕೆವಿಳಂಬವಾದರೇ ಅದೇ ನೆಪ ಒಡ್ಡಿ ಕಚೇರಿಯಲ್ಲಿ ಅವ್ಯಾಚ್ಯ ಶಬ್ದಗಳಿಂದ ನಿಂದಿಸುತ್ತಾ ಕೆಲಸಮಾಡುವುದಕ್ಕೆ ತಡೆಒಡ್ಡುತ್ತಿದ್ದಾರೆ. ಕಾರಣ ತಕ್ಷಣವೇ ಇಂತಹ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಕಚೇರಿ ಸಮಯದಲ್ಲಿ ಕೆಲಸ ಮಾಡುತ್ತಿರುವ ಲಿಪಿಕ ನೌಕರರ ಮೇಲೆ ಒತ್ತಡ ಹೇರುವುದು ಸೇರಿದಂತೆ ಅವರಿಗೆ ಮಾನಸಿಕೆ ಹಿಂಸೆ ನೀಡುತ್ತಿರುವುದು ತಕ್ಷಣವೇ ತಡೆಯಬೇಕು ಎಂದು ಒತ್ತಾಯಿಸಿದರು.ಈ ಸಂದರ್ಭದಲ್ಲಿ ಲಿಪಿಕ ನೌಕರರ ಸಂಘದ ತಾಲೂಕು ಅಧ್ಯಕ್ಷ ರಾಜಕುಮಾರ ಹೂಗಾರ, ಕಾರ್ಯದರ್ಶಿ ಶೇಖ ಅಬ್ದುಲಗನಿ, ಉಪಾಧ್ಯಕ್ಷ ಶ್ರೀನಿವಾಸ ಜೋಶಿ, ಖಜಾಂಚಿ ಝುರಣಪ್ಪ, ಸಹ ಕಾರ್ಯದರ್ಶಿ ವೆಂಕಟೇಶ, ಸಂಘಟನಾ ಕಾರ್ಯದರ್ಶಿ ಉಮಾಕಾಂತ, ಶಿವಕುಮಾರ ಫುಲಾರಿ, ಸಂಜೀವಕುಮಾರ, ಮಲ್ಲಿಕಾರ್ಜುನ ಕನ್ನಾಳೆ, ಮಹೇಶ ಕುಲಕರ್ಣಿ ಹಲವರು ಇದ್ದರು.

# ಬೀದರ್ ಜಿಲ್ಲೆ ಬರಪೀಡಿತ ಘೋಷಿಸಲು ಆಗ್ರಹ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಗಡಿಜಿಲ್ಲೆ ಬೀದರ್‌ನಲ್ಲಿ ಪ್ರಸ್ತುತ ವರ್ಷದ ಮುಂಗಾರು ಹಂಗಾಮಿನಲ್ಲಿ ಮಳೆಯ ಕೊರತೆ ಎದುರಾಗಿದ್ದು ಜಿಲ್ಲೆಯ ರೈತರು ಆತಂಕಕ್ಕಿಡಾಗಿದ್ದಾರೆ. ಕೂಡಲೇ ರಾಜ್ಯ ಬೀದರ್ ಜಿಲ್ಲೆಯನ್ನು ಬರಪೀಡಿತ ಜಿಲ್ಲೆಯನ್ನಾಗಿ ಘೋಷಣೆ ಮಾಡಬೇಕು ಎಂದು ತಾಲೂಕು ಕನ್ನಡಪರ ಸಂಘಟನೆಯ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ.

ಈ ಕುರಿತು ನಗರದ ತಹಸೀಲ್ ಕಚೇರಿಯಲ್ಲಿ ಕನ್ನಡಪರ ಸಂಘಟನೆ ಹಿರಿಯ ಹೋರಾಟಗಾರ ಸಂಗಮೇಶ ಗುಮ್ಮೆ ನೇತೃತ್ವದಲ್ಲಿ ಮಂಗಳವಾರ ತಹಸೀಲ್ದಾರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ಮುಂಗಾರು ಹಂಗಾಮಿನಲ್ಲಿ ಬಹುತೇಕ ರೈತರ ಜಮೀನಿನಲ್ಲಿ ಬಿತ್ತನೆಯಾದ ಸೋಯಾ ಅವರೆ, ಹೆಸರು, ಕಡಲೆ, ತೊಗರಿ ಸೇರಿ ವಿವಿಧ ಬೆಳೆಗಳು ಮಳೆಯ ಕೊರತೆಯಿಂದ ಒಣಗುತ್ತಿವೆ.

ಇದರಿಂದ ಸಾಲಸೋಲ ಮಾಡಿ ಬಿತ್ತನೆ ಮಾಡಿದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಆರ್ಥಿಕವಾಗಿ ತೊಂದರೆ ಅನುಭವಿಸುತ್ತಿದ್ದಾರೆ. ರಾಜ್ಯ ಸರಕಾರ ಜಿಲ್ಲೆಯ ರೈತರ ಸಂಕಷ್ಟವನ್ನು ಗಂಭೀರವಾಗಿ ಪರಿಗಣಿಸಿ ಬೀದರ್ ಜಿಲ್ಲೆ ಬರಪೀಡಿತ ಪ್ರದೇಶವನ್ನಾಗಿ ಘೋಷಿಸಿ ಸೂಕ್ತ ಪರಿಹಾರ ವಿತರಿಸಿ ರೈತರ ನೆರವಿಗೆ ಧಾವಿಸಬೇಕು ಎಂದು ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರದಲ್ಲಿ ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಕನ್ನಡಪರ ಸಂಘಟನೆಯ ಪ್ರಮುಖರಾದ ಮಾಳಾಸ್ಕಾಂತ ವಾಘೆ, ಸಂಜೀವಕುಮಾರ ನಾವದಗಿ, ಸಂತೋಷ ಬಿಜಿ ಪಾಟೀಲ್, ಭದ್ರೇಶ ಸ್ವಾಮಿ, ಶಿವಕುಮಾರ ಸ್ವಾಮಿ, ಅಶೋಕ ಅಂಬಿಗಾರ, ಓಂಕಾರ ಮಚಕೂರಿ, ಆದಿಲ್ ಸಯ್ಯದ್, ಸುರೇಶ ಕಾಂಬಳೆ, ಸಂಗಮೇಶ ಮುರಗೆ, ಸಂಜು ಲಂಜವಾಡ, ಶಿವರಾಜ ಭೂರೆ, ಚಂದ್ರಕಾಂತ ಮಾಲೂರೆ, ರಾಜಕುಮಾರ ಜೋಶಿ ಸೇರಿದಂತೆ ಹಲವರು ಇದ್ದರು.

# ೮೦ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅಚ್ಚುಕಟ್ಟಾಗಿ ಆಚರಿಸೋಣ: ಅಮರೇಶ್

• ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು




ಕೊಟ್ಟೂರು ತಾಲೂಕು ಕಛೇರಿಯಲ್ಲಿ ಇಂದು 80ನೇ ಸ್ವಾತಂತ್ರ್ಯ ದಿನಾಚರಣೆಯ ಪೂರ್ವಸಿದ್ದತಾ ಸಭೆಯನ್ನು ತಹಶೀಲ್ದಾರರು ಹಾಗು ಅಧ್ಯಕ್ಷರು, ರಾಷ್ಟ್ರೀಯ ಹಬ್ಬಗಳ ಅಚರಣಾ ಸಮಿತಿ ಇವರ ಅಧ್ಯಕ್ಷತೆಯಲ್ಲಿ ನಡೆಯಿತು. ಮಾನ್ಯಶಾಸಕರು ಕೊಟ್ಟೂರು ಮತ್ತು ಹಗರಿಬೊಮ್ಮನಹಳ್ಳಿ ಎರಡೂ ಕಡೆ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸುವ ಹಿನ್ನೆಲೆಯಲ್ಲಿ ಕೊಟ್ಟೂರಿನಲ್ಲಿ ಬೆಳಿಗ್ಗೆ 7.45ಕ್ಕೆ ಧ್ವಜಾರೋಹಣ ಮಾಡಲಾಗುವುದು. ಎಲ್ಲಾ ಕೊಟ್ಟೂರು ಪಟ್ಟಣದ ಎಲ್ಲಾ ಶಾಲಾ–ಕಾಲೇಜಿನಲ್ಲಿ ಬೆಳಿಗ್ಗೆ 7.15ಕ್ಕೆ ಧ್ವಜಾರೋಹಣ ಮುಗಿಸಿಕೊಂಡು ತಾಲೂಕು ಕ್ರೀಡಾಂಗಣಕ್ಕೆ ಆಗಮಿಸವಂತೆ ತಿಳಿಸಿದರು. ಪೊಲೀಸ್ ಸಿಬ್ಬಂದಿ, ಗೃಹರಕ್ಷಕ ದಳ, ಎನ್ಸಿಸಿ ಹಾಗೂ ವಿವಿಧ ಶಾಲಾ–ಕಾಲೇಜಿನ ಮಕ್ಕಳ 13 ಅಚ್ಚುಕಟ್ಟಾದ ತುಕಡಿಗಳನ್ನು ಸಿದ್ದಪಡಿಸಲು ತಿಳಿಸಿದರು. 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಯಾವುದೇ ಲೋಪವಾಗದಂತೆ ಅಚ್ಚುಕಟ್ಟಾಗಿ ಆಚರಿಸಬೇಕು. ಸ್ವಾತಂತ್ರ್ಯ ಹೋರಾಟ ಹಿನ್ನೆಲೆಯಲ್ಲಿ ಮಹಾತ್ಮ ಗಾಂಧೀಜಿಯವರು ಕೊಟ್ಟೂರಿನಲ್ಲಿ ಮಾಡಿದ ಭಾಷಣದ ಪ್ರೇರಣೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಹೋರಾಟಗಾರರು ಸ್ವಾತಂತ್ರ್ಯಕ್ಕೆ ಧುಮುಕಿದ ಹಿನ್ನೆಲೆಯಲ್ಲಿ ಅವರ ಯಶೋಗಾಥೆಯ ಕುರಿತು ವಿಶೇಷ ಉಪನ್ಯಾಸವನ್ನು ನೀಡುವಂತೆ ಸಾಹಿತಿ ಹಾಗೂ ಪತ್ರಕರ್ತರಾದ ಉಜ್ಜಿನಿ ರುದ್ರಪ್ಪ ಇವರಿಗೆ ಸಭೆಯಲ್ಲಿ ಕೋರಲಾಯಿತು. ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರನ್ನು ಗುರುತಿಸಿ ಸನ್ಮಾನಿಸಲು ತೀರ್ಮಾನಿಸಲಾಗಿದ್ದು, ದಿನಾಂಕ: 10.08.2026ರ ಒಳಗೆ ಮಾಹಿತಿಯನ್ನು ಸಲ್ಲಿಸುವಂತೆ ತಿಳಿಸಿದರು. ಶಾಲಾ–ಕಾಲೇಜು ಮಕ್ಕಳ ಕಾರ್ಯಕ್ರಮವನ್ನು ಈ ಬಾರಿ ಸಾರ್ವಜನಿಕರ ವೀಕ್ಷಣೆಯ ಅನುಕೂಲತೆ ದೃಷ್ಟಿಯಿಂದ ವೇದಿಕೆ ಮೇಲೆ ಮಾಡಲು ತೀರ್ಮಾನಿಸಿದ್ದು, ವೇದಿಕೆಯ ಸ್ಥಳಾವಕಾಶ ನೋಡಿಕೊಂಡು 25–30 ವಿದ್ಯಾರ್ಥಿಗಳನ್ನೊಳಗೊಂಡ 5–7 ನಿಮಿಷಗಳ ಕಾಲಾವಕಾಶದ ಆಕರ್ಷಣೀಯ ದೇಶ ಭಕ್ತಿ, ಸ್ವಾತಂತ್ರ್ಯ ದಿನವನ್ನು ನೆನಪಿಸುವಂತಹ ಗೀತೆಗಳಿಗೆ ನೃತ್ಯ ಸಂಯೋಜನೆಯನ್ನು ಮಾಡಬೇಕು. ಸಮಯ ಅಭಾವದಿಂದ ಆಗಷ್ಟ್–15 ರಂದು ಭಾಗವಹಿಸಿದ ಶಾಲಾ ಮಕ್ಕಳು ಜನವರಿ–26ರಲ್ಲಿ ಭಾಗವಹಿಸಬಾರದು. ಹಾಗೆ ಕಡಿಮೆ ತಂಡಗಳು ಭಾಗವಹಿಸುವಂತೆ ನೋಡಿಕೊಳ್ಳುವಂತೆ ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಆನಂದ ಕುಮಾರ್, ಮುಖ್ಯಾಧಿಕಾರಿ ನಸರುಲ್ಲಾ, ಮುಖ್ಯ ಪಶುವೈದ್ಯಾಧಿಕಾರಿ ಡಾ. ಚಂದ್ರಾನಾಯ್ಕ, ಇಸಿಓ ನಿಂಗಪ್ಪ, ಮುಖಂಡರಾದ ಬಿ ದುರುಗಪ್ಪ, ಟಿ.ಹನುಮಂತಪ್ಪ ವಕೀಲರು, ರೈತಸಂಘದ ರಾಜ್ಯ ಉಪಾಧ್ಯಕ್ಷ ಭರಮಣ್ಣ, ಚಲವಾದಿ ಮಂಜುನಾಥ, ವಿವಿಧ ಶಾಲಾ–ಕಾಲೇಜಿನ ಪ್ರಾಚಾರ್ಯರು, ಮುಖ್ಯಗುರುಗಳು, ವಿವಿಧ ಇಲಾಖೆಯ ಅಧಿಕಾರಿ ಸಿಬ್ಬಂದಿಯವರು ಹಾಜರಿದ್ದರು. ಸಿ ಮ ಗುರುಬಸವರಾಜ ಸ್ವಾಗತಿಸಿ ನಿರೂಪಿಸಿದರು.

# ಹನೇಹಳ್ಳಿಯ ಜನತಾಕೋ-ಆಪರೇಟಿವ್ ಸೊಸೈಟಿಯಿಂದಚೆಕ್ ವಿತರಣೆ



• ಮಲ್ಲಮ್ಮ ನುಡಿ ವಾರ್ತೆಗೋಕರ್ಣ

ಹನೇಹಳ್ಳಿಯಜನತಾಕೋ–ಆಪರೇಟಿವ್‌ಕ್ರೆಡಿಟ್‌ಸೊಸೈಟಿ ವತಿಯಿಂದಧರ್ಮದಾನನಿಧಿ ಹಾಗೂಋಣಸಂದಾಯ ನಿಧಿಯನ್ನುಸಂಸ್ಥೆಯಅಧ್ಯಕ್ಷರುಹಾಗೂನಿರ್ದೇಶಕರುಚೆಕ್ ಮೂಲಕವಿತರಿಸಿದರು. ಶಿವಾನಂದನೀಲಕಂಠರೇಡಕರ ದುಬ್ಬನಶಶಿ ಇವರಿಗೆ ಸಂಘದಧರ್ಮದಾನ ನಿಧಿಯಿಂದ5ಸಾವಿರರೂ.ಮೌಲ್ಯದಚೆಕ್ ವಿತರಿಸಿದರು. ಋಣ ಪರಿಹಾರ ನಿಧಿಯಿಂದ ಮೃತ ಅಲ್ತಾಪ ಅಮೀರಖಾನತದಡಿಇವರ ವಾರಸುದಾರಳಾದ ಮರಿಯಾಂಬಿ ಅಮೀರಖಾನಇವರಿಗೆ 81154 ರೂ., ಹರಿಹರಗಣೇಶ ನಾಯ್ಕ ಮೊರಬಾಇವರ ವಾರಸುದಾರಳಾದ ಪತ್ನಿ ಸರಸ್ವತಿ ಹರಿಹರ ನಾಯ್ಕಇವರಿಗೆ 198125 ರೂ., ಲಕ್ಷ್ಮೀರಾಮಕೃಷ್ಣಗೌಡದಂಡೇಭಾಗಇವರ ವಾರಸುದಾರೃಆದ ಅಳಿಯ ಮಂಕಾಳ ನಾಗಪ್ಪಗೌಡಅವರಿಗೆ 198125 ಚೆಕ್ ವಿತರಿಸಲಾಯಿತು.ಹನೇಹಳ್ಳಿಯ ಜನತಾಕೋ–ಆಪರೇಟಿವ್‌ಕ್ರೆಡಿಟ್ ಸೊಸೈಟಿಅಧ್ಯಕ್ಷಪಿ.ಎನ್.ನಾಯ್ಕ, ನಿರ್ದೇಶಕರಾದಗಜಾನನರಾಮ ನಾಯಕ, ಪುಷ್ಪಾ ತಳೇಕರ, ಮಂಜುನಾಥ ಗುನಗಾ, ನಾರಾಯಣ ಗುನಗಾ, ರೋಹಿದಾಸಜನ್ನು, ಸೊಸೈಟಿಯ ವ್ಯವಸ್ಥಾಪಕರು ಹಾಗೂ ಸಿಬ್ಬಂದಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ೪೬ನೇ ಮೈಲ್ ಕಾಲುವೆ ಕುಸಿತ: ಮಾಜಿ ಸಚಿವ ವೆಂಕಟರಾವ್ ನಾಡಗೌಡ ಭೇಟಿ, ಶೀಘ್ರ ದುರಸ್ತಿಗೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು




ಆ.04:ತುಂಗಾಭದ್ರಾ ಜಲಾಶಯದಲ್ಲಿ ಈಗಾಗಲೇ 50 ಟಿಎಂಸಿ ನೀರು ಸಂಗ್ರಹವಾಗಿರುವುದು ಅನ್ನದಾತರಲ್ಲಿ ಸಂತಸ ತಂದಿದೆ. ಆದರೆ, ಇತ್ತ ಕಾಲುವೆಗಳು ದುರಸ್ತಿಯಾಗದೆ ನೀರಿಲ್ಲದೆ ಬೆಳೆಗಳು ಒಣಗುವ ಆತಂಕ ಎದುರಾಗಿದ್ದು, ರೈತರು ಕಂಗಾಲಾಗುವಂತೆ ಮಾಡಿದೆ. ಈ ಗಂಭೀರ ಪರಿಸ್ಥಿತಿಯನ್ನು ಮನಗಂಡು, ಕಾರಟಗಿ ತಾಲೂಕಿನ ಮೈಲಾಪುರ ಹಾಗೂ ಸಿಂಧನೂರು ದುರ್ಗಾ ಕ್ಯಾಂಪ್ ನಡುವಿನ 46ನೇ ಮೈಲ್ ಬಳಿ ಕುಸಿದಿರುವ ಕಾಲುವೆ ಸ್ಥಳಕ್ಕೆ ಮಾಜಿ ಸಚಿವರು, ಕೆಓಎಫ್ ರಾಜ್ಯಾಧ್ಯಕ್ಷರಾದ ವೆಂಕಟರಾವ್ ನಾಡಗೌಡ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.ಅಧಿಕಾರಿಗಳ ನಿರ್ಲಕ್ಷ್ಯಧೋರಣೆ ಖಂಡನೆತುಂಗಾಭದ್ರಾ ಜಲಾಶಯ ಭರ್ತಿಯಾಗಿ ರೈತರ ಮುಖದಲ್ಲಿ ಮಂದಹಾಸ ಮೂಡಬೇಕಿದ್ದ ಸಂದರ್ಭದಲ್ಲಿ, ಅಧಿಕಾರಿಗಳ ಬೇಜವಾಬ್ದಾರಿಯಿಂದ ರೈತರಿಗೆ ಆತಂಕ ಎದುರಾಗಿದೆ. ಜಲಾಶಯದಲ್ಲಿ 50 ಟಿಎಂಸಿ ನೀರು ಲಭ್ಯವಿದ್ದರೂ, ಕಾಲುವೆಗಳನ್ನು ಕಾಲಕಾಲಕ್ಕೆ ದುರಸ್ತಿ ಮಾಡದೆ ಸಂಬಂಧಪಟ್ಟ ಅಧಿಕಾರಿಗಳು ತೋರುತ್ತಿರುವ ನಿರ್ಲಕ್ಷ್ಯ ಧೋರಣೆಯನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ವೆಂಕಟರಾವ್ ನಾಡಗೌಡರು ತೀವ್ರವಾಗಿ ಆಕ್ರೋಶ ವ್ಯಕ್ತಪಡಿಸಿದರು.ಸ್ಥಳದಲ್ಲಿದ್ದ ಇಲಾಖೆಯ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಅವರು, ಕೂಡಲೇ ಕಾಲುವೆ ದುರಸ್ತಿ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳುವಂತೆ ತಾಕೀತು ಮಾಡಿದರು. ಮುಂದಿನ 3 ರಿಂದ 4 ದಿನಗಳೊಳಗೆ ಕಾಲುವೆ ದುರಸ್ತಿ ಪೂರ್ಣಗೊಳಿಸದಿದ್ದಲ್ಲಿ, ಕುಸಿದಿರುವ ಕಾಲುವೆ ಸ್ಥಳದಲ್ಲಿಯೇ ರೈತರೊಂದಿಗೆ ಸೇರಿ ಉಗ್ರ ಹೋರಾಟ ಹಾಗೂ ಧರಣಿ ನಡೆಸಲಾಗುವುದು ಎಂದು ಸರ್ಕಾರ ಹಾಗೂ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.

ಬೆಳೆಗೆ ನೀರಿಲ್ಲದೆ ಕಂಗಾಲಾಗಿರುವ ರೈತರ ಹಿತಾಸಕ್ತಿಗೆ ಯಾವುದೇ ಧಕ್ಕೆಯಾಗದಂತೆ ಎಚ್ಚೆತ್ತುಕೊಳ್ಳಬೇಕು. ಕಾಲುವೆ ದುರಸ್ತಿ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಿ, ಒಣಗುತ್ತಿರುವ ಬೆಳೆಗಳಿಗೆ ತಕ್ಷಣವೇ ನೀರು ಪೂರೈಕೆಯಾಗುವಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಈ ಸಂಧರ್ಭದಲ್ಲಿ ಜೆಡಿಎಸ್ ಮುಖಂಡರಾದ ಚಂದ್ರು ಭೂಪಾಲ್ ನಾಡಗೌಡ, ಅರ್ಜುನ್ ನಾಡಗೌಡ ,ಜೆಡಿಎಸ್ ಪಕ್ಷದ ನಗರ ಘಟಕ ಅಧ್ಯಕ್ಷರಾದ ರವಿ ಪನ್ನೂರ್, ವೆಂಕಟೇಶ್ ನಂಜಲದಿನ್ನಿ , ಅಂಬರೀಶ್ ಮುಳ್ಳೂರ್, ಶಾಂತರೆಡ್ಡಿ ಕುನ್ನಟಗಿ ಕ್ಯಾಂಪ್, ವೆಂಕೋಬ ಬಾವಿಕಟ್ಟಿ, ಅಲ್ಲಮಪ್ರಭು ಪೂಜಾರ್, ರಾಮರೆಡ್ಡಿ ಪಗಡದಿನ್ನಿ, ರಾಮರಾವ್ ಗಾಂಧಿನಗರ, ಮಹಾವೀರ ಶೇಟ್, ಎಸ್ ಬಿ ರೆಡ್ಡಿ, ತಿಮ್ಮನಗೌಡ ರಾಮತ್ನಾಳ, ಪಂಪನಗೌಡ ಹಂಚಿನಾಳ, ಸಂಗಮೇಶ್ ವಿರುಪಾಕ್ಷಿ ಹಂಚಿನಾಳ, ವಿರುಪಾಕ್ಷಿ ಗೌಡ, ಗೊರೆಬಾಳು ಕ್ಯಾಂಪ್ ವೆಂಕಟೇಶ, ಗೋಪಿ, ಸತ್ತಿಬಾಬು, ಆಸಿಫ್ ಸೇರಿದಂತೆ ಇತರು ಇದ್ದರು.

# ಆ.15 ರಂದು ನಾಮಧಾರಿ ನೌಕರರ ಸಂಘದಿಂದ ಪೂಜೆ, ಅನ್ನಸಂತರ್ಪಣೆ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ



ಪಟ್ಟಣದ ಶ್ರೀ ಕೋಟೆ ಮಾರುತಿ ದೇವಸ್ಥಾನದಲ್ಲಿ ತಾಲೂಕು ನಾಮಧಾರಿ ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಆ.15 ರಂದು ಶ್ರಾವಣ ಮಾಸದ ಮೊದಲನೇ ಶನಿವಾರದ ನಿಮಿತ್ತ ಶ್ರೀ ಕೋಟೆ ಮಾರುತಿ ದೇವರಿಗೆ ವಿಶೇಷ ಪೂಜೆ ಹಾಗೂ ಅನ್ನಸಂತರ್ಪಣೆ ನಡೆಯಲಿದೆ. ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ದೇವರ ಪ್ರಸಾದ ಸ್ವೀಕರಿಸುವಂತೆ ಸಮಿತಿಯವರು ತಿಳಿಸಿದ್ದಾರೆ.

# ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಬಿ.ಕೆ ವಿದ್ಯಾಕರೆ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ




ಮದ್ಯಪಾನ,ತಂಬಾಕು ಮುಂತಾದ ಮಾಧಕ ವಸ್ತುಗಳಬಳಕೆಯಿಂದಯುವಜನತೆದೂರವಿರಬೇಕು. ವ್ಯಸನ ಮುಕ್ತ ಸಮಾಜದಿಂದ ಮಾತ್ರ ಸಶಕ್ತ ಭಾರತ ನಿರ್ಮಾಣ ಸಾಧ್ಯವಿದೆಎಂದು ಪ್ರಜಾಪಿತಈಶ್ವರಿ ವಿಶ್ವವಿದ್ಯಾಲಯದಬಿ.ಕೆ.ವಿದ್ಯಾಹೇಳಿದರು.ಪಟ್ಟಣದ ಜಿ.ಸಿ.ಕಾಲೇಜಿನಲ್ಲಿ ಎನ್‌ಸಿಸಿ, ಎನ್‌ಎಸ್‌ಎಸ್, ವೈಆರ್‌ಸಿ ಜಿಲ್ಲಾತಂಬಾಕು ನಿಯಂತ್ರಣಘಟಕ, ಜಿಲ್ಲಾಆರೋಗ್ಯ ಮತ್ತುಕುಟುಂಬ ಕಲ್ಯಾಣ ಇಲಾಖಾಸಹಯೋಗದಲ್ಲಿಏರ್ಪಡಿಸಲಾಗಿದ ಮಹಾಂತ ಶಿವಯೋಗಿ ಜಯಂತಿ ನಿಮಿತ್ತ ವ್ಯಸನ ಮುಕ್ತ ದಿನಾಚರಣೆಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಜಿಲ್ಲಾತಂಬಾಕು ನಿಯಂತ್ರಣಕೋಶದ ಸಾಮಾಜಿಕಕಾರ್ಯಕರ್ತಗೋರೇಸಾಬ ನದಾಫ್,ತಂಬಾಕು ನಿಯಂತ್ರಣಕೋಶದಅಧಿಕಾರಿ ಪ್ರೇಮಕುಮಾರ ನಾಯ್ಕ, ಬಿಕೆ ರೂಪಾ ಮಾಧಕ ವಸ್ತುವನ್ನು ಬಳಕೆ ಮಾಡದಿರುವಬಗ್ಗೆ ವಿದ್ಯಾರ್ಥಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು.ಪ್ರಾಚಾರ್ಯ ಸಿದ್ದಲಿಂಗಸ್ವಾಮಿ ವಸ್ತ್ರದಅಧ್ಯಕ್ಷತೆ ವಹಿಸಿದ್ದರು. ಗ್ರಂಥಪಾಲಕ ನಂಜುಂಡಯ್ಯ ಸ್ವಾಗತಿಸಿದರು.ಸಮಯ ನಾಯಕ ನಿರೂಪಿಸಿದರು.ದೈಹಿಕ ಶಿಕ್ಷಣ ನಿರ್ದೇಶಕ ಅಶ್ವಿನ್ ವಂದಿಸಿದರು . ಉಪನ್ಯಾಸಕರಾದ ಹರಿಪ್ರಸಾದದೇಸಾಯಿ, ಪ್ರವೀಣ ನಾಯ್ಕ, ಸುಲಕ್ಷಾ ನಾಯ್ಕ, ಹೇಮಾಗಾಂವಕರ, ವೀಣಾಗೌಡ ಉಪಸ್ಥಿತರಿದ್ದರು

## ಮಳೆಗಾಗಿ ಕೋಟೆ ಭಾಗದ ರೈತರಿಂದ ಮಳೆ ಮಲ್ಲೇಶ್ವರ ಸ್ವಾಮಿಗೆ ವಿಶೇಷ ಪೂಜೆ



• ಮಲ್ಲಮ್ಮ ನುಡಿ ವಾರ್ತೆಕೊಟ್ಟೂರು

ತಾಲೂಕಿನಲ್ಲಿ ಮಳೆ ಬಾರದೆ ನಿಮಿತ್ತ ಶ್ರೀ ಗುರು ಬಸವೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಪಟ್ಟಣದ ಭಕ್ತರು ಶ್ರೀ ಸ್ವಾಮಿಗೆ ಪೂಜೆ ಸಲ್ಲಿಸಿ.

ನಂತರ ಪಟ್ಟಣದ ಮಳೆ ಮಲ್ಲೇಶ್ವರ ಸ್ವಾಮಿ ದೇವಾಲಯದಲ್ಲಿ ಮಳೆಗಾಗಿ ಪ್ರಾರ್ಥಿಸಿ ವಿಶೇಷ ಪೂಜೆಯನ್ನು ಸಲ್ಲಿಸಲಾಯಿತು.ಕೊಟ್ಟೂರೇಶ್ವರ ಭಜನಾ ಮಂಡಳಿ ಮಳೆಗಾಗಿ ಪ್ರಾರ್ಥಿಸಿ ವರುಣ ದೇವನನ್ನು ಕುರಿತು ಭಜನೆ ಮಾಡಲಾಯಿತು. ದೇವಾಲಯವನ್ನುಭಕ್ತರು ಹಸಿರು ತೋರಣಗಳಿಂದ ಅಲಂಕರಿಸಿದ್ದರು. ನಂತರ ಮಳೆ ತೋರಣಗಳಿಂದ ಮಲ್ಲೇಶ್ವರ ಸ್ವಾಮಿಗೆ ರುದ್ರಾಭಿಷೇಕ ಮತ್ತು ವಿಶೇಷ ಪೂಜೆ ಸಲ್ಲಿಸಲಾಯಿತು.

ಪಟ್ಟಣದ ಕೋಟೆ ಭಾಗದ ರೈತರು ಮಳೆಗಾಗಿ ಮಲ್ಲೇಶ್ವರ ಸ್ವಾಮಿಯ ಲಿಂಗದ ಸುತ್ತ ಮಣ್ಣಿನ ಕಟ್ಟೆ ಕಟ್ಟಿ ಪೂಜೆ ಸಲ್ಲಿಸಿದ ತರುವಾಯ ಗಂಗೆ ಪೂಜೆ ಸಲ್ಲಿಸಿ ಕರಗಲ್ಲಿಗೆ ಪೂಜೆ ಸಲ್ಲಿಸಲಾಯಿತು.

ನಂತರ ಲಿಂಗದ ಸುತ್ತ ಕಟ್ಟಿದ ಮಣ್ಣಿನ ಕಟ್ಟೆಗೆ ಭಕ್ತರು 13 ಬಿಂದಿಗೆ ನೀರನ್ನು ಹಾಕಿದ ನಂತರ ಮಣ್ಣಿನ ಕಟ್ಟೆ ಈಶಾನ್ಯ ಮೂಲೆಗೆ ಹೊಡೆದಿದ್ದರಿಂದ ಈ ಸಲ ಮಳೆಸಮೃದ್ಧವಾಗಿ ಬರಲಿದೆ ಎಂದು ಭಕ್ತರು ಹರ್ಷಗೊಂಡರು.

## ಡಿಗ್ಗಿ ಗ್ರಾಮದಲ್ಲಿ ಲೆಕ್ಕ ಪರಿಶೋಧನೆ ಗ್ರಾಮಸಭೆ





• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ತಾಲೂಕಿನ ಡಿಗ್ಗಿ ಗ್ರಾಮ ಪಂಚಾಯತನಲ್ಲಿ 2026–27ನೇ ಸಾಲಿನ ಸಾಮಾಜಿಕ ಪರಿಶೋಧನೆ ಹಾಗೂ ನರೇಗಾ ಯೋಜನೆ ಮತ್ತು 15 ನೇ ಹಣಕಾಸು ಅನುದಾನ ಆಯೋಗದ ಸಾಮಾಜಿಕ ಲೆಕ್ಕ ಪರಿಶೋಧನೆ ಗ್ರಾಮ ಸಭೆಯನ್ನು ಶಿಕ್ಷಣ ಕ್ಷೇತ್ರದ ಶಿವಕುಮಾರ ಹೊನ್ನಾಳೆ ಅವರ ಅಧ್ಯಕ್ಷತೆಯಲ್ಲಿ ನಡೆಸಲಾಯಿತು.ನಂತರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಸೂರ್ಯಕಾಂತ ಅವರು ಗ್ರಾಮ ಸಭೆ ಉದ್ದೇಶ ಮತ್ತು ಮಹತ್ವದ ಬಗ್ಗೆ ತಿಳಿಸಿ, 2026–27 ನೇ ಸಾಲಿನ ನರೇಗಾ ಯೋಜನೆ ಹಾಗೂ 15 ನೇ ಹಣಕಾಸು ಅನುದಾನ ಆಯೋಗದ ಸಾಮಾಜಿಕ ಲೆಕ್ಕ ಪರಿಶೋಧನಾ ಹಾಗೂ ಮನರೇಗಾ ಯೋಜನೆ ಮತ್ತು ಇಲಾಖಾವಾರು ವೈಯಕ್ತಿಕ ಹಾಗೂ ಸಮುದಾಯ ಕಾಮಗಾರಿಗಳ ಬಗ್ಗೆ ವರದಿ ಮಂಡಿಸಿದರು. ಹಾಗೂ ವಿಕಸಿತ ಭಾರತ–ಗ್ಯಾರಂಟಿ ಫಾರ್ ರೋಜಗಾರ ಅಂಡ್ ಆಜೀವಿಕ ಮಿಷನ್–ಗ್ರಾಮೀಣ ಯೋಜನೆಯು ಜು.01ರಿಂದ ಜಾರಿಗೆ ಬಂದಿದೆ. ಗಿಃ–ಉಖಂಒಉ ಯೋಜನೆಯಡಿ ಗ್ರಾಮೀಣ ರೈತರಿಗೆ, ಕೃಷಿ ಕೂಲಿಕಾರರಿಗೆ ಹಾಗೂ ಗ್ರಾಮದ ಅಭಿವೃದ್ಧಿಗೆ ಇರುವ ವೈಯಕ್ತಿಕ, ಸಮುದಾಯಿಕ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಪ್ರತಿ ವರ್ಷ ಒಂದು ಕುಟುಂಬಕ್ಕೆ125 ದಿನ ಕೂಲಿ ಕೆಲಸ ಕೊಡುತ್ತಾರೆ. ಹೆಣ್ಣು–ಗಂಡಿಗೆ ಒಂದು ದಿನಕ್ಕೆ 382 ರೂ. ಸಮಾನ ಕೂಲಿ ನೀಡುತ್ತಾರೆ. ಗ್ಯಾರಂಟಿ ರೋಜಗಾರ ಕಾ9ಗೆ ಇ–ಕೆವೈಸಿ ಮಾಡಿಸಬೇಕು. ಗ್ರಾಮದ ಅಭಿವೃದ್ಧಿಗೆ ಅಗತ್ಯವಾದ ಸಮುದಾಯ ಕಾಮಗಾರಿಗಳು ಹಾಗೂ ವೈಯಕ್ತಿಕ ಕಾಮಗಾರಿಗಳ ಬಗ್ಗೆ ವಿವರಿಸಿದರು. ಈ ಸಂದರ್ಭದಲ್ಲಿ ಮೊದಲು ಕಾರ್ಯನಿರ್ವಹಿಸಿದ ಪಂಚಾಯತ ಅಭಿವೃದ್ಧಿ ಅಧಿಕಾರಿ ಪ್ರಶಾಂತ, ಮತ್ತು ಪ್ರಸ್ತುತ ಇರುವ ಪಂಚಾಯತ ಅಭಿವೃದ್ಧಿ ಅಧಿಕಾರಿ ವೆಂಕಟೇಶ ದೇಶಪಾಂಡೆ, ಎಸ್ ಡಿ ಎಂ ಸಿ ಅಧ್ಯಕ್ಷರಾದ ಸಂತೋಷ, ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕರಾದ ಸೂರ್ಯಕಾಂತ, ಖಇಅ ಸಂಯೋಜಕರಾದ ಸವಿತಾ ನಾಗೇಶ, ತಾಂತ್ರಿಕ ಸಹಾಯಕರಾದ ಅರ್ಜುನ, ವಿರೂಪಾಕ್ಷ, ಶೇಖರ, ಗ್ರಾಮ ಪಂಚಾಯತಿ ಡಿಇಓ ಸಾಗರ, ಬಿಲ್ ಕಲೆಕ್ಟರ್ ಭೀಮರಾವ್, ಲಕ್ಷ್ಮೀ ಗ್ರಾಮಸ್ಥರಾದ ದೇವೇಂದ್ರ ಪಾಟೀಲ, ಸಂಗಮೇಶ, ಗ್ರಾ.ಪಂ. ಸಿಬ್ಬಂದಿಗಳು ಕೂಲಿಕಾರರು ಹಾಗೂ ಸಾಮಾಜಿಕ ಪರಿಶೋಧನೆ ತಂಡದವರು ಉಪಸ್ಥಿತರಿದ್ದರು.

## ನಿರಂತರ ಅಘೋಷಿತ ವಿದ್ಯುತ್ ಕಡಿತ ಸಮಸ್ಯೆ ಶೀಘ್ರ ಬಗೆಹರಿಸುವಂತೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ಆ.04.ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಕಳೆದ ಕೆಲವು ತಿಂಗಳಿಂದ ನಿತ್ಯವೂ ನಡೆಯುತ್ತಿರುವ ಅಘೋಷಿತ ವಿದ್ಯುತ್ ಲೋಡ್ ಶೆಡ್ಡಿಂಗ್‌ನಿಂದ ಸಾರ್ವಜನಿಕರು ತೀವ್ರ ಪರದಾಡುತ್ತಿದ್ದು, ಈ ಸಮಸ್ಯೆಯನ್ನು ಶೀಘ್ರವೇ ಬಗೆಹರಿಸುವಂತೆ ಒತ್ತಾಯಿಸಿ ಶ್ರೀ ಷಾ ಮಕಾಂದರ್ ಜನಪರ ಸೇವಾ ಸಮಿತಿ ವತಿಯಿಂದ ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ ಮನವಿ ಪತ್ರ ಸಲ್ಲಿಸಲಾಗಿತು.

ಈ ಕುರಿತು ಪತ್ರಿಕೆ ಹೇಳಿಕೆ ನೀಡಿದವರು,

ದಿನಕ್ಕೆ ಕನಿಷ್ಠ 2 ಗಂಟೆಗೂ ಹೆಚ್ಚು ಕಾಲ ಯಾವುದೇ ಮುನ್ಸೂಚನೆ ಇಲ್ಲದೆ ಕರೆಂಟ್ ಕಟ್ ಮಾಡುತ್ತಿರುವುದರಿಂದ ವಿದ್ಯಾರ್ಥಿಗಳ ಓದಿಗೆ ಅಡ್ಡಿಯಾಗಿದೆ. ಅಲ್ಲದೆ, ಕಂಪ್ಯೂಟರ್ ಸೆಂಟರ್, ಗ್ಯಾರೇಜ್, ಪ್ರಿಂಟಿಂಗ್ ಪ್ರೆಸ್ ಹಾಗೂ ಇತರೆ ವಿದ್ಯುತ್ ಅವಲಂಬಿತ ಸಣ್ಣ ವ್ಯಾಪಾರಸ್ಥರ ಉದ್ಯಮಕ್ಕೆ ಆರ್ಥಿಕ ನಷ್ಟವಾಗುತ್ತಿದೆ. ವಿಧ್ಯುತ್ ಅವಲಂಬಿತ ಕಾರ್ಮಿಕರು ಹಾಗೂ ದಿನಗೂಲಿ ನೌಕರರು ಕೆಲಸವಿಲ್ಲದೆ ತಮ್ಮ ದುಡಿಮೆಯ ಸಮಯವನ್ನು ಕಳೆದುಕೊಳ್ಳುತ್ತಿದ್ದಾರೆ.

ಜೊತೆಗೆ ಆಸ್ಪತ್ರೆಗಳಲ್ಲಿ ಸ್ಕ್ಯಾನಿಂಗ್, ಇ.ಸಿ.ಜಿ ಹಾಗೂ ಇತರೆ ಪರೀಕ್ಷೆಗಳಿಗೆ ಬಡ ರೋಗಿಗಳು ಗಂಟೆಗಟ್ಟಲೆ ಕಾಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ವಿಪರೀತ ಸೊಳ್ಳೆ ಕಾಟದಿಂದ ವೃದ್ಧರು ಹಾಗೂ ಮಕ್ಕಳು ನರಕಯಾತನೆ ಅನುಭವಿಸುತ್ತಿದ್ದಾರೆ.

ಈ ಕೂಡಲೇ ಜೆಸ್ಕಾಂ ಅಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಅನಧಿಕೃತ ವಿದ್ಯುತ್ ಕಡಿತವನ್ನು ನಿಲ್ಲಿಸಿ ನಿರಂತರ ವಿದ್ಯುತ್

ಪೂರೈಕೆ ಮಾಡಬೇಕು.

ಯಾವುದೇ ಮುನ್ಸೂಚನೆ ನೀಡದೆ ಅಘೋಷಿತ ಲೋಡ್‌ಶೆಡ್ಡಿಂಗ್ ಮಾಡುವುದು ಜನರಿಗೆ ಮಾಡುತ್ತಿರುವ ದ್ರೋಹವಾಗಿದ್ದು,ಕೂಡಲೇ ಸಂಬಂಧಪಟ್ಟ ಎಂಜಿನಿಯರ್‌ಗಳು ಮತ್ತು ಹಿರಿಯ ಅಧಿಕಾರಿಗಳು ಎಚ್ಚೆತ್ತುಕೊಂಡು, ವಿದ್ಯುತ್ ವ್ಯತ್ಯಯಕ್ಕೆ ಕಾರಣವಾಗಿರುವ ತಾಂತ್ರಿಕ ದೋಷಗಳನ್ನು ಯಾವುದೇ ಕುಂಟುನೆಪ ಹೇಳದೆ ಕೂಡಲೇ ಸರಿಪಡಿಸಬೇಕು ಎಂದು ಸಮಿತಿಯ ಮುಖಂಡರಾದ ಉಸ್ಮಾನ್ ಪಾಷಾ ಆಗ್ರಹಿಸಿದರು.

## ಮುಧೋಳ (ಬಿ) ಶ್ರೀ ಶಿವಲಿಂಗೇಶ್ವರ ಮಠದಲ್ಲಿ 102ನೇ ಪುಣ್ಯಸ್ಮರಣೆ ಹಾಗೂ ಪ್ರವಚನ ಕಾರ್ಯಕ್ರಮ ಉದ್ಘಾಟನೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ತಾಲೂಕಿನ ಮುಧೋಳ (ಬಿ) ಗ್ರಾಮದ ಶ್ರೀ ಶಿವಲಿಂಗೇಶ್ವರ ಚರಮೂರ್ತಿ ಮಠದಲ್ಲಿ ಪರಮಪೂಜ್ಯ ಶ್ರೀ ಶಿವಲಿಂಗ ಶಿವಾಚಾರ್ಯರ 175ನೇ ಜಯಂತಿ ಹಾಗೂ 102ನೇ ಪುಣ್ಯಸ್ಮರಣೆಯ ನಿಮಿತ್ತ ಹಮ್ಮಿಕೊಳ್ಳಲಾದ 22 ದಿನಗಳ ಧಾರ್ಮಿಕ ಕಾರ್ಯಕ್ರಮ ಮತ್ತು 7 ದಿನಗಳ ಪ್ರವಚನ ಮಹೋತ್ಸವಕ್ಕೆ ಚಾಲನೆ ನೀಡಲಾಯಿತು.

ಶ್ರೀಮಠದ ಪೀಠಾಧಿಕಾರಿ ಪರಮಪೂಜ್ಯ ಡಾ. ವೈಜಿನಾಥ ಶಿವಾಚಾರ್ಯ ಮಹಾಸ್ವಾಮಿಗಳ ದಿವ್ಯ ಸಾನಿಧ್ಯ ಹಾಗೂ ಶ್ರೀ ಶ. ಭ್ರ. ಅಭಿನವ ರುದ್ರಮುನಿ ಶಿವಾಚಾರ್ಯರು ಯಂಕಂಚಿ ಅವರ ನೇತೃತ್ವದಲ್ಲಿ ಜ್ಯೋತಿ ಬೆಳಗಿಸುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು.

ರಾಷ್ಟ್ರೀಯ ಬಸವ ದಳ ಹಾಗೂ ಗುರುಬಸವೇಶ್ವರ ಅನುಭವ ಮಂಟಪದ ಅಧ್ಯಕ್ಷರಾದ ನಾಗಯ್ಯ ಸ್ವಾಮಿ ಮಾತನಾಡಿ, "ಶಿವಲಿಂಗ ಶಿವಾಚಾರ್ಯರು ನಿಜಾಮರ ಆಳ್ವಿಕೆಯ ಕಠಿಣ ಸಮಯದಲ್ಲಿಯೂ ಹೊರಗಡೆ ಉರ್ದು ಬೋರ್ಡ್ ಹಾಕಿ ಒಳಗಡೆ ಕನ್ನಡ ಭಾಷೆಯನ್ನು ಕಲ್ಪಿಸಿದ ಕನ್ನಡಾಭಿಮಾನಿ ಮಠಾಧೀಶರಾಗಿದ್ದರು. ತಮ್ಮ ಪವಾಡ ಹಾಗೂ ಸಮಾಜಮುಖಿ ಕಾರ್ಯಗಳ ಮೂಲಕ ಭಕ್ತರ ಕಷ್ಟಗಳನ್ನು ನಿವಾರಿಸಿದ ಮಹಾನ್ ಪವಾಡ ಪುರುಷರು" ಎಂದು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಹೆಡಗಾಪುರದ ಶ್ರೀ ಮ.ಘ.ಚ. ದಾರುಕಾಲಿಂಗ ಶಿವಾಚಾರ್ಯರು, "ಧರ್ಮ ಮತ್ತು ಸನ್ಮಾರ್ಗದ ಹಾದಿ ಮಾನವ ಜೀವನಕ್ಕೆ ಅತ್ಯಗತ್ಯ. ಪ್ರತಿಯೊಬ್ಬರೂ ಧಾರ್ಮಿಕ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು, ಭೇದ–ಭಾವ ಮರೆತು ಎಲ್ಲರೂ ಒಂದಾಗಿ ಒಗ್ಗಟ್ಟಿನಿಂದ ಬಾಳಬೇಕು" ಎಂದು ಸಮಾಜವನ್ನು ಒಗ್ಗೂಡಿಸುವ ದಿವ್ಯ ಸಂದೇಶ ನೀಡಿದರು.

ಡಾ. ವೈಜನಾಥ ಶಿವಾಚಾರ್ಯರು 22 ದಿನಗಳ ಕಾರ್ಯಕ್ರಮದ ವಿವರಣೆ ನೀಡಿ ಎಲ್ಲರನ್ನೂ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ನೀಲಕಂಠ ಹಲಬುರ್ಗಿ, ಮಾಜಿ ಅಧ್ಯಕ್ಷ ಧನರಾಜ್ ಗುಡ್ಡ, ಗಜಾನಂದ ವಟಗೆ, ಪಿ.ಕೆ.ಪಿ.ಎಸ್ ಅಧ್ಯಕ್ಷ ಗುರುನಾಥರಾವ ವಟಗೆ, ಉದಯಕುಮಾರ್ ಹಳಿಕ್ಕೆ, ವಿಜಯಕುಮಾರ್ ಹೊಸಖಂಡಿ, ಸೋಮನಾಥ ಖಡಕೆ, ಅನಿಲ ಬಿಚ್ಚುಕುಂದೆ, ಪ್ರಭುಲಿಂಗ ಸ್ವಾಮಿ, ಸುನಿಲ ಬಿಚ್ಚುಕುಂದೆ ಸೇರಿದಂತೆ ಅನೇಕ ಪ್ರಮುಖರು ಉಪಸ್ಥಿತರಿದ್ದರು. ನಾಗನಾಥ ಶಂಕು ಕಾರ್ಯಕ್ರಮ ನಿರೂಪಿಸಿದರು.

## ಮಕ್ಕಳ ಮಾನಸಿಕ ಸಾಮರ್ಥ್ಯಗಳ ಬೆಳವಣಿಗೆಗೆ ಕ್ರೀಡೆ ಅತ್ಯವಶ್ಯಕ : ಬಿಇ ಶ್ರೀನಿವಾಸ್ ಬನ್ನಿಗೋಳ

• ಮಲ್ಲಮ್ಮ ನುಡಿ ವಾರ್ತೆ ಕುಕನೂರು



ತಾಲೂಕಿನ ಕೋಮಲಾಪುರದಲ್ಲಿ ನೆಡೆದ 2026–27 ನೇ ಸಾಲಿನ ತಳಕಲ್ ವಲಯ ಮಟ್ಟದ ಪ್ರೌಢಶಾಲೆಗಳ ಕ್ರೀಡಾಕೂಟವು ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆ ಕೋಮಲಾಪೂರದಲ್ಲಿ ನಡೆಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್ ಡಿ ಎಂ ಸಿ ಅಧ್ಯಕ್ಷರಾದ ಬಸವರಾಜ ಅಂಗಡಿ ಹಾಗೂ ಪ್ರೌಢಶಾಲೆಯ ಎಸ್ ಡಿಎಂ ಸಿ ಅಧ್ಯಕ್ಷರಾದ ಮಾಂತೇಶ ಗೌಡ ಪೊಲೀಸ್ ಪಾಟೀಲ್ ಜ್ಯೋತಿ ಬೆಳಗಿಸುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಶ್ರೀನಿವಾಸ ಬನ್ನಿಗೋಳ ಅವರು ಕ್ರೀಡಾ ಧ್ವಜಾರೋಹಣವನ್ನು ನೆರವೇರಿಸಿ ಮಾತನಾಡುತ್ತಾ ಮಕ್ಕಳಲ್ಲಿ ಮಾನಸಿಕ ಸಾಮರ್ಥ್ಯಗಳ ಬೆಳವಣಿಗೆಯ ಜೊತೆ ಜೊತೆಗೆ ದೈಹಿಕ ಸಾಮರ್ಥ್ಯದ ಬೆಳವಣಿಗೆ ಅತ್ಯವಶ್ಯ ಏಕೆಂದರೆ ಸದೃಢ ದೇಹದಲ್ಲಿ ಸದೃಢ ಮನಸ್ಸು ಇರುತ್ತದೆ ಎಂಬ ಮಾತು ಸತ್ಯ ಅದು ಸಾಹಾಕಾರಗೊಳ್ಳಲು ಇಂತಹ ಕ್ರೀಡಾ ಹಬ್ಬಗಳು ಅತ್ಯವಶ್ಯವಾಗಿವೆ ಎಂದು ಹೇಳಿದರು. ಶಾಲೆಯ ಮುಖ್ಯೋಪಾಧ್ಯಾಯರಾದ ವೆಂಕಣ್ಣ ಹಳ್ಳೂರ ಅತ್ಯಂತ ಅಚ್ಚುಕಟ್ಟಾಗಿ ಕಾರ್ಯಕ್ರಮಕ್ಕೆ ಊರಿನವರ ಅಭೂತಪೂರ್ವ ತನು ಮನ ಧನದ ಸಹಾಯದಿಂದಾಗಿ ಇಂತಹ ಅದ್ಭುತ ಕಾರ್ಯಕ್ರಮಗಳನ್ನು ಮತ್ತು ಮಹಾ ಸರಸ್ವತಿ ಪ್ರತಿಮೆಯನ್ನು ಪ್ರತಿಷ್ಠಾಪಿಸಿ ಶಾಲೆಯನ್ನು ಸುಂದರಗೊಳಿಸಲು ಸಾಧ್ಯವಾಯಿತು ಎಂದು ಹೇಳಿದರು. ಕಾರ್ಯಕ್ರಮಕ್ಕೆ ಸರ್ವರನ್ನು ಹಿರಿಯ ಶಿಕ್ಷಕರಾದ ಶಂಕ್ರಪ್ಪ ಗುಡಿಗೇರಿ ತುಂಬು ಹೃದಯದಿಂದ ಸ್ವಾಗತಿಸಿಕೊಂಡರು.

ತಳಕಲ್ ವಲಯ ಮಟ್ಟದ ಕ್ರೀಡಾಕೂಟಕ್ಕೆ ವಿವಿಧ ಶಾಲೆಗಳಿಂದ ಬಂದಂತ ಕ್ರೀಡಾಪಟುಗಳಿಗೆ ವಿವಿಧ ಬಗೆಯ ಕಾದ್ಯಗಳನ್ನು ಕೋಮಲಾಪುರ ಗ್ರಾಮದ ಗುರುಹಿರಿಯರು ಅಚ್ಚುಕಟ್ಟಾಗಿ ನೆರವೇರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎ ಬಸವರಾಜ,ತಾಲೂಕು ದೈಹಿಕ ಶಿಕ್ಷಣಾಧಿಕಾರಿ ಶರಣಪ್ಪ ವೀರಾಪುರ, ರಾಜ್ಯ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರಾದ ಮಹೇಶ ಸಬರದ, ನೌಕರರ ಸಂಘದ ತಾಲೂಕ ಅಧ್ಯಕ್ಷರಾದ ಮಾರುತೇಶ ತಳವಾರ, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ರಮೇಶ ತಿಮ್ಮರೆಡ್ಡಿ, ಮತ್ತು ವೀರನಗೌಡ. ಪೊಲೀಸ್ ಪಾಟೀಲ್, ಹಾಗೂ

ಪ್ರೌಢ ಮತ್ತು ಪ್ರಾಥಮಿಕ ಶಾಲೆಯ ದೈಹಿಕ ಶಿಕ್ಷಣ ಸಂಘಟನೆಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಊರಿನ ಗುರುಹಿರಿಯರು ಹಳೇ ವಿದ್ಯಾರ್ಥಿ ಸಂಘಟನೆಗಳ ಪದಾಧಿಕಾರಿಗಳು ಶಿಕ್ಷಣ ಪ್ರೇಮಿಗಳು ಕ್ರೀಡಾ ಅಭಿಮಾನಿಗಳು ಎಸ್ ಡಿ ಎಂ ಸಿ ಶಾಲೆಯ ಸರ್ವ ಸದಸ್ಯರು ಹಾಜರಿದ್ದರು.

## ಯುವಕರು ದುಶ್ಚಟಗಳಿಂದ ದೂರವಿದ್ದು ಆರೋಗ್ಯವಂತ ಸಮಾಜ ಕಟ್ಟಲು ಕೈಜೋಡಿಸಿ: ಡಾ. ಈಶ್ವರ ಸವಡಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಯುವಕರು ದುಶ್ಚಟಗಳು ಹಾಗೂ ಮಾದಕ ವ್ಯಸನಗಳಿಂದ ದೂರವಿದ್ದು, ಆರೋಗ್ಯಕರ ಜೀವನಶೈಲಿಯನ್ನು ರೂಢಿಸಿಕೊಂಡು ನಶಾಮುಕ್ತ ಹಾಗೂ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಈಶ್ವರ ಸವಡಿ ಕರೆ ನೀಡಿದರು.

ಕೊಪ್ಪಳ ನಗರದ ಹೊರವಲಯದ ದದೇಗಲ್‌ನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಸಭಾಭವನದಲ್ಲಿ ಮೈ ಭಾರತ ಕೇಂದ್ರ, ಕೊಪ್ಪಳ ಹಾಗೂ ಕಾಲೇಜಿನ ಎನ್‌ಎಸ್‌ಎಸ್ ಘಟಕದ ವತಿಯಿಂದ ಆಯೋಜಿಸಿದ್ದ ಜಿಲ್ಲಾ ಮಟ್ಟದ 'ನಶಾಮುಕ್ತ ಯುವ–2026' ಸಾಂಸ್ಕೃತಿಕ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.ನಶೆ ಎನ್ನುವುದು ಕೇವಲ ಒಬ್ಬ ವ್ಯಕ್ತಿಯ ಆರೋಗ್ಯವನ್ನು ಹಾಳು ಮಾಡುವುದಲ್ಲ. ಅದು ಕುಟುಂಬದ ನೆಮ್ಮದಿ ಹಾಗೂ ಸಮಾಜದ ಭವಿಷ್ಯವನ್ನೂ ಹಾಳು ಮಾಡುತ್ತದೆ. ಮದ್ಯ, ಗಾಂಜಾ, ತಂಬಾಕು ಸೇರಿದಂತೆ ಯಾವುದೇ ಮಾದಕ ವಸ್ತುಗಳ ಸೇವನೆಯಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಉಂಟಾಗಬಹುದು. ವಿಶೇಷವಾಗಿ ಯುವಜನರು ನಶೆಯಿಂದ ದೂರವಿದ್ದು, ಕ್ರೀಡೆ, ಶಿಕ್ಷಣ, ಕಲೆ ಹಾಗೂ ಸೃಜನಾತ್ಮಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ನಶೆಯ ಚಟಕ್ಕೆ ಒಳಗಾದವರು ಯಾವುದೇ ಹಿಂಜರಿಕೆಯಿಲ್ಲದೆ ವೈದ್ಯರು ಹಾಗೂ ತಜ್ಞರ ಸಲಹೆ ಪಡೆದು ಸೂಕ್ತ ಚಿಕಿತ್ಸೆ ಮತ್ತು ಪುನರ್ವಸತಿ ಪಡೆಯಬೇಕು. ಆರೋಗ್ಯವಂತ ಯುವಶಕ್ತಿಯೇ ದೇಶದ ನಿಜವಾದ ಸಂಪತ್ತು. ಆದ್ದರಿಂದ 'ನಶಾಮುಕ್ತ ಯುವಕರು–ಆರೋಗ್ಯವಂತ ಸಮಾಜ' ಎಂಬ ಸಂಕಲ್ಪದೊಂದಿಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಹೇಳಿದರು.

ಜಿಲ್ಲಾ ಎಚ್‌ಐವಿ ನಿಯಂತ್ರಣಾಧಿಕಾರಿ ಡಾ. ಶಶಿಧರ ಮಾತನಾಡಿ, ಯುವಕರು ಓದಿನ ಜೊತೆಗೆ ತಮ್ಮ ಆರೋಗ್ಯದ ಕಡೆಗೂ ಹೆಚ್ಚಿನ ಗಮನ ಹರಿಸಬೇಕು. ಸುರಕ್ಷಿತ ಲೈಂಗಿಕ ಸಂಪರ್ಕದ ಮೂಲಕ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಸತತ ಓದುವ ಅಭ್ಯಾಸವನ್ನು ರೂಢಿಸಿಕೊಂಡು, ಮೊಬೈಲ್ ಬಳಕೆಯ ಮೇಲಿನ ಅತಿಯಾದ ಅವಲಂಬನೆಯನ್ನು ಕಡಿಮೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ ಆರೋಗ್ಯಕ್ಕೆ ಸಂಬಂಧಿಸಿದ ಮಾಹಿತಿಯನ್ನು ಒಳಗೊಂಡ ಕ್ಯೂಆರ್ ಕೋಡ್ ಜಾಗೃತಿ ಪೋಸ್ಟರ್ ಬಿಡುಗಡೆ ಮಾಡಿದರು.

ಮೈ ಭಾರತ ಕೇಂದ್ರದ ಯುವ ಅಧಿಕಾರಿ ಮೇಘಾ ಜಿ.ಕೆ. ಮಾತನಾಡಿ, ಯುವಕರ ಸಮಗ್ರ ಅಭಿವೃದ್ಧಿ ಮತ್ತು ವಿಕಸನಕ್ಕಾಗಿ ಇಲಾಖೆಯಲ್ಲಿರುವ ವಿವಿಧ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ರಾಷ್ಟ್ರನಿರ್ಮಾಣದಲ್ಲಿ ಯುವಕರ ಪಾತ್ರ ಬಹುಮುಖ್ಯವಾಗಿದೆ. ಯುವಕರಲ್ಲಿರುವ ಪ್ರತಿಭೆಯನ್ನು ಗುರುತಿಸಿ, ಅವರಿಗೆ ಸೂಕ್ತ ವೇದಿಕೆ ಕಲ್ಪಿಸಿ ಪ್ರೋತ್ಸಾಹಿಸುವ ಕಾರ್ಯವನ್ನು ಮೈ ಭಾರತ ಕೇಂದ್ರ ಮಾಡುತ್ತಿದೆ. ಯುವಕರು ದುಶ್ಚಟಗಳಿಂದ ದೂರವಿದ್ದು, ನಶಾಮುಕ್ತ ಯುವ–ವಿಕಸಿತ ಭಾರತ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಉದ್ದೇಶವನ್ನು ವಿರೇಶ ಕುಮಾರ್ ಕೆ. ವಿವರಿಸಿದರು. ಜಿಲ್ಲಾ ಮಟ್ಟದ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಯುವಕ–ಯುವತಿಯರು ಉತ್ಸಾಹದಿಂದ ಭಾಗವಹಿಸಿದರು. ಭಾಷಣ, ಚಿತ್ರಕಲೆ, ನೃತ್ಯ, ಚರ್ಚಾ ಸ್ಪರ್ಧೆ, ಕವನ ವಾಚನ, ರೀಲ್ಸ್ ಹಾಗೂ ಜಾನಪದ ಸೇರಿದಂತೆ ವಿವಿಧ ಸ್ಪರ್ಧೆಗಳು ನಡೆದವು. ವಿಜೇತರು ಹಾಗೂ ಭಾಗವಹಿಸಿದ ಸ್ಪರ್ಧಾರ್ಥಿಗಳಿಗೆ ಪ್ರಮಾಣಪತ್ರ ನೀಡಿ ಗೌರವಿಸಲಾಯಿತು.

ನಿವೃತ್ತ ಶಿಕ್ಷಕಿ ಗೀತಾಂಜಲಿ ಸ್ವಾಗತಿಸಿದರು. ಪ್ರಿಯದರ್ಶಿನಿ ಮುಂಡರಗಿಮಠ ಅವರು ನಶಾಮುಕ್ತಿಯ ಕುರಿತು ಘೋಷವಾಕ್ಯ ಮಂಡಿಸಿದರು. ಬಿ.ಎನ್. ಹೊರಪೇಟಿ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಸರ್ವ ಸಿಬ್ಬಂದಿ ಹಾಗೂ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಸ್ಪರ್ಧಾರ್ಥಿಗಳು ಭಾಗವಹಿಸಿದ್ದರು.

## 24X7 ನಿಯಂತ್ರಣ ಕೊಠಡಿ-ಕಮ್-ಸಹಾಯವಾಣಿ ಕೇಂದ್ರ ಸ್ಥಾಪನೆ

ಕಲಬುರಗಿ,ಆ.04:ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ಕೇಂದ್ರ ಕಛೇರಿ ಹಾಗೂ ಎಲ್ಲಾ ವಿಭಾಗೀಯ ಕಛೇರಿಗಳಲ್ಲಿ 24x7 ನಿಯಂತ್ರಣ ಕೊಠಡಿ–ಕಮ್–ಸಹಾಯವಾಣಿ (Controlroom-cum-helpdesk) ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಕ.ಕ.ರ.ಸಾ.ನಿಗಮದ ವ್ಯಾಪ್ತಿಯಲ್ಲಿನ ಗ್ರಾಮಗಳಲ್ಲಿನ ಸಾರಿಗೆ ಸೌಲಭ್ಯದ ಬೇಡಿಕೆ ಹಾಗೂ ದೂರುಗಳಿದ್ದಲ್ಲಿ ಈ ಕೆಳಕಂಡ ಮೊಬೈಲ್ ಸಂಖ್ಯೆಗಳಿಗೆ ಸಂಪರ್ಕಿಸಬೇಕೆಂದು ನಿಗಮದ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

ಕೇಂದ್ರ ಕಚೇರಿ ಮೊಬೈಲ್ ಸಂಖ್ಯೆ–6366423878, ಕಲಬುರಗಿ ವಿಭಾಗ–1 ಮೊಬೈಲ್ ಸಂ.–6366423879, ಕಲಬುರಗಿ ವಿಭಾಗ–2ರ ಮೊಬೈಲ್ ಸಂಖ್ಯೆ–6366423880, ಯಾದಗಿರ–6366423882, ಬೀದರ–6366423881, ರಾಯಚೂರು–6366423883, ಕೊಪ್ಪಳ–6366423884, ಬಳ್ಳಾರಿ–6366423885, ವಿಜಯನಗರ–6366423886 ಹಾಗೂ ವಿಜಯಪುರ–6366423887 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಆಧ್ಯಾತ್ಮಿಕ ಸೇವೆಯ ಮೂಲಕ ಸಾವಿರಾರು ಮಂದಿಗೆ ಆಶಾಕಿರಣ ಶ್ರೀ ಸದ್ಗುರು ಜುಮಾರಿತಾತನವರ ಸೇವೆಗೆ ಜನಮನ್ನಣೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಆಧುನಿಕ ಜೀವನಶೈಲಿ, ಮಾನಸಿಕ ಒತ್ತಡ ಹಾಗೂ ಜೀವನದ ಸಂಕೀರ್ಣತೆಗಳ ನಡುವೆ ಆಧ್ಯಾತ್ಮಿಕತೆ ಮತ್ತು ಸಮಾಜಸೇವೆಯ ಮೂಲಕ ಸಾವಿರಾರು ಜನರ ಬದುಕಿನಲ್ಲಿ ಆಶಾಕಿರಣ ಮೂಡಿಸುತ್ತಿರುವ ವ್ಯಕ್ತಿತ್ವವಾಗಿ ಶ್ರೀ ಸದ್ಗುರು ಜುಮಾರಿತಾತನವರು ಗುರುತಿಸಿಕೊಂಡಿದ್ದಾರೆ. ಆಧ್ಯಾತ್ಮಿಕ ಮಾರ್ಗದರ್ಶನ, ಸಾಮಾಜಿಕ ಕಳಕಳಿ ಹಾಗೂ ಮಾನವೀಯ ಮೌಲ್ಯಗಳೊಂದಿಗೆ ಕಳೆದ ಎಂಟು ವರ್ಷಗಳಿಂದ ಅವರು ನಿರಂತರ ಸೇವೆ ಸಲ್ಲಿಸುತ್ತಿದ್ದು, ರಾಜ್ಯದ ವಿವಿಧ ಭಾಗಗಳಿಂದ ಹಾಗೂ ಹೊರರಾಜ್ಯಗಳಿಂದಲೂ ಭಕ್ತರು ಅವರ ಆಶೀರ್ವಾದ ಮತ್ತು ಮಾರ್ಗದರ್ಶನಕ್ಕಾಗಿ ಆಗಮಿಸುತ್ತಿದ್ದಾರೆ.

ಶ್ರೀ ಸದ್ಗುರು ಜುಮಾರಿತಾತನವರು ಬಳ್ಳಾರಿ ಜಿಲ್ಲೆಯ ಎಂ. ಗೋನಾಳ್ ಗ್ರಾಮದಲ್ಲಿ ಶ್ರೀಮತಿ ನಾಗಮ್ಮ ಹಾಗೂ ಸಿದ್ದಲಿಂಗಪ್ಪ ದಂಪತಿಯ 10ನೇ ಪುತ್ರರಾಗಿ ಜನಿಸಿದರು. ಪ್ರಾಥಮಿಕ ಶಿಕ್ಷಣವನ್ನು ಸ್ವಗ್ರಾಮದಲ್ಲೇ ಪೂರ್ಣಗೊಳಿಸಿ, ಪ್ರೌಢ ಶಿಕ್ಷಣವನ್ನು ಮೋಕಾದಲ್ಲಿ ಮುಗಿಸಿದರು. ಬಳಿಕ ಬಳ್ಳಾರಿಯ ಸರಳಾ ದೇವಿ ಕಾಲೇಜಿನಲ್ಲಿ ಬಿ.ಕಾಂ ಪದವಿ ಪಡೆದರು.

ಶಿಕ್ಷಣದ ನಂತರ ಹಲವು ರಾಜಕೀಯ ನಾಯಕರ ಸಲಹೆಗಾರರಾಗಿ ವಿವಿಧ ರಾಜಕೀಯ ಪಕ್ಷಗಳಲ್ಲಿ ಸೇವೆ ಸಲ್ಲಿಸಿದ ಅವರು, ಬಳಿಕ ಜೆಎಸ್‌ಡಬ್ಲ್ಯೂ ಸಂಸ್ಥೆಗೆ ಸಂಬಂಧಿಸಿದ ಹೋಟೆಲ್ ಉದ್ಯಮದಲ್ಲೂ ಕಾರ್ಯನಿರ್ವಹಿಸಿದರು. ಇದೇ ಅವಧಿಯಲ್ಲಿ ಶ್ರೀ ರೇಣುಕಾ ಯಲ್ಲಮ್ಮ ದೇವಿಯ ದೈವಿಕ ಪ್ರೇರಣೆಯಿಂದ ಆಧ್ಯಾತ್ಮಿಕ ಜೀವನದತ್ತ ಮುಖ ಮಾಡಿ, ಸಂಪೂರ್ಣವಾಗಿ ದೈವಸೇವೆ ಮತ್ತು ಸಮಾಜಸೇವೆಗೆ ತಮ್ಮನ್ನು ಸಮರ್ಪಿಸಿಕೊಂಡರು.

ಕಳೆದ ಎಂಟು ವರ್ಷಗಳಿಂದ ಯಾವುದೇ ಪ್ರತಿಫಲದ ನಿರೀಕ್ಷೆಯಿಲ್ಲದೆ ಉಚಿತ ಆಧ್ಯಾತ್ಮಿಕ ಸೇವೆ, ದೈವಸೇವೆ, ಮಾನಸಿಕ ನೆಮ್ಮದಿಗಾಗಿ ಮಾರ್ಗದರ್ಶನ ಹಾಗೂ ವಿವಿಧ ವೈಯಕ್ತಿಕ ಸಮಸ್ಯೆಗಳಿಗೆ ಸಲಹೆ ನೀಡುತ್ತಾ ಬಂದಿರುವ ಅವರು, ಸಾವಿರಾರು ಭಕ್ತರ ವಿಶ್ವಾಸ ಗಳಿಸಿದ್ದಾರೆ.

ಭಕ್ತರ ನಂಬಿಕೆಯ ಪ್ರಕಾರ, ಅವರ ಆಧ್ಯಾತ್ಮಿಕ ಮಾರ್ಗದರ್ಶನದಿಂದ ಸುಮಾರು 2,000ಕ್ಕೂ ಹೆಚ್ಚು ದಂಪತಿಗಳು ಸಂತಾನ ಭಾಗ್ಯ ಪಡೆದಿದ್ದು, 200ಕ್ಕೂ ಹೆಚ್ಚು ಕುಟುಂಬಗಳ ವೈವಾಹಿಕ ಭಿನ್ನಾಭಿಪ್ರಾಯಗಳು ಬಗೆಹರಿದು ಕುಟುಂಬಗಳು ಒಂದಾಗಿವೆ. ವಿದ್ಯಾರ್ಥಿಗಳಿಗೆ ಶಿಕ್ಷಣ, ವ್ಯಕ್ತಿತ್ವ ವಿಕಸನ ಹಾಗೂ ಜೀವನದ ಗುರಿ ಕುರಿತು ಮಾರ್ಗದರ್ಶನ ನೀಡುವ ಮೂಲಕ ಅನೇಕ ಯುವಕರಲ್ಲಿ ಆತ್ಮವಿಶ್ವಾಸ ಬೆಳೆಸಿದ್ದಾರೆ ಎಂದು ತಿಳಿಸಲಾಗಿದೆ.

ಸಾಮಾಜಿಕ ಸೇವೆಯಲ್ಲಿಯೂ ಮುಂಚೂಣಿಯಲ್ಲಿರುವ ಶ್ರೀ ಸದ್ಗುರು ಜುಮಾರಿತಾತನವರು ಉದ್ಯಮಿಗಳ ಸಹಕಾರದೊಂದಿಗೆ 22ಕ್ಕೂ ಹೆಚ್ಚು ಸಾಮೂಹಿಕ ವಿವಾಹಗಳನ್ನು ಆಯೋಜಿಸಿದ್ದಾರೆ. ಅಲ್ಲದೆ ರಕ್ತದಾನ ಶಿಬಿರಗಳು, ಉಚಿತ ಆರೋಗ್ಯ ತಪಾಸಣಾ ಶಿಬಿರಗಳು, ನೂರಾರು ಯಾಗ–ಹೋಮಗಳು, ಸತ್ಸಂಗಗಳು ಹಾಗೂ ಧಾರ್ಮಿಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಮಾಜದಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸುವ ಕಾರ್ಯ ಮಾಡುತ್ತಿದ್ದಾರೆ.

ಬಳ್ಳಾರಿ ನಗರದ ಸಂಗನಕಲ್ಲು ರಸ್ತೆಯ ಸುಬ್ಬರಾವ್ ಕ್ಯಾಂಪ್ ಪ್ರದೇಶದಲ್ಲಿರುವ ಶ್ರೀ ರೇಣುಕಾ ಎಲ್ಲಮ್ಮ ದೇವಿಯ ದೇವಸ್ಥಾನವು ಅವರ ನೇತೃತ್ವದಲ್ಲಿ ಪ್ರಮುಖ ಆಧ್ಯಾತ್ಮಿಕ ಕೇಂದ್ರವಾಗಿ ಬೆಳೆಯುತ್ತಿದೆ. ಕಳೆದ ಐದು ವರ್ಷಗಳಿಂದ ಇಲ್ಲಿ ಜಾತ್ರಾ ಮಹೋತ್ಸವವನ್ನು ಭಕ್ತಿಭಾವದಿಂದ ನಿರಂತರವಾಗಿ ಆಯೋಜಿಸಲಾಗುತ್ತಿದ್ದು, ರಾಜ್ಯದ ವಿವಿಧ ಜಿಲ್ಲೆಗಳ ಭಕ್ತರು ಭಾಗವಹಿಸುತ್ತಿದ್ದಾರೆ.

ಭಕ್ತರ ಪ್ರಕಾರ, ಶ್ರೀ ರೇಣುಕಾ ಯಲ್ಲಮ್ಮ ದೇವಿಯ ಕೃಪೆಯಿಂದ ತಮ್ಮ ಜೀವನದಲ್ಲಿ ಅನೇಕ ಸಕಾರಾತ್ಮಕ ಬದಲಾವಣೆಗಳು ಸಂಭವಿಸಿವೆ. ಈ ಹಿನ್ನೆಲೆಯಲ್ಲಿ ದಿನದಿಂದ ದಿನಕ್ಕೆ ಭಕ್ತರ ಸಂಖ್ಯೆ ಹೆಚ್ಚುತ್ತಿದ್ದು, ಆಧ್ಯಾತ್ಮಿಕತೆ ಮತ್ತು ಸಮಾಜಸೇವೆಯ ಮೂಲಕ ಶ್ರೀ ಸದ್ಗುರು ಜುಮಾರಿತಾತನವರು ಅನೇಕ ಕುಟುಂಬಗಳ ಬದುಕಿನಲ್ಲಿ ಆಶಾಕಿರಣವಾಗಿ ಹೊರಹೊಮ್ಮಿದ್ದಾರೆ.

ಭಕ್ತರ ಅನುಭವ

"ಆರು ವರ್ಷಗಳ ಬಳಿಕ ಸಂತಾನ ಭಾಗ್ಯ ದೊರೆಯಿತು"

ಬಳ್ಳಾರಿ ತಾಲೂಕು ಬೊಬ್ಬಕುಂಟೆ ಗ್ರಾಮದ ನಿವಾಸಿ ರಾಜು ಮಾತನಾಡಿ, "ನನಗೆ ವಿವಾಹವಾಗಿ ಆರು ವರ್ಷ ಕಳೆದರೂ ಮಕ್ಕಳಾಗಿರಲಿಲ್ಲ. ಶ್ರೀ ಸದ್ಗುರು ಜುಮಾರಿತಾತನವರ ಆಧ್ಯಾತ್ಮಿಕ ಮಾರ್ಗದರ್ಶನ ಮತ್ತು ಸೇವೆ ಪಡೆದ ಬಳಿಕ ನಮಗೆ ಹೆಣ್ಣು ಮಗು ಜನಿಸಿತು. ನಮ್ಮ ಕುಟುಂಬದಲ್ಲಿ ಸಂತೋಷ ನೆಲೆಸಿದೆ. ಅವರು ಅನೇಕ ಕುಟುಂಬಗಳ ಬದುಕಿನಲ್ಲಿ ಆಶಾಕಿರಣವಾಗಿದ್ದಾರೆ," ಎಂದು ಹೇಳಿದರು.

"12 ವರ್ಷಗಳ ಬಳಿಕ ಮಗಳ ಜನನ"

ಕೊರ್ಲಗುಂದಿ ಗ್ರಾಮದ ಯಲ್ಲಪ್ಪ ಮಾತನಾಡಿ, "ವಿವಾಹವಾಗಿ 12 ವರ್ಷ ಕಳೆದರೂ ಸಂತಾನ ಭಾಗ್ಯ ದೊರೆತಿರಲಿಲ್ಲ. ಶ್ರೀ ರೇಣುಕಾ ಎಲ್ಲಮ್ಮ ಆರಾಧಕರಾದ ಶ್ರೀ ಸದ್ಗುರು ಜುಮಾರಿತಾತನವರ ಆಶೀರ್ವಾದ ಮತ್ತು ಆಧ್ಯಾತ್ಮಿಕ ಸೇವೆ ಪಡೆದ ಬಳಿಕ ನಮಗೆ ಹೆಣ್ಣು ಮಗು ಜನಿಸಿದೆ. ನಮ್ಮ ಕುಟುಂಬದ ಜೀವನದಲ್ಲಿ ಹೊಸ ಬೆಳಕು ಮೂಡಿದೆ," ಎಂದು ತಮ್ಮ ಅನುಭವ ಹಂಚಿಕೊಂಡರು.

ಜನಮನ್ನಣೆ ಗಳಿಸಿದ ಸೇವೆಆಧ್ಯಾತ್ಮಿಕ ಸೇವೆ, ಸಾಮಾಜಿಕ ಬದ್ಧತೆ ಹಾಗೂ ಮಾನವೀಯ ಮೌಲ್ಯಗಳನ್ನು ಆಧಾರವಾಗಿಟ್ಟುಕೊಂಡು ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಶ್ರೀ ಸದ್ಗುರು ಜುಮಾರಿತಾತನವರು ಕೈಗೊಂಡಿರುವ ವಿವಿಧ ಸೇವಾ ಕಾರ್ಯಕ್ರಮಗಳು ಜನಮನ್ನಣೆ ಗಳಿಸುತ್ತಿದ್ದು, ಅವರ ಸೇವೆ ಇನ್ನಷ್ಟು ಜನರಿಗೆ ತಲುಪಲಿ ಎಂಬುದು ಭಕ್ತರ ಆಶಯವಾಗಿದೆ.

# ಬಳ್ಳಾರಿ ಜಿಲ್ಲೆ ಬರಪೀಡಿತ ಪ್ರದೇಶ ಘೋಷಣೆಗೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಜಿಲ್ಲೆಯ ತೀವ್ರ ಮಳೆಯ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಬಳ್ಳಾರಿ ಜಿಲ್ಲೆಯನ್ನು ತಕ್ಷಣವೇ ಬರಪೀಡಿತ ಪ್ರದೇಶವೆಂದು ಘೋಷಿಸಿ ರೈತರಿಗೆ ಸೂಕ್ತ ಪರಿಹಾರ ಹಾಗೂ ಅಗತ್ಯ ನೆರವು ನೀಡಬೇಕೆಂದು ಆಗ್ರಹಿಸಿ ಬಿಜೆಪಿ ರೈತ ಮೋರ್ಚಾ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಕಚೇರಿ ಎದುರು ಹಮ್ಮಿಕೊಂಡಿದ್ದ ಅಹೋರಾತ್ರಿ ಧರಣಿ ಮಂಗಳವಾರ ಮುಕ್ತಾಯಗೊಂಡಿತು.

ಸೋಮವಾರ ಬೆಳಿಗ್ಗೆ 11 ಗಂ–ಟೆಗೆ ಆರಂಭಗೊಂಡಿದ್ದ ಧರಣಿ ಮಂಗಳವಾರ ಬೆಳಿಗ್ಗೆ 11 ಗಂಟೆಯವರೆಗೆ ಮುಂದುವರಿಯಿತು. ಧರಣಿ ಮುಕ್ತಾಯದ ಬಳಿಕ ಬಿಜೆಪಿ ಮುಖಂಡರು ಹಾಗೂ ರೈತ ಮೋರ್ಚಾ ಪದಾಧಿಕಾರಿಗಳು ರಾಜ್ಯ ಸರ್ಕಾರಕ್ಕೆ ಸಲ್ಲಿಸಬೇಕಾದ ಮನವಿಪತ್ರವನ್ನು ಬಳ್ಳಾರಿಯ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಜುಬೇರ್ ಅವರಿಗೆ ಸಲ್ಲಿಸಿದರು.

ಮನವಿಯಲ್ಲಿ, ಬಳ್ಳಾರಿ ಜಿಲ್ಲೆಯನ್ನು ಕೂಡಲೇ ಬರಪೀಡಿತ ಪ್ರದೇಶವೆಂದು ಘೋಷಿಸುವುದು, ಬೆಳೆ ನಷ್ಟ ಅನುಭವಿಸಿದ ರೈತರಿಗೆ ಎಕರೆಗೆ ನಿಗದಿತ ಪ್ರಮಾಣದಲ್ಲಿ ಪರಿಹಾರ ನೀಡುವುದು, ರೈತರ ಸಾಲ ಮರುಪಾವತಿಗೆ ಅಗತ್ಯ ಕ್ರಮ ಕೈಗೊಳ್ಳುವುದು ಹಾಗೂ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ತುರ್ತು ಪರಿಹಾರ ಕಾರ್ಯಗಳನ್ನು ಕೈಗೊಳ್ಳುವಂತೆ ಸರ್ಕಾರಕ್ಕೆ ಶಿಫಾರಸು ಮಾಡುವಂತೆ ಒತ್ತಾಯಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಜಿ. ಜನಾರ್ದನ ರೆಡ್ಡಿ, ಉತ್ತರ ಕರ್ನಾಟಕದ ಬಳ್ಳಾರಿ, ವಿಜಯನಗರ, ಕೊಪ್ಪಳ, ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ಮಳೆಯ ಕೊರತೆಯಿಂದ ರೈತರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದು, ಸರ್ಕಾರ ಕೂಡಲೇ ಈ ಜಿಲ್ಲೆಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಿ ರೈತರಿಗೆ ಪರಿಹಾರ ಹಾಗೂ ಅಗತ್ಯ ನೆರವು ಒದಗಿಸಬೇಕು ಎಂದು ಆಗ್ರಹಿಸಿದರು.

ಮನವಿಪತ್ರ ಸಲ್ಲಿಸುವ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಘಟಕದ ಮುಖಂಡರು, ರೈತ ಮೋರ್ಚಾ ಪದಾಧಿಕಾರಿಗಳು, ಪಕ್ಷದ ಕಾರ್ಯಕರ್ತರು ಹಾಗೂ ರೈತರು ಉಪಸ್ಥಿತರಿದ್ದರು.

# ಬಾಲುರು, ಮುರ್ಗ ಗ್ರಾಮಗಳಲ್ಲಿ ಕೃಷಿ ಅಧಿಕಾರಿಗಳಿಂದ ಬೆಳೆ ಪರಿಶೀಲನೆ: ಸೂಕ್ತ ಸಲಹೆ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಕಮಲನಗರ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ವ್ಯಾಪ್ತಿಯ ಬಾಲುರು ಹಾಗೂ ಮುರ್ಗ ಗ್ರಾಮಗಳಿಗೆ ಕೃಷಿ ಇಲಾಖೆಯ ಉನ್ನತಾಧಿಕಾರಿಗಳ ತಂಡ ಇಂದು ಭೇಟಿ ನೀಡಿ, ವಿವಿಧ ಬೆಳೆಗಳ ಸ್ಥಿತಿಗತಿಯನ್ನು ಸಮಗ್ರವಾಗಿ ಪರಿಶೀಲಿಸಿತು.

ಸ್ಥಳೀಯ ಕೃಷಿ ಭೂಮಿಗಳಿಗೆ ಭೇಟಿ ನೀಡಿದ ಕೃಷಿ ಇಲಾಖೆಯ ಉಪ ನಿರ್ದೇಶಕರಾದ ಶ್ರೀ ಎಂ.ಎ. ಅನ್ಸಾರಿ, ಸಹಾಯಕ ಕೃಷಿ ನಿರ್ದೇಶಕ ಶ್ರೀ ಮಾರ್ತಾಂಡ್ ಹಾಗೂ ಕೃಷಿ ಅಧಿಕಾರಿ ಶ್ರೀ ಶತ್ರುಘ್ನ ಅವರು ರೈತರ ಹೊಲಗಳಲ್ಲಿನ ತೊಗರಿ ಮತ್ತು ಸೋಯಾಬೀನ್ ಬೆಳೆಗಳ ಬೆಳವಣಿಗೆಯನ್ನು ವೀಕ್ಷಿಸಿ, ಅಗತ್ಯ ತಾಂತ್ರಿಕ ಸಲಹೆಗಳನ್ನು ನೀಡಿದರು.

ಕೃಷಿ ಅಧಿಕಾರಿಗಳು ನೀಡಿದ ಪ್ರಮುಖ ಸಲಹೆಗಳು:

ಸೋಯಾಬೀನ್ ಬೆಳವಣಿಗೆಗೆ ಪೋಷಕಾಂಶ: ಸೋಯಾಬೀನ್ ಬೆಳೆಯ ಉತ್ತಮ ಬೆಳವಣಿಗೆಗಾಗಿ ಪ್ರತಿ ಲೀಟರ್ ನೀರಿಗೆ 10 ಗ್ರಾಂ ನಷ್ಟು 19:19:19 ನೀರಿನಲ್ಲಿ ಕರಗುವ ಗೊಬ್ಬರವನ್ನು ಸಿಂಪಡಿಸಬೇಕು.

ಎಣ್ಣೆ ಅಂಶ ಹೆಚ್ಚಳಕ್ಕೆ ಜಿಪ್ಸಂ: ಶಿಫಾರಸು ಮಾಡಿದ ಪ್ರಮಾಣದಲ್ಲಿ ಜಿಪ್ಸಂ ಅಥವಾ 20:20:0:13 ಗೊಬ್ಬರ ಬಳಸುವುದರಿಂದ ಗಂಧಕದ (Sulphur) ಅಂಶ ದೊರೆತು ಸೋಯಾಬೀನ್ ಕಾಳಿನಲ್ಲಿ ಎಣ್ಣೆಯ ಪ್ರಮಾಣ ಹೆಚ್ಚುತ್ತದೆ.ಸಮಗ್ರ ಕೃಷಿ ಪದ್ಧತಿ (IFS) ಅಳವಡಿಕೆ: ಕೇವಲ ಒಂದೇ ಬೆಳೆಯನ್ನು ನಂಬಿಕೊಳ್ಳದೆ ಕೃಷಿಯೊಂದಿಗೆ ಪಶುಸಂಗೋಪನೆ, ತೋಟಗಾರಿಕೆ ಮುಂತಾದ ಪೂರಕ ಚಟುವಟಿಕೆಗಳನ್ನು ಕೈಗೊಳ್ಳಬೇಕು. ಇದ–ರಿಂದ ಪ್ರತಿಕೂಲ ಹವಾಮಾನದಿಂದ ಒಂದು ಬೆಳೆ ನಷ್ಟವಾದರೂ ಇತರ ಮೂಲಗಳಿಂದ ನಿರಂತರ ಆದಾಯ ಲಭಿಸಿ ಆರ್ಥಿಕ ಸ್ಥಿರತೆ ಸಿಗುತ್ತದೆ.

ಇಲಾಖೆಯ ಯೋಜನೆಗಳ ಬಳಕೆ: ಕೃಷಿ ಯಾಂತ್ರೀಕರಣ, ತುಂತುರು ನೀರಾವರಿ (Sprinkler) ಹಾಗೂ ಹನಿ ನೀರಾವರಿ (Drip Irrigation) ಸೌಲಭ್ಯಗಳನ್ನು ಸರ್ಕಾರಿ ಮಾರ್ಗಸೂಚಿಗಳಂತೆ ರೈತರು ಸದುಪಯೋಗಪಡಿಸಿಕೊಳ್ಳಬೇಕು.ಆಗಸ್ಟ್ 10ರೊಳಗೆ ಬೆಳೆ ವಿಮೆ ಕಡ್ಡಾಯ: ಸಾಲ ಪಡೆದಿರುವ ರೈತರು (Loanee Farmers) ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ (PMFBY) ಅಡಿಯಲ್ಲಿ ತಮ್ಮ ತೊಗರಿ ಮತ್ತು ಸೋಯಾಬೀನ್ ಬೆಳೆಗಳಿಗೆ 2026ರ ಆಗಸ್ಟ್ 10ರ ಒಳಗಾಗಿ ಕಡ್ಡಾಯವಾಗಿ ಬೆಳೆ ವಿಮೆ ನೋಂದಣಿ ಮಾಡಿಸಿಕೊಳ್ಳಬೇಕೆಂದು ಕೃಷಿ ಅಧಿಕಾರಿಗಳು ಮನವಿ ಮಾಡಿದ್ದಾರೆ.ಈ ಪರಿಶೀಲನೆ ಸಂದರ್ಭದಲ್ಲಿ ರೈತ ಸಂಘದ ಅಧ್ಯಕ್ಷರಾದ ಶ್ರೀ ಪ್ರವೀಣ ಕುಲಕರ್ಣಿ, ಕೃಷಿಕ ಸಮಾಜದ ಉಪಾಧ್ಯಕ್ಷರಾದ ಶ್ರೀ ವಿಠ್ಠಲ್ ಪಾಟೀಲ್ ಹಾಗೂ ಜಿಲ್ಲಾ ಪ್ರತಿನಿಧಿಗಳಾದ ಶ್ರೀ ಕಮನಣ್ಣ ಸೇರಿದಂತೆ ಸ್ಥಳೀಯ ರೈತರು ಉಪಸ್ಥಿತರಿದ್ದರು.

# ಕಲೆ ಸಂಸ್ಕೃತಿ ದೇಶದ ಆತ್ಮ : ರಾಜೇಶ ಗುತ್ತೇದಾರ

• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ




ಕಲೆ, ಸಂಸ್ಕೃತಿ, ಗುರು ಪರಂಪರೆ ಎಂಬುದು ನಮ್ಮ ದೇಶದ ಆತ್ಮ ಎಂದು ರಾಜೇಶ ಗುತ್ತೇದಾರ ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಪೂಜ್ಯ ಶ್ರೀ ಹಾರಕೂಡ ಕರಬಸಯ್ಯ ಸ್ವಾಮಿ ಸಾಂಸ್ಕೃತಿಕ ಕಲಾ ಸಂಸ್ಥೆಯ 2ನೇ ವಾರ್ಷಿಕೋತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು ಮನುಷ್ಯ ಎಷ್ಟೇ ದೊಡ್ಡ ಪದವಿ ಗಳಿಸಿರಲಿ, ಎಷ್ಟೇ ಸಂಪತ್ತು ಗಳಿಸಿರಲಿ ಅವನ ಹತ್ತಿರ ಇನ್ನೊಬ್ಬರನ್ನು ಗೌರವಿಸುವ, ಪ್ರೀತಿಸುವ ಸಾಮಾನ್ಯ ಜ್ಞಾನ ಇಲ್ಲದಿದ್ದರೆ ಎಲ್ಲವೂ ವ್ಯರ್ಥ, ತರ್ಕದ ಮಾತಿಗಿಂತಲೂ ವಾಸ್ತವ ಮತ್ತು ಅನುಭವ ದೊಡ್ಡದಾಗಿರುತ್ತದೆ.

ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರು ಇವತ್ತಿನ ಸಮಾಜಕ್ಕೆ ಬೇಕಾಗಿರುವ ಸತ್ಯ ಶುದ್ಧ ನೈಜ ಬದುಕು ಕಟ್ಟಿಕೊಳ್ಳುವ ಧರ್ಮದ ಸಾರಾಮೃತವನ್ನು ನೀಡುವಂತಹ ಶ್ರೇಷ್ಠ ಪೂಜ್ಯರಾಗಿದ್ದಾರೆ, ಹಾರಕೂಡ ಕರಬಸಯ್ಯ ಸ್ವಾಮಿಗಳ ಹೆಸರಲ್ಲಿ ಕಲಾವಿದರಿಗೆ ಕೊಡ ಮಾಡುವ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಉದ್ಘಾಟಿಸಿರುವುದು ನನ್ನ ಬದುಕಿನ ಬಹುದೊಡ್ಡ ಭಾಗ್ಯ ಎಂದು ಭಾವುಕರಾಗಿ ನುಡಿದರು. ಹಾರಕೂಡದ ಪೂಜ್ಯ ಡಾ. ಶ್ರೀ ಚನ್ನವೀರ ಶಿವಾಚಾರ್ಯರು ಸಾನಿಧ್ಯ ವಹಿಸಿದ್ದರು. ಮಲ್ಲಿನಾಥ ಹಿರೇಮಠ ಹಾರಕೂಡ, ಮೇಘರಾಜ ನಾಗರಾಳೆ, ಸಿದ್ರಾಮಪ್ಪ ಗುದಗೆ, ಆನಂದರಾವ ಝುಳಕೆ, ಪಂಡಿತರಾವ ದೇಗಾಂವ, ವಿಜಯಕುಮಾರ ಸಂಗೋಳಗಿ, ಸೂರ್ಯಕಾಂತ ಸಂಗೋಳಗಿ, ಶೇಖ ಮಾಸ್ಟರ್ ಕಲಬುರ್ಗಿ, ರೇವಣಸಿದ್ದ ಹೂಗಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಕುಮಾರಿ ಪೂಜಾ ಮಡಿವಾಳಪ್ಪ ಗೊಬ್ಬೂರ ಪ್ರಾರ್ಥನೆ ಗೀತೆ. ಶಿವಲಿಂಗಯ್ಯ ಚಿಣಮಗೇರಾ ನಿರೂಪಿಸಿದರು.

ಹಿಂದುಸ್ತಾನಿ ಶಾಸ್ತ್ರೀಯ ಸಂಗೀತಗಾರರಾದ ಪಂ. ವೀರಭದ್ರಯ್ಯ ಹಿರೇಮಠ ಮೈಸೂರ ಹಾಗೂ ಬಸವರಾಜ ಭಂಟನೂರ ಕೆಂಬಾವಿ ಅವರನ್ನು ಪೂಜ್ಯ ಡಾ. ಚನ್ನವೀರ ಶಿವಾಚಾರ್ಯರು "ಶ್ರೀ ಹಾರಕೂಡ ಕರಬಸಯ್ಯ ಸ್ವಾಮಿ ಕಲಾ ಪ್ರಶಸ್ತಿ" ನೀಡಿ ಆಶೀರ್ವದಿಸಿದರು.ಕು. ಸಂಜನಾ ಕೌಶಿಕ, ಕಾರ್ತಿಕಯ್ಯ ಗವಾಯಿಗಳು, ಶಿವಲಿಂಗಯ್ಯ ಗವಾಯಿಗಳು, ಮೃತ್ಯುಂಜಯ ಹಿರೇಮಠ, ಸಿದ್ದಣ್ಣ ಹೂಗಾರ್ ದೇಸಾಯಿ ಕಲ್ಲೂರ, ಜಗದೀಶ ಹೂಗಾರ, ಕಲ್ಮೇಶ ಹೂಗಾರ, ಮನೋಹರ ವಿಶ್ವಕರ್ಮ, ಕಾರ್ತಿಕ ಸ್ವಾಮಿ ಯಲದಗುಂಡಿ, ಶರಣಪ್ಪ ಜಮಾದಾರ ಸಂಗೀತ ಸೇವೆ ಸಲ್ಲಿಸಿದರು.

# ಮನಸ್ಸಿನ ಭಾವನೆಗಳು ಕಲೆಯಾಗಿ ಹೊರಹೊಮ್ಮುತ್ತದೆ: ತುಳಸಿದಾಸ ಕಾಮತ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಮನಸ್ಸಿನಲ್ಲಿ ಮೂಡುವ ಭಾವನೆಗಳನ್ನುಅಭಿವ್ಯಕ್ತಿಗೊಳಿಸುವಲ್ಲಿ ಕಲೆ ಅತ್ಯುತ್ತಮ ಸಾದನವಾಗಿದೆ. ಎಲ್ಲ ವಿದ್ಯಾರ್ಥಿಗಳು ಸಾಹಿತ್ಯವನ್ನುಕೂಡತಮ್ಮಜೀವನದಲ್ಲಿ ಅಳವಡಿಸಿಕೊಂಡಾಗ ಸಮಾಜದಲ್ಲಿ ಗುರುತಿಸಿಕೊಳ್ಳಲು ಸಾಧ್ಯವಾಗುತ್ತದೆಎಂದುಉದ್ಯಮಿ ತುಳಸಿದಾಸ ಕಾಮತಹೇಳಿದರು.

ತಾಲೂಕಿನಅವರ್ಸಾದ ಸರಕಾರಿ ಮಾದರಿ ಗಂಡುಮಕ್ಕಳ ಶಾಲೆಯಲ್ಲಿಕನ್ನಡ ಸಾಹಿತ್ಯ ಪರಿಷತ್ತು ಆಯೋಜಿಸಿದ 'ನಾವು ಮತ್ತು ನಮ್ಮ ಕಲೆ'ಎನ್ನ್ನುವಚಿತ್ರಕಲಾಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಕಸಾಪ ಅಧ್ಯಕ್ಷಗೋಪಾಲಕೃಷ್ಣ ನಾಯಕ ಮಾತನಾಡಿ, ನಮ್ಮಸಂಸ್ಕೃತಿಯ, ಪರಂಪರೆ, ಪರಿಸರವನ್ನುಕಲೆಯರೂಪದಲ್ಲಿ ಪರಿಚಯಿಸುತ್ತದೆಎಂಬುದಕ್ಕೆ ಮುದ್ದು ಮಕ್ಕಳ ಕರಗಳಲ್ಲಿ ಅರಳಿರುವ ಸುಂದರ ಚಿತ್ರಗಳು ಸಾಕ್ಷಿಯಾಗಿದೆಎಂದರು.ಕಾರ್ಯನಿರತ ಪತ್ರಕರ್ತರ ಸಂಘದಅಧ್ಯಕ್ಷರಾಘುಕಾಕರಮಠ, ಡಾ.ಅರ್ಚನಾ ನಾಯಕ, ಪತ್ರಕರ್ತ ವಾಸುದೇವ ಗುನಗಾ, ಎಸ್.ಡಿ.ಎಂ.ಸಿ ಅಧ್ಯಕ್ಷ ಮಂಜುನಾಥ ಕೆ.ನಾಯ್ಕ, ಉಪಾಧ್ಯಕ್ಷೆ ಪೂರ್ವಿ ನಾಯ್ಕ, ಮುಖ್ಯಾಧ್ಯಾಪಕಿ ಲಕ್ಷ್ಮಿಎನ್.ನಾಯಕಇತರರಿದ್ದರು.ಈ ಸಂದರ್ಭದಲ್ಲಿ ಹಿರಿಯಜನಪದಕಲಾವಿದ ಹಟ್ಟಿಕೇರಿಯ ವಾಮನ ನಾಯ್ಕಅವರನ್ನು ಸನ್ಮಾನಿಸಿ ಗೌರವಿಸಿದರು.

# ಗಿಡಮೂಲಿಕೆಗಳ ಅರಿವು, ಸಂರಕ್ಷಣೆಎಲ್ಲರ ಹೊಣೆ: ಡಾ. ಕಿರಣ್‌ಅಂಕ್ಲೇಕರ್

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ



ಪತಂಜಲಿ ಯೋಗ ಸಮಿತಿ ಅಂಕೋಲಾ, ಮಹಿಳಾ ಪತಂಜಲಿ ಯೋಗ ಸಮಿತಿ, ಭಾರತ ಸ್ವಾಭಿಮಾನಟ್ರಸ್ಟ್, ಯುವ ಭಾರತ ಹಾಗೂ ಕಿಸಾನ್‌ಯೋಗ ಸಮಿತಿ, ಲಾಯನ್ಸ್‌ಕ್ಲಬ್ ಅಂಕೋಲಾ ಸಿಟಿ ಇವರಆಶ್ರಯದಲ್ಲಿಆಚಾರ್ಯ ಬಾಲಕೃಷ್ಣಅವರಜನ್ಮದಿನವನ್ನು 'ಜಡಿಬೂಟಿ ದಿನ'ವನ್ನಾಗಿಆಚರಿಸಲಾಯಿತು.ಕಾರ್ಯಕ್ರಮ ಉದ್ಘಾಟಿಸಿದ ಡಾ.ಕಿರಣ್‌ಅಂಕ್ಲೇಕರ್ ಮಾತನಾಡಿ, ನಮ್ಮ ಸುತ್ತಮುತ್ತಲಿನ ಪರಿಸರದಲ್ಲಿ ಸಹಜವಾಗಿದೊರೆಯುವಔಷಧೀಯ ಗಿಡಮೂಲಿಕೆಗಳ ಕುರಿತು ಪ್ರತಿಯೊಬ್ಬರೂ ತಿಳಿವಳಿಕೆ ಹೊಂದಿರಬೇಕು.ಅವುಗಳ ಔಷಧೀಯ ಮಹತ್ವವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದರೊಂದಿಗೆ ಸಂರಕ್ಷಿಸುವ ಹೊಣೆಗಾರಿಕೆಯೂ ನಮ್ಮೆಲ್ಲರ ಮೇಲಿದೆಎಂದರು.ಹಾವು, ನಾಯಿ ಹಾಗೂ ವಿವಿಧ ವಿಷಜಂತುಗಳ ಕಡಿತಕ್ಕೆನಾಟಿಔಷಧ ನೀಡುವ ಮೂಲಕ ದೀರ್ಘಕಾಲದಿಂದಜನಸೇವೆಯಲ್ಲಿ ತೊಡಗಿಸಿಕೊಂಡಿರುವ ಕುಂಬಾರಕೇರಿಯ ಪೀರುಅನಂತ ನಾಯ್ಕಅವರನ್ನುಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.ಲಾಯನ್ಸ್‌ಕ್ಲಬ್ ಅಂಕೋಲಾ ಸಿಟಿಯ ಅಧ್ಯಕ್ಷ ಪ್ರದೀಪರಾಯ್ಕರಪರಿಸರಸಂರಕ್ಷಣೆಯಅಗತ್ಯ ಮತ್ತುಅದರ ಸಾಮಾಜಿಕ ಮಹತ್ವವನ್ನು ವಿವರಿಸಿದರು.ಲಾಯನ್ಸ್‌ಕ್ಲಬ್ ಅಂಕೋಲಾ ಸಿಟಿಯವತಿಯಿಂದಕಾರ್ಯಕ್ರಮದಲ್ಲಿಸೀಡ್ ಬಾಲ್‌ಗಳನ್ನು ವಿತರಿಸಲಾಯಿತು.ಭಾರತ ಸ್ವಾಭಿಮಾನಟ್ರಸ್ಟ್‌ನ ಪ್ರಭಾರಿಡಾ. ವಿಜಯದೀಪ್‌ಅಧ್ಯಕ್ಷತೆ ವಹಿಸಿದ್ದರು. ಮಹಿಳಾ ಪತಂಜಲಿ ಯೋಗ ಸಮಿತಿಯ ಪ್ರಭಾರಿ ನಿರೂಪಮಾ ಶ್ಯಾಮಸುಂದರ್‌ಪ್ರಾರ್ಥಿಸಿದರು.ಪತಂಜಲಿ ಯೋಗ ಸಮಿತಿಯ ಪ್ರಭಾರಿ ವಿನಾಯಕಗುಡಿಗಾರ ಪ್ರಾಸ್ತಾವಿಕವಾಗಿ ಮಾತನಾಡಿದರು.ಯುವ ಭಾರತದ ಪ್ರಭಾರಿ ಸತೀಶ ನಾಯ್ಕ ಸ್ವಾಗತಿಸಿದರು.ಕಿಸಾನ್‌ಯೋಗ ಸಮಿತಿಯ ಪ್ರಭಾರಿಅಭಯ ಮರಬಳ್ಳಿ ವಂದಿಸಿದರು.ಪತಂಜಲಿ ಯೋಗ ಸಮಿತಿಯ ಕಾರ್ಯದರ್ಶಿ ವಿ.ಕೆ.ನಾಯರ್ ನಿರೂಪಿಸಿದರು.ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಎಲ್ಲ ಯೋಗಬಂಧುಗಳಿಗೆ ಔಷಧೀಯ ಗಿಡಮೂಲಿಕೆಗಳನ್ನು ವಿತರಿಸಲಾಯಿತು.

## ಪಾರ್ಕಿಂಗ್ ಸ್ಥಳಗಳನ್ನು ಸಾರ್ವಜನಿಕರಿಗೆ ಮುಕ್ತಗೊಳಿಸಲು ಮನವಿ



**ಗಂಗಾವತಿ:** ನಗರದ ಹೃದಯಭಾಗದಲ್ಲಿ ಹರಿಯುತ್ತಿರುವ ಐತಿಹಾಸಿಕ ದುರ್ಗಮ್ಮನ ಹಳ್ಳವನ್ನು ತುರ್ತಾಗಿ ಸ್ವಚ್ಛಗೊಳಿಸಿ, ಅಮೃತ್ ನಗರ ಯೋಜನೆಯಡಿ ನಿರ್ಮಿಸಲಾಗಿರುವ ಪಾರ್ಕಿಂಗ್ ಸ್ಥಳಗಳನ್ನು ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸುವಂತೆ ಆಗ್ರಹಿಸಿ ಸಾಮಾಜಿಕ ಕಾರ್ಯಕರ್ತರು ನಗರಸಭೆ ಪೌರಾಯುಕ್ತರಿಗೆ ಮನವಿ ಸಲ್ಲಿಸಿದರು.

ಮನವಿಯಲ್ಲಿ, ನಾಲ್ಕು ವರ್ಷಗಳ ಹಿಂದೆ "ನಮ್ಮ ಊರು ನಮ್ಮ ಹಳ್ಳ" ಸಮಾನ ಮನಸ್ಕರ ತಂಡದ ವತಿಯಿಂದ ದುರ್ಗಮ್ಮನ ಹಳ್ಳವನ್ನು ಸಂಪೂರ್ಣ ಸ್ವಚ್ಛಗೊಳಿಸಲಾಗಿತ್ತು. ಬಳಿಕ ಅಮೃತ್ ನಗರ ಯೋಜನೆಯಡಿ ಹಳ್ಳಕ್ಕೆ ತಡೆಗೋಡೆ ನಿರ್ಮಿಸಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿತ್ತು. ಆದರೆ ಪ್ರಸ್ತುತ ಹಳ್ಳದಲ್ಲಿ ಮತ್ತೆ ಗಿಡಗಂಟೆಗಳು ಬೆಳೆದು, ಕಸ-ಕಡ್ಡಿಗಳು ತುಂಬಿಕೊಂಡು ಬೃಹತ್ ಚರಂಡಿಯಂತಾಗಿರುವುದರಿಂದ ಸಾರ್ವಜನಿಕರಲ್ಲಿ ತೀವ್ರ ಆತಂಕ ಮನೆ ಮಾಡಿದೆ ಎಂದು ತಿಳಿಸಲಾಗಿದೆ.

ದುರ್ಗಮ್ಮನ ಹಳ್ಳದ ದಂಡೆಯಲ್ಲೇ ಚನ್ನಬಸವಸ್ವಾಮಿಗಳ ಮಠ ಹಾಗೂ ಗ್ರಾಮದೇವತೆ ಶ್ರೀ ದುರ್ಗಾದೇವಿ ದೇವಸ್ಥಾನ ಸೇರಿದಂತೆ ಧಾರ್ಮಿಕ ಮಹತ್ವದ ಸ್ಥಳಗಳಿದ್ದರೂ, ಹಳ್ಳದ ಸ್ವಚ್ಛತೆ ಕಾಪಾಡುವಲ್ಲಿ ನಗರಸಭೆ ಹಾಗೂ ಸಾರ್ವಜನಿಕರ ನಿರ್ಲಕ್ಷ್ಯ ಕಂಡುಬರುತ್ತಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ಇದಲ್ಲದೆ, ತಾತನ ಮಠದ ಎದುರು, ಶಿವ ಚಿತ್ರಮಂದಿರದ ಎದುರು ಹಾಗೂ ಇಸ್ಲಾಂಪುರ ಸೇತುವೆ ಸಮೀಪ ಅಮೃತ್ ನಗರ ಯೋಜನೆಯಡಿ ನಿರ್ಮಿಸಿರುವ ಪಾರ್ಕಿಂಗ್ ಸ್ಥಳಗಳು ಸಮರ್ಪಕವಾಗಿ ಬಳಕೆಯಾಗದೆ ಖಾಲಿ ಬಿದ್ದಿವೆ. ಈ ಪಾರ್ಕಿಂಗ್ ಸ್ಥಳಗಳನ್ನು ಸಾರ್ವಜನಿಕರಿಗೆ ಮುಕ್ತಗೊಳಿಸಿ, ಸುಸಜ್ಜಿತವಾಗಿ ನಿರ್ವಹಿಸುವಂತೆ ಮನವಿ ಮಾಡಲಾಗಿದೆ. ಹಳ್ಳಕ್ಕೆ ಕಸ ಸುರಿಯುವುದನ್ನು ಕಟ್ಟುನಿಟ್ಟಾಗಿ ತಡೆಯಬೇಕು. ಹಳ್ಳದ ಎರಡೂ ಬದಿಗಳಿಂದ ಹರಿಯುತ್ತಿರುವ ಕೊಳಚೆ ನೀರನ್ನು ಯುಜಿಡಿ ವ್ಯವಸ್ಥೆಗೆ ಸಂಪರ್ಕಿಸಿ, ಹಳ್ಳದಲ್ಲಿ ಕೇವಲ ಮಳೆ ನೀರು ಮಾತ್ರ ಹರಿಯುವಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಜೊತೆಗೆ ದುರ್ಗಮ್ಮನ ಹಳ್ಳವನ್ನು ಸ್ವಚ್ಛ, ಸುಂದರ ಹಾಗೂ ಪರಿಸರ ಸ್ನೇಹಿಯಾಗಿ ಅಭಿವೃದ್ಧಿಪಡಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ಈ ಸಂದರ್ಭದಲ್ಲಿ ದುರ್ಗಮ್ಮನ ಹಳ್ಳ ಸ್ವಚ್ಛತಾ ಅಭಿಯಾನದ ಸಂಚಾಲಕರಾದ ಡಾ. ಶಿವಕುಮಾರ್ ಮಾಲಿಪಾಟೀಲ, ಉಮೇಶ್ ಸಿಂಗನಾಳ, ಪ್ರಹ್ಲಾದ್ ಕುಲಕರ್ಣಿ, ಬಸವರಾಜ ಮ್ಯಾಗಳಮನಿ, ಸಂದೇಶ್ ಹಿರೇಮಠ, ಹರನಾಯಕ, ನವೀನಕುಮಾರ ಮಾಲಿಪಾಟೀಲ, ಮಂಜುನಾಥ ಮಂಗಳಗಿ, ನಾಗರಾಜ ನಾಯಕ ಸೇರಿದಂತೆ ಹಲವರು ನಗರಸಭೆಯ ಪರಿಸರ ಅಭಿಯಂತರ ಶರಣಪ್ಪ ಅವರ ಮೂಲಕ ನಗರಸಭೆ ಪೌರಾಯುಕ್ತರಿಗೆ ಮನವಿ ಸಲ್ಲಿಸಿದರು.

## ವಿದ್ಯಾರ್ಥಿ ಒಕ್ಕೂಟಕ್ಕೆ ಚುನಾವಣೆ: ರೇಣುಕಾ ಪ್ರಧಾನ ಕಾರ್ಯದರ್ಶಿ, ಫರೀನಾ ಸಹ ಕಾರ್ಯದರ್ಶಿಯಾಗಿ ಆಯ್ಕೆ




**ಗಂಗಾವತಿ:** ನಗರದ ಶ್ರೀ ಕೊಟ್ಟೂರೇಶ್ವರ ವಿದ್ಯಾವರ್ಧಕ ಸಂಘದ ಕಲ್ಮಠ ಶ್ರೀ ಚನ್ನಬಸವ ಸ್ವಾಮಿ ಮಹಿಳಾ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ 2026–27ನೇ ಶೈಕ್ಷಣಿಕ ಸಾಲಿನ ವಿದ್ಯಾರ್ಥಿ ಒಕ್ಕೂಟದ ಚುನಾವಣೆಯು ಪ್ರಜಾಪ್ರಭುತ್ವದ ರೀತಿಯಲ್ಲಿ ಯಶಸ್ವಿಯಾಗಿ ನಡೆಯಿತು. ವಿದ್ಯಾರ್ಥಿನಿಯರು ಉತ್ಸಾಹದಿಂದ ಮತದಾನದಲ್ಲಿ ಭಾಗವಹಿಸಿ ತಮ್ಮ ಪ್ರತಿನಿಧಿಗಳನ್ನು ಆಯ್ಕೆ ಮಾಡಿದರು.

ಚುನಾವಣೆಯ ಫಲಿತಾಂಶದಲ್ಲಿ ಬಿ.ಕಾಂ ಅಂತಿಮ ವರ್ಷದ ವಿದ್ಯಾರ್ಥಿನಿ ರೇಣುಕಾ ಬಹುಮತದೊಂದಿಗೆ ಪ್ರಧಾನ ಕಾರ್ಯದರ್ಶಿಯಾಗಿ, ಬಿ.ಎ ಅಂತಿಮ ವರ್ಷದ ವಿದ್ಯಾರ್ಥಿನಿ ಫರೀನಾ ಸಹ ಕಾರ್ಯದರ್ಶಿಯಾಗಿ ಆಯ್ಕೆಯಾದರು.

**ಇದೇ ವೇಳೆ ವಿವಿಧ ವೇದಿಕೆಗಳ ಕಾರ್ಯದರ್ಶಿಗಳಾಗಿ ಆಯ್ಕೆಯಾದವರು:**

ಮಹಿಳಾ ಅಧ್ಯಯನ ವೇದಿಕೆ: ನೌಶಿನ್ (ಬಿ.ಎ ಅಂತಿಮ ವರ್ಷ)
ವ್ಯಕ್ತಿತ್ವ ವಿಕಸನ ವೇದಿಕೆ: ರಂಜಿತ (ಬಿ.ಕಾಂ ಅಂತಿಮ ವರ್ಷ)
ಲಲಿತ ಕಲಾ ವೇದಿಕೆ: ಗಾಯತ್ರಿ (ಬಿ.ಎ ಅಂತಿಮ ವರ್ಷ)
ಕ್ರೀಡೆ ಮತ್ತು ಯೋಗ ವೇದಿಕೆ: ಅಖಿಲಾ

ಇದರ ಜೊತೆಗೆ ವಿವಿಧ ತರಗತಿಗಳ ಪ್ರತಿನಿಧಿಗಳ ಆಯ್ಕೆಯೂ ನಡೆಯಿತು.

ಬಿ.ಎ ಪ್ರಥಮ ವರ್ಷದ ಪ್ರತಿನಿಧಿಗಳು: ಭೀಮಮ್ಮ, ಪ್ರೇಮ, ಭೂಮಿಕ, ಅಖಿಲ

ಬಿ.ಎ ದ್ವಿತೀಯ ವರ್ಷದ ಪ್ರತಿನಿಧಿಗಳು: ಸಮ್ರೀನ್, ಅನುರಾಧ, ಪವಿತ್ರ, ಅನೀಫ್ ಬಾನು

ಬಿ.ಕಾಂ ಪ್ರಥಮ ವರ್ಷದ ಪ್ರತಿನಿಧಿಗಳು: ಪವಿತ್ರ, ಸುಪ್ರಿಯ, ದಿವ್ಯಶ್ರೀ, ಶಹೀದ್

ಬಿ.ಕಾಂ ದ್ವಿತೀಯ ವರ್ಷದ ಪ್ರತಿನಿಧಿಗಳು: ಅಂಬಿಕಾ, ಶಶಿಕಲಾ, ಮುಸ್ಕಾನ್ ಹಾಗೂ ಟಿ. ರಶ್ಮಿ

ಚುನಾವಣಾ ಪ್ರಕ್ರಿಯೆಯನ್ನು ಮಹಾವಿದ್ಯಾಲಯದ ಉಪನ್ಯಾಸಕ ಹಾಗೂ ಸಿಬ್ಬಂದಿ ವರ್ಗವು ಸುಸೂತ್ರವಾಗಿ ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಶರಣಬಸಪ್ಪ ಕೋಲ್ಕಾರ್, ಉಪಪ್ರಾಚಾರ್ಯ ಡಾ. ಕೆ.ಎಂ. ಬಸವರಾಜ್ ಹಾಗೂ ವಿದ್ಯಾರ್ಥಿ ಒಕ್ಕೂಟದ ಕಾರ್ಯಾಧ್ಯಕ್ಷೆ ಡಾ. ಜರೀನಾ ಚುನಾವಣಾ ಅಧಿಕಾರಿಗಳಾಗಿ ಕಾರ್ಯನಿರ್ವಹಿಸಿ ವಿದ್ಯಾರ್ಥಿನಿಯರಿಗೆ ಮಾರ್ಗದರ್ಶನ ನೀಡಿದರು. ಪ್ರಜಾಪ್ರಭುತ್ವದ ಮೌಲ್ಯಗಳನ್ನು ವಿದ್ಯಾರ್ಥಿ ಜೀವನದಲ್ಲೇ ಬೆಳೆಸುವ ಉದ್ದೇಶದಿಂದ ಆಯೋಜಿಸಲಾದ ಈ ಚುನಾವಣೆಯು ಶಾಂತಿಯುತ ಹಾಗೂ ಯಶಸ್ವಿಯಾಗಿ ನಡೆದಿದ್ದು, ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳಿಗೆ ಕಾಲೇಜಿನ ಆಡಳಿತ ಮಂಡಳಿ, ಉಪನ್ಯಾಸಕರು ಹಾಗೂ ವಿದ್ಯಾರ್ಥಿನಿಯರು ಅಭಿನಂದನೆ ಸಲ್ಲಿಸಿದರು.

# ರೈತರ ನೆರವಿಗೆ ತಕ್ಷಣ ₹10,000 ಕೋಟಿ ಬಿಡುಗಡೆಗೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ತುಮಕೂರು

ರಾಜ್ಯದ 28ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಮಳೆಯ ಅಭಾವದಿಂದ ತೀವ್ರ ಬರ ಪರಿಸ್ಥಿತಿ ನಿರ್ಮಾಣವಾಗಿದ್ದು, ರೈತರು ಸಂಕಷ್ಟದ ಸುಳಿಯಲ್ಲಿ ಸಿಲುಕಿದ್ದಾರೆ. ಇಂತಹ ಸಂದರ್ಭದಲ್ಲಿ ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ನೆರವಿಗಾಗಿ ಕಾಯದೆ ತಕ್ಷಣವೇ ₹10,000 ಕೋಟಿ ವಿಶೇಷ ಪರಿಹಾರ ಪ್ಯಾಕೇಜ್ ಬಿಡುಗಡೆ ಮಾಡಿ ರೈತರ ನೆರವಿಗೆ ಧಾವಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದರು.

ತುಮಕೂರು ಜಿಲ್ಲಿಗೆ ಸೇರಿದ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಬರ ಪರಿಸ್ಥಿತಿಯನ್ನು ಪರಿಶೀಲಿಸಿದ ಬಳಿಕ ಅವರು ಮಾಧ್ಯಮದವರೊಂದಿಗೆ ಮಾತನಾಡಿದರು.

**ಏಳು ಅಧ್ಯಯನ ತಂಡಗಳ ಮೂಲಕ ಬರ ಪರಿಸ್ಥಿತಿಯ ಪರಿಶೀಲನೆ:** ರಾಜ್ಯದ ನೈಜ ಬರ ಪರಿಸ್ಥಿತಿಯನ್ನು ಅರಿಯುವ ಉದ್ದೇಶದಿಂದ ಬಿಜೆಪಿ ವತಿಯಿಂದ ಏಳು ಅಧ್ಯಯನ ತಂಡಗಳನ್ನು ರಚಿಸಲಾಗಿದೆ. ಈ ತಂಡಗಳು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ರೈತರನ್ನು ಭೇಟಿ ಮಾಡಿ, ಹೊಲಗಳಿಗೆ ತೆರಳಿ ಬೆಳೆ ಪರಿಸ್ಥಿತಿಯನ್ನು ಪರಿಶೀಲಿಸುತ್ತಿವೆ. ರೈತರ ಸಂಕಷ್ಟವನ್ನು ಸರ್ಕಾರದ ಗಮನಕ್ಕೆ ತರುವ ಉದ್ದೇಶದಿಂದಲೇ ಈ ಪ್ರವಾಸ ಹಮ್ಮಿಕೊಳ್ಳಲಾಗಿದೆ ಎಂದು ವಿಜಯೇಂದ್ರ ಹೇಳಿದರು.

**ತುಮಕೂರು ಜಿಲ್ಲೆಯ ಎಲ್ಲ ತಾಲೂಕುಗಳನ್ನು ಬರಪೀಡಿತ ಪ್ರದೇಶವೆಂದು ಘೋಷಿಸಬೇಕು:**



ತುಮಕೂರು ಜಿಲ್ಲೆಯ ಬಹುತೇಕ ಎಲ್ಲಾ 10 ತಾಲೂಕುಗಳಲ್ಲಿ ಮಳೆಯ ಕೊರತೆ ತೀವ್ರವಾಗಿದೆ. ತೆಂಗು, ರಾಗಿ, ಹಣ್ಣು ಹಾಗೂ ತರಕಾರಿ ಬೆಳೆಯುವ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಹಲವು ಕಡೆಗಳಲ್ಲಿ ಬಿತ್ತನೆ ಆರಂಭವಾಗದೇ ಇರುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಇನ್ನೂ ಕೆಲವು ಕಡೆಗಳಲ್ಲಿ ಬಿತ್ತಿದ ಬೆಳೆ ಮೊಳಕೆಯೊಡೆಯದೇ ಹಾನಿಯಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲ ತಾಲೂಕುಗಳನ್ನು ತಕ್ಷಣವೇ ಬರಪೀಡಿತ ಪ್ರದೇಶಗಳೆಂದು ಘೋಷಿಸಬೇಕು ಎಂದು ಅವರು ಒತ್ತಾಯಿಸಿದರು.

**ರೈತರ ಸಂಕಷ್ಟಕ್ಕೆ ₹10,000 ಕೋಟಿ ವಿಶೇಷ ಪ್ಯಾಕೇಜ್ ಘೋಷಿಸಬೇಕು:** ರಾಜ್ಯದ ರೈತರು ಆರ್ಥಿಕ ಸಂಕಷ್ಟದಲ್ಲಿದ್ದು, ಕೃಷಿ ಚಟುವಟಿಕೆಗಳನ್ನು ಮುಂದುವರಿಸಲು ಸಾಧ್ಯವಾಗದ ಪರಿಸ್ಥಿತಿ ಎದುರಾಗಿದೆ. ರಾಜ್ಯ ಸರ್ಕಾರ ಕೇಂದ್ರಕ್ಕೆ ಪತ್ರ ಬರೆದು ಕೈಕಟ್ಟಿ ಕುಳಿತುಕೊಳ್ಳುವ ಬದಲು ತನ್ನ ಜವಾಬ್ದಾರಿಯನ್ನು ನಿರ್ವಹಿಸಿ ತಕ್ಷಣವೇ ₹10,000 ಕೋಟಿ ವಿಶೇಷ ಪರಿಹಾರ ಪ್ಯಾಕೇಜ್ ಬಿಡುಗಡೆ ಮಾಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

ಅನಂತರ ಕೇಂದ್ರ ಸರ್ಕಾರದ ನೆರವು ಪಡೆಯುವ ಪ್ರಕ್ರಿಯೆ ಮುಂದುವರಿಸಬಹುದು. ಆದರೆ ರಾಜ್ಯ ಸರ್ಕಾರದ ಪ್ರಾಥಮಿಕ ಜವಾಬ್ದಾರಿ ರೈತರನ್ನು ರಕ್ಷಿಸುವುದಾಗಿರಬೇಕು ಎಂದು ಅವರು ಹೇಳಿದರು.

**ರೈತರ ಬೆಳೆವಿಮೆ ಪ್ರೀಮಿಯಂ ಅನ್ನು ಸರ್ಕಾರವೇ ಪಾವತಿಸಬೇಕು:** ಪ್ರಸ್ತುತ ಪರಿಸ್ಥಿತಿಯಲ್ಲಿ ರೈತರಿಗೆ ಬೆಳೆವಿಮೆ ಪ್ರೀಮಿಯಂ ಪಾವತಿಸಲು ಕೂಡ ಆರ್ಥಿಕ ಸಾಮರ್ಥ್ಯ ಉಳಿದಿಲ್ಲ. ಆದ್ದರಿಂದ ರೈತರ ಪಾಲಿನ ಬೆಳೆವಿಮೆ ಮೊತ್ತವನ್ನು ರಾಜ್ಯ ಸರ್ಕಾರವೇ ಭರಿಸಬೇಕು. ತುಮಕೂರು ಜಿಲ್ಲೆಯ ಪ್ರತಿಯೊಂದು ತಾಲೂಕಿಗೂ ಕನಿಷ್ಠ ₹50 ಲಕ್ಷ ಬಿಡುಗಡೆ ಮಾಡಿ ರೈತರ ವಿಮಾ ಪ್ರೀಮಿಯಂ ಪಾವತಿಗೆ ನೆರವಾಗಬೇಕು ಎಂದು ಅವರು ಒತ್ತಾಯಿಸಿದರು.

**ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿದೆ:** ಹೇಮಾವತಿ ಸೇರಿದಂತೆ ಪ್ರಮುಖ ಜಲಮೂಲಗಳಲ್ಲಿ ನೀರಿನ ಮಟ್ಟ ಕುಸಿದಿದ್ದು, ಕೆರೆ–ಕಟ್ಟೆಗಳು ಬತ್ತುತ್ತಿವೆ. ಗ್ರಾಮೀಣ ಪ್ರದೇಶಗಳಲ್ಲಿ ಜನರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ತೀವ್ರ ಸಮಸ್ಯೆ ಎದುರಾಗಿದೆ.

ಪ್ರತಿ ತಾಲೂಕಿಗೆ ಈಗಾಗಲೇ ಘೋಷಿಸಿರುವ ₹1 ಕೋಟಿ ಅನುದಾನ ಸಾಕಾಗುವುದಿಲ್ಲ. ಹೆಚ್ಚುವರಿಯಾಗಿ ₹2 ಕೋಟಿ ಬಿಡುಗಡೆ ಮಾಡಿ ಕುಡಿಯುವ ನೀರಿನ ವ್ಯವಸ್ಥೆಯನ್ನು ಬಲಪಡಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

**ರೈತರಿಗೆ 7 ಗಂಟೆಗಳ 3–ಫೇಸ್ ವಿದ್ಯುತ್ ಪೂರೈಕೆ ಖಚಿತಪಡಿಸಬೇಕು:** ಅಂತರ್ಜಲ ಮಟ್ಟ ಕುಸಿದಿರುವುದರಿಂದ ಬೋರ್‌ವೆಲ್ ಅವಲಂಬಿತ ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ. ಇದಕ್ಕೆ ವಿದ್ಯುತ್ ಪೂರೈಕೆಯ ಕೊರತೆಯೂ ಕಾರಣವಾಗಿದೆ. ತೋಟಗಾರಿಕೆ ಬೆಳೆಗಳಾದ ತೆಂಗು, ಅಡಿಕೆ ಹಾಗೂ ಇತರ ಬೆಳೆಗಳನ್ನು ಉಳಿಸಲು ಪ್ರತಿದಿನ ಕನಿಷ್ಠ 7 ಗಂಟೆಗಳ ಕಾಲ ನಿರಂತರ 3–ಫೇಸ್ ವಿದ್ಯುತ್ ಪೂರೈಕೆ ಮಾಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

**ಮೊದಲು ರಾಜ್ಯ ಸರ್ಕಾರ ತನ್ನ ಜವಾಬ್ದಾರಿ ನಿರ್ವಹಿಸಬೇಕು:** ಬರ ಮತ್ತು ನೆರೆ ಪರಿಸ್ಥಿತಿಗಳು ಹೊಸದೇನಲ್ಲ. ಇಂತಹ ಸಂದರ್ಭಗಳಲ್ಲಿ ಮೊದಲು ರಾಜ್ಯ ಸರ್ಕಾರವೇ ತನ್ನ ಕರ್ತವ್ಯ ನಿರ್ವಹಿಸಿ ಪರಿಹಾರ ಬಿಡುಗಡೆ ಮಾಡಬೇಕು. ನಂತರ ಕೇಂದ್ರ ಸರ್ಕಾರದ ನೆರವನ್ನು ಕೋರಬೇಕು. ಕೇಂದ್ರ ಸರ್ಕಾರ ತನ್ನ ಜವಾಬ್ದಾರಿಯಿಂದ ಹಿಂದೆ ಸರಿಯುವುದಿಲ್ಲ. ಆದರೆ ರಾಜ್ಯ ಸರ್ಕಾರ ತನ್ನ ಜವಾಬ್ದಾರಿಯನ್ನು ನಿರ್ಲಕ್ಷಿಸಿದರೆ ಅದು ರೈತರಿಗೆ ಅನ್ಯಾಯ ಮಾಡಿದಂತಾಗುತ್ತದೆ ಎಂದು ಅವರು ಹೇಳಿದರು.

# ಕುಡಿಯುವ ನೀರಿನ ಪೈಪ್‌ಲೈನ್ ಕಾಮಗಾರಿ ಸ್ಥಗಿತಕ್ಕೆ ನಿವಾಸಿಗಳ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ವಡ್ಡರಹಟ್ಟಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಾರ್ಡ್ ನಂ. 02ರ ಉಳ್ಳಿಡಗ್ಗಿ ಪ್ರದೇಶದಲ್ಲಿ ನಡೆಯುತ್ತಿರುವ ಕುಡಿಯುವ ನೀರಿನ ಪೈಪ್‌ಲೈನ್ ಕಾಮಗಾರಿಯನ್ನು ತಕ್ಷಣ ಸ್ಥಗಿತಗೊಳಿಸಿ, ಸಂಪೂರ್ಣ ಪ್ರದೇಶದ ಸಮಗ್ರ ಸರ್ವೆ ನಡೆಸಿ ಎಲ್ಲಾ ಮನೆಗಳಿಗೆ ನದಿ ನೀರಿನ ಸಂಪರ್ಕ ಕಲ್ಪಿಸಬೇಕು ಎಂದು ಸ್ಥಳೀಯ ನಿವಾಸಿಗಳು ಒತ್ತಾಯಿಸಿದ್ದಾರೆ.

ಈ ಕುರಿತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸಲ್ಲಿಸಿರುವ ಮನವಿಯಲ್ಲಿ, ಸರ್ವೆ ನಂ. 25/*/12ರಿಂದ 20ರವರೆಗೆ ಬರುವ ಟೀಚರ್ಸ್ ವ್ಯಾಲಿ ಫೇಸ್‌2ರಲ್ಲಿ ವಾಸಿಸುತ್ತಿರುವ ನಿವಾಸಿಗಳು ತಮ್ಮ ಸಂಕಷ್ಟವನ್ನು ವಿವರಿಸಿದ್ದಾರೆ.

ಮನವಿಯಲ್ಲಿ, "ನಾವು ಹಲವು ವರ್ಷಗಳಿಂದ ಸಮರ್ಪಕ ಕುಡಿಯುವ ನೀರಿನ ಸೌಲಭ್ಯವಿಲ್ಲದೆ ತೀವ್ರ ತೊಂದರೆ ಅನುಭವಿಸುತ್ತಿದ್ದೇವೆ. ಬೋರ್‌ವೆಲ್ ನೀರಿನಲ್ಲಿ ಫ್ಲೋರೈಡ್ ಪ್ರಮಾಣ ಹೆಚ್ಚಿರುವ ಕಾರಣ ಕೈಕಾಲು ನೋವು ಸೇರಿದಂತೆ ವಿವಿಧ ಆರೋಗ್ಯ



ಸಮಸ್ಯೆಗಳು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿವೆ. ಆದ್ದರಿಂದ ನಮಗೂ ನದಿ ನೀರಿನ ಸಂಪರ್ಕ ಕಲ್ಪಿಸಿ ಶುದ್ಧ ಕುಡಿಯುವ ನೀರಿನ ಸೌಲಭ್ಯ ಒದಗಿಸಬೇಕು" ಎಂದು ಆಗ್ರಹಿಸಲಾಗಿದೆ.

ಇದೇ ವೇಳೆ, ಪ್ರಸ್ತುತ ನಡೆಯುತ್ತಿರುವ ಪೈಪ್‌ಲೈನ್ ಕಾಮಗಾರಿ ಕೆಲವೇ ಪಟ್ಟಭದ್ರ ಹಿತಾಸಕ್ತಿ ಹೊಂದಿರುವ ಸುಮಾರು 15 ರಿಂದ 20 ಜನರಿಗೆ ಮಾತ್ರ ಅನುಕೂಲವಾಗುವ ರೀತಿಯಲ್ಲಿ ನಡೆಯುತ್ತಿದೆ ಎಂದು ನಿವಾಸಿಗಳು ಆರೋಪಿಸಿದ್ದಾರೆ. ತಮ್ಮ ಸ್ವಂತ ವೆಚ್ಚದಲ್ಲಿ ಕಾಮಗಾರಿ ನಡೆಸುತ್ತಿರುವುದಾಗಿ ಹೇಳಲಾಗುತ್ತಿದ್ದು, ಇತರೆ ನಿವಾಸಿಗಳಿಗೆ ಸಂಪರ್ಕ ಕಲ್ಪಿಸುವ ಬಗ್ಗೆ ಯಾವುದೇ ಸ್ಪಷ್ಟತೆ ನೀಡಿಲ್ಲ ಎಂದು ಅವರು ದೂರಿದ್ದಾರೆ.

"ಗಾಳಿ, ನೀರು ಮತ್ತು ಬೆಳಕು ಮನುಷ್ಯನ ಮೂಲಭೂತ ಹಕ್ಕುಗಳಾಗಿವೆ. ಹಾಗಿದ್ದರೂ ನಮ್ಮಂತಹ ಅನೇಕ ಕುಟುಂಬಗಳಿಗೆ ನದಿ ನೀರಿನ ಸೌಲಭ್ಯದಿಂದ ವಂಚಿಸಲಾಗುತ್ತಿರುವುದಕ್ಕೆ ಕಾರಣವೇನು ಎಂಬುದನ್ನು ಅಧಿಕಾರಿಗಳು ಸ್ಪಷ್ಟಪಡಿಸಬೇಕು" ಎಂದು ಮನವಿಯಲ್ಲಿ ಪ್ರಶ್ನಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಪ್ರಸ್ತುತ ನಡೆಯುತ್ತಿರುವ ಪೈಪ್‌ಲೈನ್ ಕಾಮಗಾರಿಯನ್ನು ತಕ್ಷಣ ಸ್ಥಗಿತಗೊಳಿಸಿ, ಉಳ್ಳಿಡಗ್ಗಿ ಪ್ರದೇಶದಲ್ಲಿ ಮತ್ತೊಮ್ಮೆ ಸಮಗ್ರ ಸರ್ವೆ ನಡೆಸಿ ವಾರ್ಡ್ ನಂ. 02ರ ವ್ಯಾಪ್ತಿಯ ಎಲ್ಲಾ ಮನೆಗಳಿಗೆ ಸಮಾನವಾಗಿ ನದಿ ನೀರಿನ ಸಂಪರ್ಕ ಕಲ್ಪಿಸಬೇಕು ಎಂದು ನಿವಾಸಿಗಳು ಒತ್ತಾಯಿಸಿದ್ದಾರೆ.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸಲ್ಲಿಸಿದ ಮನವಿಗೆ ಬಿ. ಕಲಾವತಿ, ಪ್ರತಿನಾ ಕೆ., ಶಾರದಾ, ಸಂಗೀತಾ, ಪ್ರತಿಮಾ, ಅಶ್ವಿನಿ ದೇಸಾಯಿ, ರೇಣುಕಾ, ಸುನಿತಾ, ಮಂಗಳಗೌರಿ, ವಾಣಿ, ನೇತ್ರಾ, ನಿರ್ಮಲ ಸೇರಿದಂತೆ ಅನೇಕ ನಿವಾಸಿಗಳು ಸಹಿ ಹಾಕಿದ್ದಾರೆ.

# ವಸತಿ ನಿಲಯದ ವಿದ್ಯಾರ್ಥಿಗಳು ಅಸ್ವಸ್ಥ: ಮಾಜಿ ಸಚಿವ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ನಗರದಲ್ಲಿ ವಸತಿ ನಿಲಯಗಳ ನಿರ್ವಹಣಾ ವೈಫಲ್ಯ ಮತ್ತೊಮ್ಮೆ ಮುನ್ನೆಲೆಗೆ ಬಂದಿದೆ. ಡಾ. ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯದಲ್ಲಿ ವಿದ್ಯಾರ್ಥಿನಿಯರಿಗೆ ನೀಡಲಾದ ಕಳಪೆ ಮಟ್ಟದ ಮತ್ತು ಗಟ್ಟಿಯಾದ ಅನ್ನ ಹಾಗೂ ಚಪಾತಿಯನ್ನು ಸೇವಿಸಿ ಹಲವು ವಿದ್ಯಾರ್ಥಿನಿಯರು ತೀವ್ರ ಅಸ್ವಸ್ಥಗೊಂಡಿರುವ ಆಘಾತಕಾರಿ ಘಟನೆ ನಡೆದಿದೆ.

ಆಹಾರ ಸೇವಿಸಿದ ಕೆಲವೇ ಸಮಯದಲ್ಲಿ ವಿದ್ಯಾರ್ಥಿನಿಯರಿಗೆ ತೀವ್ರ ಹೊಟ್ಟೆನೋವು, ವಾಂತಿ, ಭೇದಿ ಹಾಗೂ ತಲೆತಿರುವು ಕಾಣಿಸಿಕೊಂಡಿದೆ. ತಕ್ಷಣವೇ ಎಚ್ಚೆತ್ತ ಸಿಬ್ಬಂದಿ ಅಸ್ವಸ್ಥ ವಿದ್ಯಾರ್ಥಿನಿಯರನ್ನು ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ಈ ಘಟನೆ ನಡೆಯುವುದಕ್ಕೂ ಮುನ್ನವೇ ಎಚ್ಚೆತ್ತಿದ್ದ ಸ್ಥಳೀಯ ಶಾಸಕರು, ಎಲ್ಲಾ ವಸತಿ ನಿಲಯಗಳ ಪ್ರಾಚಾರ್ಯರು ಹಾಗೂ



ವಾರ್ಡನ್‌ಗಳ ಸಭೆಯನ್ನು ಕರೆದಿದ್ದರು. ವಸತಿ ನಿಲಯಗಳಲ್ಲಿ ಕಡ್ಡಾಯವಾಗಿ ಸ್ವಚ್ಛತೆ ಕಾಪಾಡಬೇಕು ಮತ್ತು ವಿದ್ಯಾರ್ಥಿಗಳಿಗೆ ಗುಣಮಟ್ಟದ ಊಟ ಹಾಗೂ ಸೌಲಭ್ಯಗಳನ್ನು ಅಚ್ಚುಕಟ್ಟಾಗಿ ಒದಗಿಸಬೇಕು ಎಂದು ಖಡಕ್ ಎಚ್ಚರಿಕೆ ಹಾಗೂ ಕಟ್ಟುನಿಟ್ಟಿನ ಆದೇಶವನ್ನು ಹೊರಡಿಸಿದ್ದರು.ಆದರೆ, ಶಾಸಕರು ಸಭೆ ನಡೆಸಿ ಆದೇಶ ನೀಡಿ ಕೆಲವೇ ದಿನಗಳು ಕಳೆಯುವುದರೊಳಗೆ ಈ ಘಟನೆ ಮರುಕಳಿಸಿರುವುದು ಅಧಿಕಾರಿಗಳ ಬೇಜವಾಬ್ದಾರಿಗೆ ಹಿಡಿದ ಕೈಗನ್ನಡಿಯಾಗಿದೆ"ಶಾಸಕರ ಆದೇಶಕ್ಕೂ ಇಲ್ಲಿ ಬೆಲೆ ಇಲ್ಲವೇ?" ಎಂಬ ಪ್ರಶ್ನೆ ಈಗ ಸಾರ್ವಜನಿಕ ವಲಯದಲ್ಲಿ ಕೇಳಿ ಬಂತು.

**ಮಾಜಿ ಸಚಿವ ವೆಂಕಟರಾವ್ ನಾಡಗೌಡ ಭೇಟಿ**

ಮಕ್ಕಳ ಆರೋಗ್ಯ ಹದಗೆಟ್ಟು ಆಸ್ಪತ್ರೆ ಸೇರಿದ ವಿಷಯ ತಿಳಿದು, ಮಾಜಿ ಸಚಿವರಾದ ವೆಂಕಟರಾವ್ ನಾಡಗೌಡ ಅವರು ಆಸ್ಪತ್ರೆಗೆ ಭೇಟಿ ನೀಡಿ ಮಕ್ಕಳ ಆರೋಗ್ಯವನ್ನು ವಿಚಾರಿಸಿ, ಸೂಕ್ತ ಚಿಕಿತ್ಸೆ ನೀಡುವಂತೆ ವೈದ್ಯರಿಗೆ ಸೂಚನೆ ನೀಡಿದರು ಹಾಗೂ ಈ ಕುರಿತು ಅಧಿಕಾರಿಗಳಿಂದ ಮಾಹಿತಿ ಇಂತಹ ಘಟನೆಗಳು ಮರುಕಳಿಸದಂತೆ ಸೂಚನೆ ನೀಡಿದರು.

ಈ ವೇಳೆ ತಹಸಿಲ್ದಾರ್ ಅರುಣ್ ಕುಮಾರ ದೇಸಾಯಿ,ಪ್ರಭಾರಿ ತಾಲೂಕ ಅಧಿಕಾರಿ ನಟರಾಜ, ಜೆಡಿಎಸ್ ಪಕ್ಷದ ನಗರ ಘಟಕ ಅಧ್ಯಕ್ಷರಾದ ರವಿ ಪನ್ನೂರ್, ವೆಂಕಟೇಶ್ ನಂಜಲದಿನ್ನಿ , ಅಂಬರೀಶ್ ಮುಳ್ಳೂರ್, ಶಾಂತರೆಡ್ಡಿ ಕುನ್ನಟಗಿ ಕ್ಯಾಂಪ್, ವೆಂಕೋಬ ಬಾವಿಕಟ್ಟಿ, ಅಲ್ಲಮಪ್ರಭು ಪೂಜಾರ್, ರಾಮರೆಡ್ಡಿ ಪಗಡದಿನ್ನಿ, ರಾಮರಾವ್ ಗಾಂಧಿನಗರ, ಸೇರಿದಂತೆ ಇತರು ಉಪಸ್ಥಿತರಿದ್ದರು.

# ಆಸ್ಟ್ರೇಲಿಯಾ ಕಾನ್ಸುಲೇಟ್ ಜನರಲ್ ಕಚೇರಿ ಕಾರ್ಯಾರಂಭ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಆಸ್ಟ್ರೇಲಿಯಾದ ಸುಸಜ್ಜಿತ ಕಾನ್ಸುಲೇಟ್ ಜನರಲ್ ಕಚೇರಿ ಮತ್ತು ಆ ರಾಷ್ಟ್ರದ ಪ್ರತಿಷ್ಠಿತ ವಿಶ್ವವಿದ್ಯಾಲಯಗಳಲ್ಲಿ ಒಂದಾಗಿರುವ ನ್ಯೂಸೌತ್ ವೇಲ್ಸ್ ವಿಶ್ವವಿದ್ಯಾಲಯದ ಬೆಂಗಳೂರು ಕ್ಯಾಂಪಸ್ ಎರಡಕ್ಕೂ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಶುಕ್ರವಾರ ಇಲ್ಲಿ ಚಾಲನೆ ನೀಡಿದರು.

ವಿಶ್ವವಿದ್ಯಾಲಯ ಕ್ಯಾಂಪಸ್ ಉದ್ಘಾಟನೆ ನಂತರ ಮಾತನಾಡಿದ ಅವರು, 'ನ್ಯೂಸೌತ್ ವೇಲ್ಸ್ ವಿಶ್ವವಿದ್ಯಾಲಯವು ಜಗತ್ತಿನಲ್ಲಿ ಅಗ್ರಸ್ಥಾನದಲ್ಲಿರುವ 20 ವಿಶ್ವವಿದ್ಯಾಲಯಗಳಲ್ಲಿ ಒಂದಾಗಿದ್ದು, ಆಸ್ಟ್ರೇಲಿಯಾದ ಅಗ್ರ ವಿ.ವಿ. ಆಗಿದೆ. ಇದರ ಬೆಂಗಳೂರು ಕ್ಯಾಂಪಸ್ ಹೆಬ್ಬಾಳದ ಸಮೀಪದಲ್ಲಿರುವ ಮಾನ್ಯತಾ ಟೆಕ್ ಪಾರ್ಕಿನಲ್ಲಿ ಇರಲಿದೆ. ರಾಜ್ಯದ ಯುವಜನರು ಮನೆಯ ಹತ್ತಿರದಲ್ಲೇ ಜಾಗತಿಕ ಗುಣಮಟ್ಟದ ಶಿಕ್ಷಣ ಪಡೆಯಲು ಈ ಕ್ಯಾಂಪಸ್ ಇನ್ನುಮುಂದೆ ಲಭ್ಯವಾಗಲಿದೆ. ಇದು ರಾಜ್ಯದಲ್ಲಿ ಕ್ಯಾಂಪಸ್ ತೆರೆಯುತ್ತಿರುವ 6ನೇ ವಿದೇಶಿ ವಿ.ವಿ. ಆಗಿದೆ' ಎಂದಿದ್ದಾರೆ.

ನ್ಯೂಸೌತ್ ವೇಲ್ಸ್ ವಿ.ವಿ.ಯು ಆಸ್ಟ್ರೇಲಿಯಾದಲ್ಲಿ ತಾನು ಅನುಸರಿಸುವ ಪಠ್ಯಕ್ರಮ ಮತ್ತು ಬೋಧನಾ ವಿಧಾನವನ್ನೇ ಇಲ್ಲೂ ಅಳವಡಿಸಿಕೊಳ್ಳಲಿದೆ. ಸದ್ಯಕ್ಕೆ ಬಿಝಿನೆಸ್, ಕಂಪ್ಯೂಟರ್ ಸೈನ್ಸ್, ಡೇಟಾ ಸೈನ್ಸ್ ಮತ್ತು ಡಿಸಿಷನ್ಸ್ ವಿಷಯಗಳಲ್ಲಿ ಪದವಿ ಹಾಗೂ ಒಂದು ವರ್ಷ ಅವಧಿಯ ಸೈಬರ್ ಸೆಕ್ಯುರಿಟಿ ವಿಷಯದಲ್ಲಿ ಸ್ನಾತಕೋತ್ತರ ಪದವಿ ಕೋರ್ಸುಗಳನ್ನು




ಆರಂಭಿಸುತ್ತಿದೆ. ಪ್ರತಿಯೊಂದು ಕೋರ್ಸಿನಲ್ಲೂ ತಲಾ 30 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಇರಲಿದೆ ಎಂದು ಅವರು ಹೇಳಿದ್ದಾರೆ.

ರಾಜ್ಯದಲ್ಲಿ ಈಗಾಗಲೇ ಲಿವರ್ಪೂಲ್, ಲ್ಯಾಂಕಾಸ್ಟರ್, ಲಾ ಟ್ರೋಬ್, ಫ್ಲಿಂಡರ್ಸ್ ಮತ್ತು ಲಂಡನ್ನಿನ ಇಂಪೀರಿಯಲ್ ಕಾಲೇಜ್ ವಿ.ವಿ.ಗಳು ತಮ್ಮ ಕ್ಯಾಂಪಸ್ ತೆರೆದಿವೆ. ಮುಂದಿನ ದಿನಗಳಲ್ಲಿ ಮತ್ತೊಂದಿಷ್ಟು ಜಾಗತಿಕ ಮಟ್ಟದ ವಿ.ವಿ.ಗಳು ನಮ್ಮಲ್ಲಿ ತಮ್ಮ ಕ್ಯಾಂಪಸ್ ತೆಗೆಯಲಿವೆ. ನಮ್ಮಲ್ಲಿರುವ ವಿಶ್ವದರ್ಜೆಯ ಸಂಶೋಧನಾ ಸಂಸ್ಥೆಗಳು, ಕೈಗಾರಿಕೋದ್ಯಮಗಳು ಮತ್ತು ನವೋದ್ಯಮ ಕಾರ್ಯಪರಿಸರಗಳು ಇದಕ್ಕೆ ಹೇಳಿ ಮಾಡಿಸಿದಂತಿವೆ ಎಂದು ಅವರು ವಿವರಿಸಿದ್ದಾರೆ.

**ಕಾನ್ಸುಲೇಟ್ ಜನರಲ್ ಕಚೇರಿ:** ಇದಕ್ಕೂ ಮೊದಲು ಸಚಿವ ಪಾಟೀಲರು, ಕನ್ನಿಂಗ್ಹಾಮ್ ರಸ್ತೆಯಲ್ಲಿ ನೂತನವಾಗಿ ನಿರ್ಮಿಸಿರುವ ಆಸ್ಟ್ರೇಲಿಯಾದ ಕಾನ್ಸುಲೇಟ್ ಜನರಲ್ ಕಚೇರಿಯನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಆಸ್ಟ್ರೇಲಿಯಾವು ತನ್ನ ಕಾನ್ಸುಲೇಟ್ ಜನರಲ್ ಕಚೇರಿಗೆ ಬೆಂಗಳೂರನ್ನು ಆಯ್ಕೆ ಮಾಡಿಕೊಂಡಿದ್ದು ಶ್ಲಾಘನೀಯವಾಗಿದೆ. ಈಗಾಗಲೇ ನಮ್ಮ ರಾಜಧಾನಿಯಲ್ಲಿ ಆಸ್ಟ್ರೇಲಿಯಾದ 40ಕ್ಕೂ ಹೆಚ್ಚು ಕಂಪನಿಗಳು ನೆಲೆಯೂರಿವೆ. ಆ ದೇಶವು ಕೂಡ ನಮ್ಮಲ್ಲಿ ನಡೆದುಕೊಂಡು ಬರುತ್ತಿರುವ ಜಾಗತಿಕ ಹೂಡಿಕೆದಾರರ ಸಮಾವೇಶ, ಬೆಂಗಳೂರು ತಂತ್ರಜ್ಞಾನ ಶೃಂಗಸಭೆ, ಸ್ಪೇಸ್–ಎಕ್ಸ್ಪೋ ಮುಂತಾದವುಗಳಲ್ಲಿ ಪಾಲ್ಗೊಳ್ಳುತ್ತ ಬರುತ್ತಿದೆ. ಅಲ್ಲಿನ ಕ್ವೀನ್ಸ್ ಲ್ಯಾಂಡ್ ಮತ್ತು ವಿಕ್ಟೋರಿಯಾ ಪ್ರಾಂತ್ಯಗಳು ಬೆಂಗಳೂರಿನಲ್ಲೇ ತಮ್ಮ ವಾಣಿಜ್ಯ ವಹಿವಾಟು ಕಚೇರಿಗಳನ್ನು ಹೊಂದಿವೆ ಎಂದಿದ್ದಾರೆ. ಕಾನ್ಸುಲೇಟ್ ಜನರಲ್ ಕಚೇರಿ ಆರಂಭದಿಂದ ನಮ್ಮ ದ್ವಿಪಕ್ಷೀಯ ಬಾಂಧವ್ಯವು ದೀರ್ಘಕಾಲೀನ ದೃಷ್ಟಿಕೋನದೊಂದಿಗೆ ಮುಂದುವರಿಯಲಿದೆ. ನಾವು ಅತ್ತ ಕಡೆಯಿಂದ ಹೂಡಿಕೆ, ಸಂಸ್ಥೆಗಳು ಮತ್ತು ನಾವೀನ್ಯತೆಯನ್ನು ನಮ್ಮಲ್ಲಿಗೆ ಬರುವುದನ್ನು ಎದುರು ನೋಡುತ್ತಿದ್ದೇವೆ ಎಂದು ಅವರು ಭರವಸೆ ವ್ಯಕ್ತಪಡಿಸಿದ್ದಾರೆ.

ಎರಡೂ ಕಾರ್ಯಕ್ರಮಗಳಲ್ಲಿ ಆಸ್ಟ್ರೇಲಿಯಾದ ಅಂತಾರಾಷ್ಟ್ರೀಯ ಶಿಕ್ಷಣ ಸಚಿವರಾದ ಜೂಲಿಯನ್ ಹಿಲ್, ಭಾರತದಲ್ಲಿರುವ ಆಸ್ಟ್ರೇಲಿಯನ್ ಹೈಕಮಿಷನರ್ ಫಿಲಿಫ್ ಗ್ರೀನ್, ಕೈಗಾರಿಕಾ ಇಲಾಖೆ ಆಯುಕ್ತರಾದ ಖುಷ್ಬು ಗೋಯಲ್, ಬೆಂಗಳೂರಿನಲ್ಲಿರುವ ಕಾನ್ಸುಲ್ ಜನರಲ್ ಹಿಲರಿ ಮೆಗಿಚಿ, ನ್ಯೂಸೌತ್ ವೇಲ್ಸ್ ವಿವಿ ಕುಲಪತಿ ಪ್ರೊ.ಆ್ಯಟಿಲಾ ಬ್ರಂಗ್ಸ್ ಭಾಗವಹಿಸಿದ್ದರು.

## ಬರಗಾಲ ಜಿಲ್ಲೆಯಾಗಿ ಘೋಷಿಸಿ..!



**ವಿಜಯಪುರ:** ಜಿಲ್ಲೆಯನ್ನು ತಕ್ಷಣವೇ ಬರಗಾಲ ಪೀಡಿತ ಜಿಲ್ಲೆಯಾಗಿ ಘೋಷಿಸಿ ಸಂಕಷ್ಟದಲ್ಲಿರುವ ರೈತರಿಗೆ ಸೂಕ್ತ ಪರಿಹಾರ ನೀಡಬೇಕು ಹಾಗೂ ರೈತರ ಸಾಲವನ್ನು ಮನ್ನಾ ಮಾಡಬೇಕು ಎಂದು ಒತ್ತಾಯಿಸಿ ಅಖಂಡ ಕರ್ನಾಟಕ ರೈತ ಸಂಘದ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಅವರು, ವಿಜಯಪುರ ಜಿಲ್ಲೆಯಲ್ಲಿ ಸಮರ್ಪಕ ಮಳೆಯಾಗದ ಕಾರಣ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಬೆಳೆಗಳು ಒಣಗಿ ಅಪಾರ ನಷ್ಟ ಉಂಟಾಗಿದೆ. ಆದ್ದರಿಂದ ರಾಜ್ಯ ಸರ್ಕಾರ ತಕ್ಷಣವೇ ವಿಜಯಪುರ ಜಿಲ್ಲೆಯನ್ನು ಬರಗಾಲ ಪೀಡಿತ ಜಿಲ್ಲೆಯಾಗಿ ಘೋಷಿಸಿ, ರೈತರಿಗೆ ಸೂಕ್ತ ಪರಿಹಾರ ಬಿಡುಗಡೆ ಮಾಡಬೇಕು. ಜೊತೆಗೆ ರೈತರ ಕೃಷಿ ಸಾಲವನ್ನು ಸಂಪೂರ್ಣ ಮನ್ನಾ ಮಾಡಿ, ರೈತರ ಬದುಕನ್ನು ಉಳಿಸುವ ನಿಟ್ಟಿನಲ್ಲಿ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

## ಸರ್ಕಾರಿ ರಸ್ತೆ ಒತ್ತುವರಿ ತೆರವುಗೊಳಿಸಲು ಆಗ್ರಹಿಸಿ ಮನವಿ



**ಕೆಂಭಾವಿ:** ಸಮೀಪದ ನಗನೂರು ಗ್ರಾಮದ ಬಸವೇಶ್ವರ ವೃತ್ತದಿಂದ ಶರಣಬಸವೇಶ್ವರ ಮಠದ ಕಡೆಗೆ ಹೋಗುವ ಸರ್ಕಾರಿ ರಸ್ತೆಯಲ್ಲಿ ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿರುವ ಜಾಗವನ್ನು ತೆರವುಗೊಳಿಸಬೇಕೆಂದು ಆಗ್ರಹಿಸಿ ಸ್ಥಳೀಯ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಗ್ರಾಮಸ್ಥರು ಮನವಿ ಸಲ್ಲಿಸಿದ್ದಾರೆ.

ಗ್ರಾಮದ ನಿವಾಸಿಗಳಾದ ಶರಣಪ್ಪ ಶಿವಪುತ್ರಪ್ಪ ಜಕರೆಡ್ಡಿ ಹಾಗೂ ನಾಯಕಪ್ಪಗೌಡ ಎಸ್. ಪೊಲೀಸ್ ಪಾಟೀಲ್ ಸೇರಿದಂತೆ ಹಲವರು ಈ ಸಂಬಂಧ ಪಂಚಾಯತ್ ಆಡಳಿತಕ್ಕೆ ಮನವಿ ಪತ್ರ ನೀಡಿ ಅಕ್ರಮ ಒತ್ತುವರಿ ಜಾಗದ ತೆರವಿಗೆ ಒತ್ತಾಯಿಸಿದ್ದಾರೆ.

ಸರ್ಕಾರಿ ರಸ್ತೆಯ ಜಾಗದಲ್ಲಿ ಅಕ್ರಮವಾಗಿ ಮನೆ ಹಾಗೂ ಶೆಡ್‌ಗಳನ್ನು ನಿರ್ಮಿಸಿಕೊಂಡಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಇದರಿಂದಾಗಿ ಸಾರ್ವಜನಿಕ ಸಂಚಾರಕ್ಕೆ ಹಾಗೂ ವಾಹನಗಳ ಸಂಚಾರ ತೀವ್ರ ಅಡಚಣೆ ಉಂಟಾಗುತ್ತಿದ್ದು, ಕೂಡಲೇ ಸ್ಥಳ ಪರಿಶೀಲನೆ ನಡೆಸಿ, ಸರ್ಕಾರಿ ರಸ್ತೆಯಲ್ಲಿರುವ ಅಕ್ರಮ ನಿರ್ಮಾಣಗಳನ್ನು ತೆರವುಗೊಳಿಸಿ ಸಾರ್ವಜನಿಕರಿಗೆ ಸುಗಮ ರಸ್ತೆ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ವಿನಂತಿಸಿದ್ದಾರೆ. ಈ ಸಂದರ್ಭದಲ್ಲಿ ಗ್ರಮದ ಇತರರು ಇದ್ದರು.



**ಸಚಿವ ಜಮೀರ್ ಅಹಮದ್ ಖಾನ್ ಅವರು ಬೆಂಗಳೂರಿನ ಜಾಮಿಯಾ ಮಸೀದಿಗೆ ಭೇಟಿ ನೀಡಿದರು. ಮೌಲಾನಾ ಮಕ್ಸುದ್ ಇಮ್ರಾನ್ ಅವರು ಸಚಿವರನ್ನು ಅಭಿನಂದಿಸಿದರು. ಮೌಲಾನಾ ತನ್ವಿರ್ ಹಾಶ್ಮಿ, ವಖ್ಫ್ ಬೋರ್ಡ್ ಮಾಜಿ ಅಧ್ಯಕ್ಷ ಅನ್ವರ್ ಬಾಷಾ, ಧಾರವಾಡ ಅಂಜುಮನ್ ಅಧ್ಯಕ್ಷ ಇಸ್ಮಾಯಿಲ್ ತಮಟ್ ಗಾರ್, ಕೊಪ್ಪಳ ನಗರಸಭೆ ಮಾಜಿ ಅಧ್ಯಕ್ಷ ಅಮ್ಜದ್ ಪಟೇಲ್ ಉಪಸ್ಥಿತರಿದ್ದರು.**

## ಪೊಲೀಸರಿಂದ ಕಾರ್ಯಾಚರಣೆ: ಅಕ್ರಮ ಮದ್ಯ ಮಾರಾಟ ಮೇಲೆ ದಾಳಿ



**ಕಮಲನಗರ:** ಅಕ್ರಮವಾಗಿ ಮದ್ಯ ಮಾರಾಟ, ಸಾಗಾಟ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಮದ್ಯಪಾನ ಮಾಡಲು ಅನುವು ಮಾಡಿಕೊಡುತ್ತಿದ್ದ ಅಡಗಳ ಮೇಲೆ ಕಮಲನಗರ ಠಾಣೆಯ ಪೊಲೀಸರು ದಿಢೀರ್ ದಾಳಿ ನಡೆಸಿ, ಅಕ್ರಮ ಮದ್ಯ ವಶಪಡಿಸಿಕೊಂಡಿದ್ದಾರೆ.

ಕಮಲನಗರ ಪೊಲೀಸ್ ಠಾಣಾ ವ್ಯಾಪ್ತಿಯ ಹೊಳಸಮುದ್ರ ಗ್ರಾಮದ ಸಾರ್ವಜನಿಕ ಸ್ಥಳಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮತ್ತು ಕುಡಿಯಲು ಅನುವು ಮಾಡಿಕೊಡಲಾಗುತ್ತಿದೆ ಎಂಬ ಖಚಿತ ಮಾಹಿತಿ ಮೇರೆಗೆ ಕಮಲನಗರ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (ಪಿ.ಎಸ್.ಐ) ಆಶಾ ರಾಠೋಡ್ ಹಾಗೂ ಅವರ ಸಿಬ್ಬಂದಿ ವರ್ಗದವರು ಸ್ಥಳದ ಮೇಲೆ ಯಶಸ್ವಿ ದಾಳಿ ನಡೆಸಿದ್ದಾರೆ.

ದಾಳಿಯ ವೇಳೆ ಅಕ್ರಮವಾಗಿ ಸಂಗ್ರಹಿಸಿಡಲಾಗಿದ್ದ ಮದ್ಯದ ಪಾಕೆಟ್‌ಗಳು ಮತ್ತು ಬಾಟಲಿಗಳನ್ನು ಪೊಲೀಸರು ಜಪ್ತಿ ಮಾಡಿಕೊಂಡಿದ್ದು, ಆರೋಪಿಗಳ ವಿರುದ್ಧ ಕಾನೂನು ರೀತಿಯ ಸೂಕ್ತ ಕ್ರಮ ಕೈಗೊಂಡಿರುವುದಾಗಿ ಪೊಲೀಸ ಮೂಲಗಳಿಂದ ತಿಳಿದು ಬಂದಿದೆ.

# ಡೀಪ್–ಟೆಕ್ ರಾಜಧಾನಿಗೆ ಗುರಿ: ಸಿಎಂ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ನ್ಯಾನೋ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ (ಎಐ), ಸೆಮಿಕಂಡಕ್ಟರ್‌ಗಳು, ಜೈವಿಕ ತಂತ್ರಜ್ಞಾನ ಮತ್ತು ಕ್ವಾಂಟಮ್ ತಂತ್ರಜ್ಞಾನ ಸೇರಿದಂತೆ 'ಡೀಪ್ ಟೆಕ್'ಗಳ ಜಾಗತಿಕ ಕೇಂದ್ರವಾಗಿ ಬೆಂಗಳೂರನ್ನು ರೂಪಿಸುವ ಮೂಲಕ ಕರ್ನಾಟಕವು ಮುಂದಿನ ತಾಂತ್ರಿಕ ಕ್ರಾಂತಿಯ ನೇತೃತ್ವ ವಹಿಸುವಂತೆ ಮಾಡಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ತಿಳಿಸಿದರು.

ಇಂದು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ನ್ಯಾನೋ ತಂತ್ರಜ್ಞಾನ ವಿಷನ್ ಗ್ರೂಪ್ ವತಿಯಿಂದ ಬೆಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ಆಯೋಜಿಸಿರುವ 14ನೇ ಬೆಂಗಳೂರು ಇಂಡಿಯಾ ನ್ಯಾನೋ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಬೆಂಗಳೂರು ಭಾರತವನ್ನು ಜಾಗತಿಕ ಐಟಿ ಭೂಪಟದಲ್ಲಿ ನಿಲ್ಲಿಸಿದೆ. ಈಗ ಭಾರತವನ್ನು ಜಾಗತಿಕ 'ಡೀಪ್–ಟೆಕ್' ಭೂಪಟದಲ್ಲಿ ನಿಲ್ಲಿಸುವ ಸಮಯ ಬಂದಿದೆ. ಸರ್ಕಾರ, ಶೈಕ್ಷಣಿಕ ಕ್ಷೇತ್ರ, ಉದ್ಯಮ ಮತ್ತು ಉದ್ಯಮಿಗಳ ನಡುವಿನ ಸಹಯೋಗದಿಂದ ಮಾತ್ರ ನಾವೀನ್ಯತೆ ಬೆಳೆಯಲು ಸಾಧ್ಯ. ಈ ಪಾಲುದಾರಿಕೆಯೇ ಕರ್ನಾಟಕದ ಬಹುದೊಡ್ಡ ಶಕ್ತಿ. ಭಾರತ ರತ್ನ ಪ್ರೊ. ಸಿ. ಎನ್. ಆರ್. ರಾವ್ ಅವರ ದೂರದೃಷ್ಟಿಯು ಸಂಶೋಧಕರ ಪೀಳಿಗೆಗೆ ಸ್ಫೂರ್ತಿ ನೀಡುತ್ತಲೇ ಇದೆ ಎಂದು ಹೇಳಿದರು.

ಕರ್ನಾಟಕದಲ್ಲಿರುವ ಪ್ರಮುಖ ಸಂಶೋಧನಾ ಸಂಸ್ಥೆಗಳು, ನವೋದ್ಯಮಗಳು (ಸ್ಟಾರ್ಟ್‌ಅಪ್‌ಗಳು), ಬಹುರಾಷ್ಟ್ರೀಯ ಸಂಶೋಧನೆ ಹಾಗೂ ಅಭಿವೃದ್ಧಿ ಕೇಂದ್ರಗಳು ಮತ್ತು ವಿಶ್ವವಿದ್ಯಾಲಯಗಳ ಬಲವಾದ ಪರಿಸರ ವ್ಯವಸ್ಥೆಯು ಡೀಪ್–ಟೆಕ್ ನಾವೀನ್ಯತೆಯಲ್ಲಿ ಜಾಗತಿಕವಾಗಿ ಮುಂಚೂಣಿಗೆ ಬರಲು ರಾಜ್ಯಕ್ಕೆ ಅನನ್ಯ ಅನುಕೂಲವನ್ನು ನೀಡಿದೆ ಎಂದರು.

ನ್ಯಾನೋ ತಂತ್ರಜ್ಞಾನವು ಇನ್ನು ಮುಂದೆ ಕೇವಲ ಸಂಶೋಧನಾ ಪ್ರಯೋಗಾಲಯಗಳಿಗೆ ಮಾತ್ರ ಸೀಮಿತವಾಗಿಲ್ಲ. ಇದು ಆರೋಗ್ಯ ರಕ್ಷಣೆ, ಎಲೆಕ್ಟ್ರಾನಿಕ್ಸ್, ಇಂಧನ, ಕೃಷಿ, ಸಾರಿಗೆ, ಬಾಹ್ಯಾಕಾಶ, ರಕ್ಷಣೆ ಮತ್ತು ಸುಧಾರಿತ ಉತ್ಪಾದನಾ ಕ್ಷೇತ್ರಗಳನ್ನು ಪರಿವರ್ತಿಸುವ ಮೂಲಭೂತ ತಂತ್ರಜ್ಞಾನವಾಗಿದೆ ಎಂದು ಹೇಳಿದರು. ಕೃತಕ ಬುದ್ಧಿಮತ್ತೆ, ನ್ಯಾನೋ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಕ್ವಾಂಟಮ್ ತಂತ್ರಜ್ಞಾನ, ಸೆಮಿಕಂಡಕ್ಟರ್‌ಗಳು ಮತ್ತು ಸುಧಾರಿತ ಸಾಮಗ್ರಿಗಳ ಸಮ್ಮಿಲನದಿಂದ ಭವಿಷ್ಯವು ರೂಪುಗೊಳ್ಳಲಿದೆ. ಈ ತಾಂತ್ರಿಕ ಕ್ರಾಂತಿಯಲ್ಲಿ ಕರ್ನಾಟಕವು ಮುಂಚೂಣಿಯಲ್ಲಿರಲು ಬಯಸುತ್ತದೆ ಎಂದು ಹೇಳಿದರು.

1893ರಲ್ಲಿ ಜಪಾನ್‌ನಿಂದ ಅಮೆರಿಕಕ್ಕೆ ಪ್ರಯಾಣಿಸುತ್ತಿದ್ದ ಹಡಗಿನಲ್ಲಿ ಉದ್ಯಮಿ ಜಮ್‌ಶೆಟ್‌ಜಿ ಟಾಟಾ ಮತ್ತು ಸ್ವಾಮಿ ವಿವೇಕಾನಂದರ ನಡುವೆ ನಡೆದ ಐತಿಹಾಸಿಕ ಭೇಟಿಯನ್ನು ಸ್ಮರಿಸಿಕೊಂಡರು. ವೈಜ್ಞಾನಿಕ ಸಂಶೋಧನೆ ಮತ್ತು ರಾಷ್ಟ್ರನಿರ್ಮಾಣದ ಕುರಿತು ಅವರಿಬ್ಬರ ನಡುವೆ ನಡೆದ ಚರ್ಚೆಗಳು ಅಂತಿಮವಾಗಿ ಭಾರತೀಯ ವಿಜ್ಞಾನ ಸಂಸ್ಥೆ ಸ್ಥಾಪನೆಗೆ ಕಾರಣವಾದವು ಎಂದರು.

ಮೈಸೂರು ಸಂಸ್ಥಾನದ ಅಂದಿನ ಮಹಾರಾಜ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಬೆಂಗಳೂರಿನಲ್ಲಿ ಸುಮಾರು 370 ಎಕರೆ ಜಮೀನನ್ನು ದಾನವಾಗಿ ನೀಡಿ, ಸಂಸ್ಥೆಗೆ ಆರ್ಥಿಕ ಹಾಗೂ ಮೂಲಸೌಕರ್ಯ ನೆರವು ನೀಡಿದ್ದರಿಂದ ಈ ಕನಸು ನನಸಾಯಿತು ಎಂದು ಸ್ಮರಿಸಿದರು.

**ವೈಜ್ಞಾನಿಕ ನಾಯಕತ್ವಕ್ಕಾಗಿ ರಾಷ್ಟ್ರಗಳ ನಡುವೆ ಸ್ಪರ್ಧೆ**

ಇಂದು ರಾಷ್ಟ್ರಗಳು ಕೇವಲ ಹೂಡಿಕೆಗಳಿಗಾಗಿ ಸ್ಪರ್ಧಿಸುತ್ತಿಲ್ಲ, ಬದಲಿಗೆ ವೈಜ್ಞಾನಿಕ ನಾಯಕತ್ವಕ್ಕಾಗಿ ಸ್ಪರ್ಧಿಸುತ್ತಿವೆ. ಸುಧಾರಿತ ಸಾಮಗ್ರಿಗಳು, ನ್ಯಾನೋ ಎಲೆಕ್ಟ್ರಾನಿಕ್ಸ್, ಸೆಮಿಕಂಡಕ್ಟರ್ ತಂತ್ರಜ್ಞಾನಗಳು ಮತ್ತು ಎಐ ಆಧಾರಿತ ಉತ್ಪಾದನೆಯಲ್ಲಿ ಯಾರು ಮುಂಚೂಣಿಯಲ್ಲಿರುತ್ತಾರೋ ಅವರು ಮುಂಬರುವ ದಶಕಗಳ ಜಾಗತಿಕ ಅರ್ಥವ್ಯವಸ್ಥೆಯನ್ನು ರೂಪಿಸಲಿದ್ದಾರೆ. ಆ ನಾಯಕರ ಸಾಲಿನಲ್ಲಿ ಕರ್ನಾಟಕವೂ ಇರಲಿದೆ ಎಂದರು.

ಶೈಕ್ಷಣಿಕ ಕ್ಷೇತ್ರ, ಉದ್ಯಮ ಮತ್ತು ಸ್ಟಾರ್ಟ್‌ಅಪ್‌ಗಳ ನಡುವಿನ ಹೆಚ್ಚಿನ ಸಹಯೋಗದ ಮೂಲಕ ವೈಜ್ಞಾನಿಕ ಕಲ್ಪನೆಗಳು ಪ್ರಯೋಗಾಲಯಗಳಿಂದ ಉದ್ಯಮಗಳಿಗೆ ಮತ್ತು ಸಂಶೋಧನಾ ಪ್ರಬಂಧಗಳಿಂದ ವಾಣಿಜ್ಯ ಉತ್ಪನ್ನಗಳಾಗಿ ವೇಗವಾಗಿ ತಲುಪುವ ವಾತಾವರಣವನ್ನು ನಿರ್ಮಿಸಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು.

# ಸ್ತನ್ಯಪಾನ ಜಾಗೃತಿ ಕಾರ್ಯಕ್ರಮ:ತಾಯಿಯ ಎದೆ ಹಾಲು ಅಮೃತಕ್ಕೆ ಸಮಾನ: ಗೀತಾ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕು ಆರೋಗ್ಯ ಅಧಿಕಾರಿಯವರ ಕಾರ್ಯಾಲಯ (ಸಿಂಧನೂರು), ಮಕ್ಕಳ ಮತ್ತು ಶಿಶು ಅಭಿವೃದ್ಧಿ ಇಲಾಖೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ, ಬಾದರ್ಲಿ ಇವರ ಸಂಯುಕ್ತಾಶ್ರಯದಲ್ಲಿ ಬಾದರ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಬೆಳಗುರ್ಕಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ 'ಸ್ತನ್ಯಪಾನ ಸಪ್ತಾಹ' ಹಾಗೂ ಜಾಗೃತಿ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಲಾಯಿತು.

ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಗೀತಾ ಹಿರೇಮಠ್ ಮಾತನಾಡಿ, ಸ್ತನ್ಯಪಾನವು ತಾಯಿ ಮತ್ತು ಮಗುವಿನ ನಡುವಿನ ಬಾಂಧವ್ಯವನ್ನು ಗಟ್ಟಿಗೊಳಿಸುವ ಮಮತೆಯ ಪ್ರತೀಕ ಎಂದರು.

ಮಗು ಜನಿಸಿದ ಅರ್ಧ ಗಂಟೆಯೊಳಗೆ ತಾಯಿ ಹಾಲುಣಿಸಬೇಕು. ಮೊದಲ ಹಾಲಾದ 'ಗಿಣ್ಣುಹಾಲು' ಮಗುವಿಗೆ ಅತ್ಯಾವಶ್ಯಕವಾಗಿದ್ದು, ಇದು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ ಮತ್ತು ಮಗುವಿಗೆ ಇದು ಮೊದಲ ಲಸಿಕೆಯಿದ್ದಂತೆ.

ಮಗು ಎದೆ ಚೀಪಿದಾಗ ಬಿಡುಗಡೆಯಾಗುವ 'ಆಕ್ಸಿಟೋಸಿನ್' ಹಾರ್ಮೋನ್‌ನಿಂದ ಗರ್ಭಕೋಶವು ತಾನಾಗಿಯೇ ಕುಗ್ಗಿ, ಬಾಣಂತಿಯರಲ್ಲಿ ರಕ್ತಸ್ರಾವ ಕಡಿಮೆಯಾಗುತ್ತದೆ. ಇದರಿಂದ ಬಾಣಂತಿ ಮರಣ ಪ್ರಮಾಣವನ್ನು ತಡೆಯಬಹುದು.

ತಾಯಿಯ ಎದೆ ಹಾಲು ಅಮೃತಕ್ಕೆ ಸಮಾನ. ಇದು ಸುಲಭವಾಗಿ ಜೀರ್ಣವಾಗುವ, ಸ್ವಚ್ಛ ಹಾಗೂ ಸುರಕ್ಷಿತವಾದ ಸಂಪೂರ್ಣ ಆಹಾರವಾಗಿದೆ. ಹಾಗೂ ಮಗುವನ್ನು ತಾಯಿಯ ಅತಿ ಸಮೀಪದಲ್ಲಿ ಮಲಗಿಸುವುದರಿಂದ ಮಗುವಿನಲ್ಲಿ ಸುರಕ್ಷಾ ಭಾವ ಮೂಡುತ್ತದೆ. ಮಗುವಿನ ಸ್ಪರ್ಶದಿಂದ ಸ್ತನಗಳಲ್ಲಿ ಹಾಲಿನ ಉತ್ಪಾದನೆ ಹೆಚ್ಚುತ್ತದೆ ಹಾಗೂ ಮಗುವಿನ ಹೃದಯ ಬಡಿತ ಮತ್ತು ಉಸಿರಾಟ ಸಹಜ ಸ್ಥಿತಿಗೆ ಬರುತ್ತದೆ. 0 ರಿಂದ 6 ತಿಂಗಳು ವರೆಗೆ ಕೇವಲ ತಾಯಿಯ ಎದೆಹಾಲು ಮಾತ್ರ ನೀಡಬೇಕು. 6 ರಿಂದ 9 ತಿಂಗಳು ವರೆಗೆ ಎದೆಹಾಲಿನೊಂದಿಗೆ ಬೇಳೆ ಕಾಳುಗಳಿಂದ ತಯಾರಿಸಿದ ಪೂರಕ ಆಹಾರ, ತರಕಾರಿ, ಹಣ್ಣುಗಳು ಹಾಗೂ ಸ್ಥಳೀಯವಾಗಿ ದೊರೆಯುವ ಸೊಪ್ಪುಗಳನ್ನು ಬಳಸುವುದು. 9 ರಿಂದ 12 ತಿಂಗಳು ವರೆಗೆ ದಿನಕ್ಕೆ ನಾಲ್ಕು ಬಾರಿ ಅರ್ಧ ಬಟ್ಟಲು ಆಹಾರ ನೀಡುವುದು. ಬೆಳವಣಿಗೆಗೆ ಅನುಕೂಲವಾಗಲು ಆಹಾರದಲ್ಲಿ ಒಂದು ಚಮಚ ಎಣ್ಣೆ ಅಥವಾ ತುಪ್ಪವನ್ನು ಸೇರಿಸುವುದು ಉತ್ತಮವಾಗಿದೆ. 1 ರಿಂದ 2 ವರ್ಷ ವರೆಗೆ ಎದೆಹಾಲು ನೀಡುವುದನ್ನು ಮುಂದುವರಿಸುತ್ತಾ, ಕುಟುಂಬದ ಇತರ ಸದಸ್ಯರು ಸೇವಿಸುವ ಸಾಮಾನ್ಯ ಆಹಾರವನ್ನೇ ಮಗುವಿಗೂ ಅಭ್ಯಾಸ ಮಾಡಿಸಬೇಕು ಎಂದು ಜಾಗೃತಿ ಮೂಡಿಸಿದರು. ಈ ಕಾರ್ಯಕ್ರಮದಲ್ಲಿ ಎಚ್.ಸಿ.ಒ. ಅನ್ನಪೂರ್ಣ, ಗಂಗಮ್ಮ, ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಗರ್ಭಿಣಿಯರು, ಬಾಣಂತಿಯರು ಹಾಗೂ ಗ್ರಾಮದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಗೃಹ ಸಚಿವ ಪ್ರಿಯಾಂಕ್ ಖರ್ಗೆ ರಾಜಿನಾಮೆಗೆ ಆಗ್ರಹಿಸಿ ಪ್ರತಿಭಟನೆ..!

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ



ತಿಕೋಟಾ ಪಟ್ಟಣದಲ್ಲಿ ಪೊಲೀಸ್ ನೇಮಕಾತಿ ಪರೀಕ್ಷೆಯಲ್ಲಿ ದೊಡ್ಡ ಮಟ್ಟದ ಅಕ್ರಮ ನಡೆದಿದ್ದು, ಕೂಡಲೇ ಈ ವಿಷಯವಾಗಿ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಕ್ಷೇತ್ರದ ಶಾಸಕರೂ ಆಗಿರುವ ಸಚಿವ ಡಾ.ಎಂ.ಬಿ. ಪಾಟೀಲರು ನೈತಿಕ ಹೊಣೆ ಹೊತ್ತು ರಾಜಿನಾಮೆ ನೀಡುವಂತೆ ಹಾಗೂ ಮರು ಪರೀಕ್ಷೆ ನಡೆಸುವಂತೆ ಆಗ್ರಹಿಸಿ ಭಾರತೀಯ ಜನತಾ ಪಕ್ಷದ ಕಾರ್ಯಕರ್ತರು ಮಂಗಳವಾರ ಬೃಹತ್ ಪ್ರತಿಭಟನಾ ರ್‍ಯಾಲಿ ನಡೆಸಿದರು.

ಡಾ.ಬಿ.ಆರ್. ಅಂಬೇಡ್ಕರ ವೃತ್ತದಿಂಧ ಆರಂಭಗೊಂಡ ಪ್ರತಿಭಟನೆ ಜಿಲ್ಲಾಧಿಕಾರಿಗಳ ಕಚೇರಿವರೆಗೆ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಸಾವಯವ ಬೀಜ ಪ್ರಮಾಣನ ಸಂಸ್ಥೆ ಮಾಜಿ ಅಧ್ಯಕ್ಷ ವಿಜುಗೌಡ ಪಾಟೀಲ ಮಾತನಾಡಿ, ತಿಕೋಟಾ ಪಟ್ಟಣದಲ್ಲಿ ಪೊಲೀಸ್ ನೇಮಕಾತಿಯಲ್ಲಿ ಅಕ್ರಮ ನಡೆದಿದೆ, ಇದರಿಂದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ಜೊತೆ ಸರ್ಕಾರ ಚೆಲ್ಲಾಟವಾಡಿದೆ, ಓಎಂಆರ್–ಪ್ರಶ್ನೆ ಪತ್ರಿಕೆ ಗೊಂದಲ ಬಗೆ ಹರಿಸುವುದನ್ನು ಬಿಟ್ಟು ಅದನ್ನು ಪ್ರಶ್ನಿಸಿರುವ ವಿದ್ಯಾರ್ಥಿಗಳ ಮೇಲೆ ಲಾಠಿ ಪ್ರಹಾರ ಮಾಡಿ ಅಮಾನವೀಯ ರೀತಿಯಲ್ಲಿ ವರ್ತಿಸಿದೆ, ಕಷ್ಟಪಟ್ಟು ಓದಿದ ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಅಕ್ರಮ ಕಂಡು ಬಂದರೆ ಅದನ್ನು ಪ್ರಶ್ನಿಸುವುದು ಅಪರಾಧವೇ ಎಂದು ಖಾರವಾಗಿ ಪ್ರಶ್ನಿಸಿದರು.

ಈ ವಿಷಯವಾಗಿ ಅಧಿಕಾರಿಗಳು ನಿಷ್ಪಕ್ಷಪಾತದಿಂದ ವರ್ತಿಸಬೇಕು ಹೊರತು ಆಡಳಿತಾರೂಢ ಪಕ್ಷದ ಅಣತಿಯಂತೆ ವರ್ತಿಸಬಾರದು, ವಿದ್ಯಾರ್ಥಿಗಳಿಗೆ ಕೂಡಲೇ ನ್ಯಾಯ ಒದಗಿಸಬೇಕಾದ ಕೆಲಸ ಮಾಡಬೇಕಿದ್ದು, ಕೂಡಲೇ ಈ ವಿಷಯದ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸಬೇಕು, ಶೀಘ್ರವೇ ಗೊಂದಲಕ್ಕೆ ಕಾರಣವಾದವರ ಮೇಲೆ ಕ್ರಮ ಕೈಗೊಳ್ಳಬೇಕು ಹಾಗೂ ಈ ಎಲ್ಲ ವಿಷಯಗಳಿಗೂ ನೈತಿಕ ಹೊಣೆ ಹೊತ್ತು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಕ್ಷೇತ್ರದ ಶಾಸಕರೂ ಆಗಿರುವ ಸಚಿವ ಡಾ.ಎಂ.ಬಿ. ಪಾಟೀಲರು ರಾಜಿನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ, ಮುಖಂಡರಾದ ಉಮೇಶ ಕಾರಜೋಳ, ವಿವೇಕ ಡಬ್ಬಿ, ಬಸವರಾಜ ಬೈಚಬಾಳ, ಗೋಪಾಲ ಘಟಕಾಂಬಳೆ, ಮಹೇಂದ್ರನಾಯಕ, ಶರತ್ ಬಿರಾದಾರ, ಚಿದಾನಂದ ಚಲವಾದಿ, ಪ್ರಕಾಶ ಮಿರ್ಜಿ, ಸಾಬು ಮಾಶ್ಯಾಳ, ಮಳುಗೌಡ ಪಾಟೀಲ, ಸಂದೀಪ ಪಾಟೀಲ, ಗುರು ತಳ್ವಾರ್ ರಾಜೇಶ ತಾವಸೆ, ಕೃಷ್ಣಾ ಗುನ್ನಾಳಕರ, ರಾಘವೇಂದ್ರ ಕಾಪಸೆ, ಆನಂದ ಮುಚ್ಚಂಡಿ, ವಿಜಯ ಜೋಶಿ, ಕಾಂತು ಶಿಂಧೆ, ಮಲ್ಲಮ್ಮ ಜೋಗೂರ, ಚಿನ್ನು ಚಿನಗುಂಡಿ, ಮಂಥನ ಗಾಯಕವಾಡ, ಮಹಾನಗರ ಪಾಲಿಕೆಯ ಉಪಮಾಪೌರರಾದ ಶ್ರೀಮತಿ ಸುಮಿತ್ರಾ ಜಾಧವ, ಬಸವರಾಜ ರೆಡ್ಡಿ, ಬಸವರಾ ಮನ್ನೂರ್, ವಿವೇಕ ತಾವರೇಗೇರಿ, ವಿಕಾಸ ಪದಕಿ, ಪ್ರಫುಲ್ ಪವಾರ ಪಾಲ್ಗೊಂಡಿದ್ದರು.

# ಲಾಟರಿ ಮುಖಾಂತರ ಅರ್ಹರಿಗೆ ನಿವೇಶನ ಹಂಚಿಕೆ: ಶಾಸಕ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ (ಜಿಡಿಎ) ವತಿಯಿಂದ ಡಾ. ಖಮರ–ಉಲ್–ಇಸ್ಲಾಂ ಹಾಗರಗಾ 50:50 ರೈತರ ಸಹಭಾಗಿತ್ವದ ವಸತಿ ಯೋಜನೆಯಡಿ ಲಾಟರಿ ಮುಖಾಂತರ ನಿವೇಶನ ಹಂಚಿಕೆ ಮಾಡುತ್ತಿರುವುದು ಶ್ಲಾಘನೀಯ ಎಂದು ಕಲಬುರಗಿ ಗ್ರಾಮೀಣ ಕ್ಷೇತ್ರದ ಶಾಸಕ ಬಸವರಾಜ ಮತ್ತಿಮೂಡ್ ಹೇಳಿದರು.

ಮಂಗಳವಾರ ನಗರದ ಗುಲಬರ್ಗಾ ವಿಶ್ವವಿದ್ಯಾಲಯದ ಡಾ. ಬಿ.ಆರ್ ಅಂಬೇಡ್ಕರ್ ಸಭಾಂಗಣದಲ್ಲಿ ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರ ವತಿಯಿಂದ ಡಾ.ಖಮರ–ಉಲ್–ಇಸ್ಲಾಂ ಹಾಗರಗಾ 50–50 ರೈತರ ಸಹಭಾಗಿತ್ವದ ವಸತಿ ಯೋಜನೆ, ಲಾಟರಿ ಮುಖಾಂತರ ನೀವೇಶನಗಳ ಹಂಚಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಈ ಹಿಂದೆ ನಿವೇಶನ ಹಂಚಿಕೆ ವಿಚಾರದಲ್ಲಿ ಸಾರ್ವಜನಿಕರಿಂದ ದೂರುಗಳು ಕೇಳಿಬರುತ್ತಿದ್ದವು. ಆದರೆ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್ ಅವರ ನೇತೃತ್ವದಲ್ಲಿ ಎಲ್ಲ ಅರ್ಹರಿಗೂ ಲಾಟರಿ ಮೂಲಕ ಪಾರದರ್ಶಕವಾಗಿ ನಿವೇಶನ ಕಲ್ಪಿಸಲಾಗುತ್ತಿದೆ.

ಸಾರ್ವಜನಿಕರ ಹಿತದೃಷ್ಟಿಯಿಂದ ನಡೆಯುವ ಅಭಿವೃದ್ಧಿ ಕೆಲಸಗಳಿಗೆ ತಮ್ಮ ಸಂಪೂರ್ಣ ಬೆಂಬಲವಿದೆ ಎಂದು ತಿಳಿಸಿದರು. ನಿವೇಶನ ಹಂಚಿಕೆಯಲ್ಲಿ ಮಾಜಿ ಸೈನಿಕರು, ಬಡವರು ಹಾಗೂ ವಸತಿ ರಹಿತರಿಗೆ ಸರ್ಕಾರಿ ನಿಯಮದಂತೆ ಸಬ್ಸಿಡಿ ಮತ್ತು ಆದ್ಯತೆ ನೀಡಬೇಕು. ಹಾಗರಗಾ ಬಡಾವಣೆಗೆ ಅಗತ್ಯವಿರುವ ರಸ್ತೆ, ಕುಡಿಯುವ ನೀರು ಸೇರಿದಂತೆ ಮೂಲಸೌಕರ್ಯ ಕಲ್ಪಿಸಲು ಈಗಾಗಲೇ ಟೆಂಡರ್ ಪ್ರಕ್ರಿಯೆ ನಡೆಯುತ್ತಿದ್ದು, ಶೀಘ್ರದಲ್ಲೇ ಕಾಮಗಾರಿ ಪೂರ್ಣಗೊಳ್ಳಲಿದೆ ಎಂದರು.

ಇದಕ್ಕೂ ಮುನ್ನ ಜಿಲ್ಲಾಧಿಕಾರಿ ಇಕ್ರಮ ಶರೀಫ್ ಅವರು ಸಸಿಗೆ ನೀರೆರೆಯುವ ಮೂಲಕ ಚಾಲನೆ ನೀಡಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್ ಅವರು ಮಾತನಾಡಿ, ಹಾಗರಗ 50:50 ಯೋಜನೆಯ ಮಾಜಿ ಸಚಿವ ಡಾ. ಖಮರ–ಉಲ್–ಇಸ್ಲಾಂ ಅವರ ಕನಸಿನ ಯೋಜನೆಯಾಗಿತ್ತು. ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಶಾಸಕಿ ಕನೀಜ್ ಫಾತಿಮಾ, ಅಲ್ಲಮಪ್ರಭು ಪಾಟೀಲ್ ಅವರ ಶ್ರಮದಿಂದಾಗಿ 2023ರ ನವೆಂಬರ್‌ನಲ್ಲಿ ಈ ಯೋಜನೆಗೆ ಕ್ಯಾಬಿನೆಟ್ ಅನುಮೋದನೆ ದೊರೆತಿದೆ. ಸಲ್ಲಿಕೆಯಾಗಿದ್ದ 6,253 ಅರ್ಜಿಗಳನ್ನು ಪರಿಶೀಲಿಸಿ, 117 ಎಕರೆ 5 ಗುಂಟೆ ವಿಸ್ತೀರ್ಣದಲ್ಲಿ ಲಭ್ಯವಿರುವ 769 ಸೈಟ್‌ಗಳನ್ನು ಯಾವುದೇ ಮಧ್ಯವರ್ತಿಗಳಿಲ್ಲದೆ ಅತ್ಯಂತ ಪಾರದರ್ಶಕವಾಗಿ ಲಾಟರಿ ಮೂಲಕ ಹಂಚಲಾಗುತ್ತಿದೆ ಎಂದು ಹೇಳಿದರು.

ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಸುಬ್ಬರಾವ್ ಪ್ರಾಸ್ತಾವಿಕವಾಗಿ ಮಾತನಾಡಿದ ಅವರು, ನಗರದಲ್ಲಿ ಅನಧಿಕೃತ ಬಡಾವಣೆಗಳು ನಿರ್ಮಾಣವಾಗಬಾರದು, ಅಧಿಕೃತ ಬಡಾವಣೆಗಳೇ ಬರಬೇಕು ಎಂಬ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರವು 50:50 ಯೋಜನೆ'ಯನ್ನು ಜಾರಿಗೆ ತಂದಿದ್ದೆ. ಒಟ್ಟು 117 ಎಕರೆ 5 ಗುಂಟೆ ಜಮೀನಿನಲ್ಲಿ ಈ ಯೋಜನೆಯನ್ನು ರೂಪಿಸಲಾಗಿದ್ದು, ಪ್ರಾಧಿಕಾರದ ವಶದಲ್ಲಿರುವ 769 ನಿವೇಶನಗಳನ್ನು ಸಾರ್ವಜನಿಕರಿಗೆ ಅತ್ಯಂತ ಪಾರದರ್ಶಕ ಹಾಗೂ ನ್ಯಾಯಯುತವಾಗಿ ಲಾಟರಿ ಮೂಲಕ ಹಂಚಿಕೆ ಮಾಡಲಾಗುತ್ತಿದೆ. ಸಾರ್ವಜನಿಕರು ಲಾಟರಿ ಪ್ರಕ್ರಿಯೆ ಮುಗಿದ ನಂತರ ಏನೇ ಸಮಸ್ಯೆ ಅಥವಾ ಸಂದೇಹಗಳಿದ್ದರೂ ಕಚೇರಿಯನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದು ಎಂದು ಹೇಳಿದರು.

**ಅರ್ಹ ಅರ್ಜಿದಾರರಿಗೆ ನಿವೇಶನಗಳ ಹಂಚಿಕೆ:** ಶಾಸಕರು, ಜಿಲ್ಲಾಧಿಕಾರಿ, ಪಾಲಿಕೆ ಆಯುಕ್ತರು ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳ ಸಮ್ಮುಖದಲ್ಲಿ ಸಂಪೂರ್ಣ ಪಾರದರ್ಶಕವಾಗಿ ನಿವೇಷನಗಳ ಲಾಟರಿ ಹಂಚಿಕೆ ಪ್ರಕ್ರಿಯೆ ನೆರವೇರಿತು. ಈ ಲಾಟರಿ ಪ್ರಕ್ರಿಯೆಯಲ್ಲಿ ಎಸ್‌ಟಿ ಮೀಸಲಾತಿ ವರ್ಗದಡಿ ಸಂಗೀತಾ ಶರಣಪ್ಪ ಮೇತ್ರೆ ಅರ್ಜಿ ಸಂಖ್ಯೆ 260 ಅವರಿಗೆ ನಿವೇಷನ ಸಂಖ್ಯೆ 555 ಹಂಚಿಕೆಯಾದರೆ, ಎಸ್‌ಸಿ ವರ್ಗದಡಿ ಪ್ರೇಮಲತಾ ಗಂಡ ದತ್ತು ಅರ್ಜಿ ಸಂಖ್ಯೆ 219 ಅವರಿಗೆ ನಿವೇಷನ ಸಂಖ್ಯೆ 551 ಲಭಿಸಿತು. ಹಾಗೆಯೇ ಸಾಮಾನ್ಯ ವರ್ಗದಲ್ಲಿ ಸಿದ್ಧಿಕ್ ಮಾಶಾಹುದ ಅಹಮದ್ ತಂದೆ: ಮೆಹಬೂಬ್ ಅಲಿ ಸಿದ್ಧಿಕಿ, ಅರ್ಜಿ ಸಂಖ್ಯೆ 228 ಅವರಿಗೆ ನಿವೇಷನ ಸಂಖ್ಯೆ 556 ಹಂಚಿಕೆಯಾಗಿದ್ದು, ಸೈಯದ್ ಯೂನಿಸ್ ಉಮೇರ್ ತಂದೆ: ಸೈಯದ್ ಮುಷ್ತಾಕ್, ಅರ್ಜಿ ಸಂಖ್ಯೆ 164 ಸಹ ಆಯ್ಕೆಯಾದರು. ಸಾರ್ವಜನಿಕ ಸಮ್ಮುಖದಲ್ಲಿ ನಡೆದ ಈ ಪಾರದರ್ಶಕ ಲಾಟರಿ ಹಂಚಿಕೆಗೆ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಪೂಜ್ಯ ಮಹಾಪೌರರಾದ ವರ್ಷ ರಾಜೀವ ಜಾನೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ್ ಸಿಂಧೆ, ನಗರಾಭಿವೃದ್ಧಿ ಪ್ರಾಧಿಕಾರ ಆಯುಕ್ತ ಶೈಲೇಂದ್ರ ಸಿಂಗ್, ಡಿ.ಎಫ್.ಒ ಆಶಿಶ್ ರೆಡ್ಡಿ, ಮಹಾನಗರ ಪಾಲಿಕೆಯ ಸದಸ್ಯರಾದ ಅಯಾಜ್ ಖಾನ್ (ಆರೋಗ್ಯ ಸ್ಥಾಯಿ ಸಮಿತಿ ಅಧ್ಯಕ್ಷರು), ರಿಯಾಜ್ ಅಹಮದ್, ಖುಸ್ರೋ ಜಾಗೀರ್ದಾರ್, ಲಿಯಾಕತ್ ಪಾಟೀಲ್, ಸಾಜಿದ್ ಕಲ್ಯಾಣಿ ಹಾಗೂ ಸಚಿನ್ ಶಿರವಾಳ್ ಸೇರಿದಂತೆ ವಿವಿಧ ಪಾಲಿಕೆ ಸದಸ್ಯರು ಹಾಗೂ ಅಧಿಕಾರಿಗಳು ವೇದಿಕೆಯಲ್ಲಿ ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. (RNINO:KARKAN/2011/48371)